ಬೀದರ | ಕಲಬುರಗಿ | ಯಾದಗಿರಿ | ರಾಯಚೂರು | ಕೊಪ್ಪಳ | ಬಳ್ಳಾರಿ | ಬಾಗಲಕೋಟೆ | ವಿಜಯಪುರ ಜಿಲ್ಲೆಗಳಲ್ಲಿ ಏಕಕಾಲಕ್ಕೆ ಪ್ರಸಾರ Postal Reg. No. BDR/054/2026-2027 Email: mallammanudi@gmail.com E-paper: www.mallammanudi.in

# ಮಲ್ಲಮ್ಮ ನುಡಿ

ಸತ್ಯಮೇವ ಜಯತೆ

ಪ್ರಾದೇಶಿಕ ಕನ್ನಡ ದಿನಪತ್ರಿಕೆ

ಸಂಪಾದಕರು: ರಮೇಶರೆಡ್ಡಿ | 9448 604450

Mallammanudi Regional News Paper | Editor: Ramesh Reddy | RNI NO:KARKAN/2011/48371

VOLUME - 13 ಸಂಪುಟ-13 | ISSUE - 124 ಸಂಚಿಕೆ- 124 | PAGE-8 ಪುಟ-8 | ಮಂಗಳವಾರ 24.06.2025 | RS.2/- ಬೆಲೆ 2/-

# ಸಿಎಂ ಅನುದಾನ ಎಂದು ಬಜೆಟ್‌ನಲ್ಲಿ ಇರಲ್ಲ: ಸಿದ್ಧರಾಮಯ್ಯ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:ಜೂ.23: ಸಿಎಂ ಅನುದಾನ ಅಂತ ಬಜೆಟ್‌ನಲ್ಲಿ ಇಲ್ಲ, ನಾವು ಗ್ರ್ಯಾಂಟ್ ಕೊಡುವುದೆಲ್ಲಾ ವಿಶೇಷ ಅನುದಾನ ಅಂತಿರುತ್ತದೆ. ಅವರು ಹೇಳುತ್ತಾರೆ, ಶಾಸಕ ರಾಜು ಕಾಗೆಯನ್ನ ಕರೆದು ಮಾತನಾಡ್ತಿನಿ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದರು.

ಜಿಲ್ಲೆಯ ಯರಗೇರಾದಲ್ಲಿ ಸರ್ಕಾರದ ವಿರುದ್ಧ ಮತ್ತೊಬ್ಬ ಕಾಂಗ್ರೆಸ್ ಶಾಸಕ ರಾಜು ಕಾಗೆ ಆಕ್ರೋಶ ವ್ಯಕ್ತಪಡಿಸಿರುವ ವಿಚಾರವಾಗಿ ಮಾತನಾಡಿದ ಅವರು, ಸಿಎಂ ಸಿದ್ದರಾಮಯ್ಯ ಅನುದಾನದ ವರ್ಕ್ ಆರ್ಡರ್ ಸಿಗುತ್ತಿಲ್ಲ ಎಂದು ಎರಡು ದಿನದಲ್ಲಿ ರಾಜೀನಾಮೆ ನೀಡಿದ್ದರೂ ಅಚ್ಚರಿಯಿಲ್ಲ ಎಂದಿದ್ದಾರೆ. ಅವರು ಹೇಳುತ್ತಾರೆ, ಅವರಿಗೇನು? ಸಿಎಂ ಅನುದಾನ ಅಂತಾ ಇದೀಯಾ? ರಾಜು ಕಾಗೆಯನ್ನು ಕರೆದು ಮಾತಾಡುತ್ತೇನೆ ಎಂದರು.

ಇನ್ನೂ ವಸತಿ ಸಚಿವರ ರಾಜೀನಾಮೆಗೆ ಕಾಂಗ್ರೆಸ್ ಶಾಸಕ ಬೇಳೂರು ಗೋಪಾಲಕೃಷ್ಣ ಆಗ್ರಹ ವಿಚಾರಕ್ಕೆ ಪ್ರತಿಕ್ರಿಯಿಸಿ, ಅದು ನನಗೆ ಗೊತ್ತಿಲ್ಲ. ಯಾವ ಸನ್ನಿವೇಶದಲ್ಲಿ ಹೇಳಿದ್ದಾರೋ ಗೊತ್ತಿಲ್ಲ. ಅದರ ಬಗ್ಗೆ ಮಾತನಾಡುತ್ತೇನೆ ಎಂದು ತಿಳಿಸಿದರು. ಇದೇ ವೇಳೆ ರಾಯಚೂರಿನಲ್ಲಿ ಆಯೋಜಿಸಿರುವ ಕಾರ್ಯಕ್ರಮಕ್ಕೆ ಬಿ.ಆರ್ ಪಾಟೀಲ್ ಅವರನ್ನ ಸಿಎಂ ಕರೆದರೂ ಬಂದಿಲ್ಲ ಎನ್ನುವ ವಿಚಾರವಾಗಿ ಮಾತನಾಡಿದ ಅವರು, ನಾನು ಅವರನ್ನು ಇಲ್ಲಿಗೆ ಕರೆದಿದ್ದೆ, ಆದರೆ ಅವರು ಆಯೋಜಕರು ನನ್ನನ್ನು ಕರೆದಿಲ್ಲ ಬರಲ್ಲ ಎಂದರು. ಜೂ.25ಕ್ಕೆ ಭೇಟಿ ಮಾಡುತ್ತೇನೆ ಎಂದಿದ್ದಾರೆ ಎಂದು ಹೇಳಿದರು.



ಸಚಿವ ಹೆಚ್‌ಕೆ ಪಾಟೀಲ್ ಪತ್ರ ಬರೆದ ವಿಚಾರವಾಗಿ ಮಾತನಾಡಿದ ಅವರು, ಅದು ನಮ್ಮ ಕಾಲದಲ್ಲಿ ನಡೆದಿಲ್ಲ. ವಿಶೇಷ ಕೋರ್ಟ್ ಮಾಡಿ ತ್ವರಿತಗತಿಯಲ್ಲಿ ಇತ್ಯರ್ಥ ಮಾಡಿ ಎಂದಿದ್ದಾರೆ. ಅಕ್ರಮ ಗಣಿಗಾರಿಗೆ ನಡೆಯುತ್ತಿರುವುದಕ್ಕಾಗಿ ಪಾದಯಾತ್ರೆ ಮಾಡಿದ್ದಾರೆ. ಲೋಕಾಯುಕ್ತ ಸಂತೋಷ ಹೆಗಡೆ ವರದಿ ಆಧರಿಸಿ ನಾನು ಅಸೆಂಬ್ಲಿ ಅಲ್ಲಿ ಪ್ರಸ್ತಾಪಿಸಿದ್ದೆ. ಆದರೆ ಅಂದಿನ ಸರ್ಕಾರದಿಂದ ಸರಿಯಾದ ಉತ್ತರ ಬರಲಿಲ್ಲ. ಹೀಗಾಗಿ ನಡೆದುಕೊಂಡೇ ಬರುತ್ತೇನೆ ಅಂತ ಬಳ್ಳಾರಿಗೆ ಪಾದಯಾತ್ರೆ ಮಾಡಿದ್ದೆವು ಎಂದರು.

ದೆಹಲಿಗೆ ತೆರಳಿ ರಾಷ್ಟ್ರಪತಿ ಹಾಗೂ ಪ್ರಧಾನಿಯನ್ನ ಭೇಟಿ ಮಾಡಬೇಕು ಅಂದುಕೊಂಡಿದ್ದೀನಿ. 16ನೇ ಹಣಕಾಸಿನ ಸಂಬಂಧ ಬಿಲ್‌ಗಳು ಬಾಕಿಯಿವೆ. ಅವುಗಳ ಬಗ್ಗೆ ಮಾತನಾಡಲು ನಾಳೆ ರಾಷ್ಟ್ರಪತಿ ಸಮಯ ಕೊಟ್ಟಿದ್ದಾರೆ ಎಂದು ತಿಳಿಸಿದರು.

ರಾಜ್ಯಕ್ಕೆ ಪ್ರಹ್ಲಾದ್ ಜೋಶಿ ಏನೆಲ್ಲಾ ಮಾಡಿದ್ದಾರಂತೆ? ಅವರನ್ನು ಪವರ್ ಫುಲ್ ಅಂತಾರೆ, ಪ್ರಧಾನಿಗೆ ಬಹಳ ಹತ್ತಿರವಿದ್ದಾರೆ. 15ನೇ ಹಣಕಾಸಿನಲ್ಲಿ 5,435 ಕೋಟಿ ರೂ. ವಿಶೇಷ ಅನುದಾನ ಶಿಫಾರಸು ಮಾಡಿದ್ದರು. ಶಿಫಾರಸು ಮಾಡಿ ಆಮೇಲೆ ಏನು ಮಾಡಿದರು? ಕರ್ನಾಟಕದ ಬಗ್ಗೆ ಮಾತನಾಡಲು ಅವರಿಗೆ ಯಾವ ನೈತಿಕ ಹಕ್ಕಿದೆ? ಬಿಜೆಪಿಯ ಒಬ್ಬ ಸಂಸದನಾದರೂ ಮಾತನಾಡಿದ್ದಾರಾ? 11,495 ಕೋಟಿ ರೂ. ನಮಗೆ ನಷ್ಟವಾಗಿದೆ. 14 ರಿಂದ 15ನೇ ಹಣಕಾಸು ಯೋಜನೆಗೆ ಲೆಕ್ಕ ಹಾಕಿದರೆ, ರಾಜ್ಯಕ್ಕೆ 89 ಸಾವಿರ ಕೋಟಿ ರೂ. ನಷ್ಟವಾಗಿದೆ ಎಂದು ಜೋಶಿ ವಿರುದ್ಧ ಕಿಡಿಕಾರಿದರು.

## ವಿರೋಧ ಪಕ್ಷಗಳನ್ನು ಕೀಳಾಗಿ ಕಂಡರೆ ಜನ ಸಹಿಸುವುದಿಲ್ಲ: ಮಲ್ಲಿಕಾರ್ಜುನ ಖರ್ಗೆ

ಮಲ್ಲಮ್ಮ ನುಡಿ ವಾರ್ತೆ ರಾಯಚೂರು:ಜೂ.23: ಪ್ರಧಾನಿ ನರೇಂದ್ರ ಮೋದಿ ಅವರು ವಿರೋಧ ಪಕ್ಷಗಳನ್ನು 'ಕ್ಷುಲ್ಲಕವಾಗಿ' ನೋಡುತ್ತಿದ್ದಾರೆ ಎಂದು ಸೋಮವಾರ ಆರೋಪಿಸಿದ ಕಾಂಗ್ರೆಸ್ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ, ಪಹಲ್ಗಾಮ್ ಭಯೋತ್ಪಾದಕ ದಾಳಿಯ ನಂತರ ಕರೆಯಲಾದ ಸರ್ವಪಕ್ಷ ಸಭೆಗಳಿಗೆ ಪ್ರಧಾನಿಯವರ ಗೈರುಹಾಜರಿಯನ್ನು ಟೀಕಿಸಿದ್ದಾರೆ.

ಇಲ್ಲಿ ಸಾರ್ವಜನಿಕ ಸಭೆಯನ್ನುದ್ದೇಶಿಸಿ ಮಾತನಾಡಿದ ಖರ್ಗೆ, ಪ್ರಧಾನಿಯವರ ಗೈರು ವಿರೋಧ ಪಕ್ಷದ ಬಗ್ಗೆ ಅವರಿಗಿರುವ ಅಲ್ಪ ಗೌರವವನ್ನು ಪ್ರತಿಬಿಂಬಿಸುತ್ತದೆ. ದೇಶವು ಕಠಿಣ ಪರಿಸ್ಥಿತಿಯ ಮೂಲಕ ಸಾಗುತ್ತಿದೆ. ಇತ್ತೀಚೆಗೆ, ಪಾಕಿಸ್ತಾನಿ ಭಯೋತ್ಪಾದಕರು ಪಹಲ್ಗಾಮ್‌ನಲ್ಲಿ




26 ಜನರನ್ನು ಕೊಂದರು. ಇದಕ್ಕೆ ಪ್ರತಿಯಾಗಿ, ಭಾರತೀಯ ಸಶಸ್ತ್ರ ಪಡೆಗಳು ಪಾಕಿಸ್ತಾನದೊಳಗಿನ ಉಗ್ರ ನೆಲೆಗಳ ಮೇಲೆ ದಾಳಿ ನಡೆಸಿ ಭಯೋತ್ಪಾದಕರನ್ನು ನಿರ್ಮೂಲನೆ ಮಾಡಿವೆ' ಎಂದು ಹೇಳಿದರು.

'ಇಡೀ ರಾಷ್ಟ್ರ ಮತ್ತು ಸಶಸ್ತ್ರ ಪಡೆಗಳು ದೇಶವನ್ನು ರಕ್ಷಿಸಲು ಒಗ್ಗಟ್ಟಿನಿಂದ ಕೆಲಸ ಮಾಡುತ್ತಿರುವಾಗ, ಕೆಲವು ವ್ಯಕ್ತಿಗಳು ವೈಯಕ್ತಿಕ ಶ್ರೇಯಸ್ಸು ಪಡೆಯಲು ಪ್ರಯತ್ನಿಸಿದ್ದಾರೆ. ಅವರು ಸೇನೆಯಲ್ಲಿ ಕ್ಯಾಪ್ಟನ್, ಕರ್ನಲ್ ಅಥವಾ ಲೆಫ್ಟಿನೆಂಟ್ ಕರ್ನಲ್ ಆಗಿ ಸೇವೆ ಸಲ್ಲಿಸಿದ್ದರೆ, ದೇಶಕ್ಕಾಗಿ ಉತ್ತಮ ಕೆಲಸ ಮಾಡಿದ್ದಕ್ಕಾಗಿ ಮತ್ತು ಹೋರಾಡಿದ್ದಕ್ಕಾಗಿ ನಾವು ಅವರನ್ನು ಪ್ರಶಂಸಿಸುತ್ತಿದ್ದೆವು. ಆದರೆ ಅದು ಹಾಗಲ್ಲ' ಎಂದು ಖರ್ಗೆ ಯಾರನ್ನೂ ನೇರವಾಗಿ ಹೆಸರಿಸದೆ ಹೇಳಿದರು.

ಖರ್ಗೆ ಅವರು ಮುಖ್ಯಮಂತ್ರಿ ಸಿದ್ದರಾಮಯ್ಯ, ಕಾಂಗ್ರೆಸ್ ಸಚಿವರು ಮತ್ತು ಶಾಸಕರೊಂದಿಗೆ ರಾಯಚೂರಿನಲ್ಲಿದ್ದರು. ಅಲ್ಲಿ ಅವರು ಹಲವಾರು ಯೋಜನೆಗಳಿಗೆ ಶಂಕುಸ್ಥಾಪನೆ ನೆರವೇರಿಸಿದರು ಮತ್ತು ರಾಯಚೂರು ವಿಶ್ವವಿದ್ಯಾಲಯದ ಮರುನಾಮಕರಣ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಪಹಲ್ಗಾಮ್

(2ನೇ ಪುಟ ನೋಡಿ)

## ನನ್ನ ಹೇಳಿಕೆಗೆ ಬದ್ಧನಾಗಿದ್ದೇನೆ: ಬಿಆರ್ ಪಾಟೀಲ್

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ:ಜೂ.23: ನಾನು ಕದನ ಭೂಮಿಯಿಂದ ಓಡಿ ಹೋಗುವವನಲ್ಲ. ನನ್ನ ಹೇಳಿಕೆಗೆ ನಾನು ಬದ್ಧನಾಗಿದ್ದೇನೆ. ರಾಜೀವ್ ಗಾಂಧಿ ವಸತಿ ನಿಗಮದ ಹಗರಣದ ಆರೋಪದಿಂದ ಹಿಂದೆ ಸರಿಯಲ್ಲ ಎಂದು ಕಲಬುರಗಿಯಲ್ಲಿ ಶಾಸಕ ಬಿಆರ್ ಪಾಟೀಲ್ ಸ್ಪಷ್ಟಪಡಿಸಿದರು.



ಈ ಕುರಿತು ಸೋಮವಾರ ಮಾಧ್ಯಮಗಳ ಜೊತೆಗೆ ಮಾತನಾಡಿ, ನಾನು ಹೇಳಿರುವ ಹೇಳಿಕೆ ಸರಿಯಾಗಿದೆ ಎಂದು ರಾಜು ಕಾಗೆ ಸಹ ಹೇಳಿದ್ದಾರೆ. ನನಗೂ ಮೊದಲೇ ಆರು ತಿಂಗಳ ಹಿಂದೆಯೇ ಶಾಸಕಾಂಗ ಸಭೆಯಲ್ಲಿ ಏನು ಹೇಳಬೇಕು ಅದನ್ನು ಆಗಲೇ ಹೇಳಿದ್ದಾರೆ. ಇನ್ನೂ ಹಲವರು ಇದರ ಬಗ್ಗೆ ಮಾತನಾಡುವವರಿದ್ದಾರೆ ಎನ್ನುವ ಮೂಲಕ ಪರೋಕ್ಷವಾಗಿ ಕಾಂಗ್ರೆಸ್‌ನಲ್ಲಿ ಹಲವು ಶಾಸಕರು ಅಸಮಾಧಾನಗೊಂಡಿದ್ದಾರೆ ಎಂದು ಹೇಳಿದರು. ಎಂವೈ ಪಾಟೀಲ್ ಏನೋ ಉಲ್ಟಾ ಹೊಡಿದ್ದಿದ್ದಾರೆ ಅಂತೇ, ತಮ್ಮ ಕ್ಷೇತ್ರದದಲ್ಲಿ ಏನು ಆಗಿಲ್ಲವೆಂದು ಹೇಳಿದ್ದಾರಂತೆ. ಆದರೆ, ಅವರ ಕ್ಷೇತ್ರದ ಜನರು ನನಗೆ ಕರೆ ಮಾಡಿದ್ದಾರೆ ಎಂದು ದೂರವಾಣಿ ಕರೆ ಮಾಡಿದವರ ಲಿಸ್ಟ್ ಓದಿದರು. ಇದೇ ವೇಳೆ ಬಿ.ಆರ್.ಪಾಟೀಲ್ ಪಕ್ಕದಲ್ಲಿದ್ದ ಕಲಬುರಗಿ ದಕ್ಷಿಣ ಶಾಸಕ ಅಲ್ಲಮಪ್ರಭು ಪಾಟೀಲ್ ಸಹ ಅಸಮಧಾನ ವ್ಯಕ್ತಪಡಿಸಿ, ನನಗೂ ಮಾಹಿತಿ ಇಲ್ಲದೆ, ನನ್ನ ಕ್ಷೇತ್ರದಲ್ಲೂ ಕೆಆರ್‌ಐಡಿಎಲ್ ಕೈಗೊಳ್ಳುವ ಕಾಮಗಾರಿ ಉದ್ಘಾಟನೆಯಾಗುತ್ತಿವೆ ಎಂದರು. ಸಿಎಂ ಸಿದ್ದರಾಮಯ್ಯ ನನ್ನ ಆತ್ಮೀಯ ಸ್ನೇಹಿತ. ಹಿಂದೇ ಯಾವ ರೀತಿ ಪ್ರೀತಿಯಿಂದ ಇದ್ದ-ರೋ, ಈಗಲೂ ಅದೇ ರೀತಿಯ ಪ್ರೀತಿಯಿಂದ ಇದ್ದಾರೆ. ನನಗೆ ಕರೆ ಮಾಡಿ, ರಾಯಚೂರು ಬರಲು ಹೇಳಿದರು. ಆದರೆ, ಅಲ್ಲಿ ಆಹ್ವಾನವಿಲ್ಲ ನಾನು ಬರಲ್ಲ ಎಂದು ಹೇಳಿದ್ದೇನೆ. ಅದಕ್ಕೆ, ದೆಹಲಿ ಹೋಗಿ ಬರುತ್ತೇನೆ. ಆಗ ಬಂದು ಭೇಟಿ ಆಗಲು ಹೇಳಿದ್ದಾರೆ. ಜೂನ್ 25ರಂದು ಸಿಎಂ ಸಿದ್ದರಾಮಯ್ಯ ಅವರನ್ನ ಭೇಟಿ ಮಾಡುತ್ತೇನೆ ಎಂದು ತಿಳಿಸಿದರು.

## ಐದು ಕಳವು ಪ್ರಕರಣ: ಐವರ ಬಂಧನ, 14 ಬೈಕ್ ಜಪ್ತಿ



ಮಲ್ಲಮ್ಮನುಡಿ ವಾರ್ತೆ ಬೀದರ. ಜೂ. 23 : ಜಿಲ್ಲೆಯ ನಾಲ್ಕು ಪೊಲೀಸ್ ಠಾಣೆಗಳ ವ್ಯಾಪ್ತಿಯಲ್ಲಿ ನಡೆದ ಐದು ಸ್ವತ್ತಿನ ಕಳವು ಪ್ರಕರಣಗಳನ್ನು ಭೇದಿಸಿರುವ ಪೊಲೀಸರು, ಐದು ಜನರನ್ನು ಬಂಧಿಸಿ ?5.95 ಲಕ್ಷ ಮೌಲ್ಯದ 14 ಬೈಕ್‌ಗಳನ್ನು ಜಪ್ತಿ ಮಾಡಿದ್ದಾರೆ.

ಔರಾದ್ (ಬಿ) ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ?95 ಸಾವಿರ ಮೌಲ್ಯದ ಎರಡು ಬೈಕ್ ಜಪ್ತಿ ಮಾಡಿ ಒಬ್ಬ ಆರೋಪಿಯನ್ನು ಬಂಧಿಸಲಾಗಿದೆ. ಮನ್ನಳ್ಳಿ ಪೊಲೀಸ್ ಠಾಣೆ ವ್ಯಾಪ್ತಿಯಲ್ಲಿ ?1 ಲಕ್ಷ ಮೌಲ್ಯದ ಎರಡು ಬೈಕ್ ಹಾಗೂ ಇಬ್ಬರು ಆರೋಪಿಗಳ ಬಂಧಿಸಲಾಗಿದೆ. ಬಗದಲ್ ಠಾಣೆ ಪೊಲೀಸರು ಒಬ್ಬ ಆರೋಪಿಯನ್ನು ಬಂಧಿಸಿ, ಒಂದು ದ್ವಿಚಕ್ರ ವಾಹನ ಜಪ್ತಿ ಮಾಡಿದ್ದಾರೆ.

ನೂತನ ನಗರ ಠಾಣೆ ಪೊಲೀಸರು ?3.50 ಲಕ್ಷ ಬೆಲೆಬಾಳುವ 9 ಬೈಕ್ ಜಪ್ತಿ ಮಾಡಿ, ಒಬ್ಬ ಆರೋಪಿಯನ್ನು ನ್ಯಾಯಾಂಗ ಬಂಧನಕ್ಕೆ ಕಳಿಸಿದ್ದಾರೆ. 'ಎಐ ಕ್ಯಾಮೆರಾ

ತಂತ್ರಾಂಶದ ಸಹಾಯದಿಂದ ಕಳವು ಪ್ರಕರಣಗಳನ್ನು ಭೇದಿಸಲು ಸಾಧ್ಯವಾಗಿದೆ' ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಪ್ರದೀಪ್ ಗುಂಟಿ ತಿಳಿಸಿದ್ದಾರೆ.

## ಜನತೆಗೆ ನೀಡಿದ ವಚನದಂತೆ ನಡೆದ ಸರ್ಕಾರ ನಮ್ಮದು: ಸಿಎಂ ಸಿದ್ಧರಾಮಯ್ಯ



ಮಲ್ಲಮ್ಮನುಡಿ ವಾರ್ತೆ ರಾಯಚೂರ ಜೂ.23: ರಾಜ್ಯ ಸರ್ಕಾರವು ಜನತೆಗೆ ವಚನ ಕೊಟ್ಟಂತೆ ನಡೆದುಕೊಂಡ ಸರ್ಕಾರ ನಮ್ಮದು. ಜನರ ಹೊಟ್ಟೆ ತುಂಬಿಸುವ ಅನ್ನಭಾಗ್ಯ ಯೋಜನೆ, ಜನರ ಜೀವನಕ್ಕೆ ಆರ್ಥಿಕ ಸಹಾಯ ಮಾಡುವ ಗೃಹಲಕ್ಷ್ಮಿ, ಗೃಹಜ್ಯೋತಿ ಸೇರಿದಂತೆ ಮಹತ್ವದ ಎಲ್ಲ ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಅನುಷ್ಠಾನಗೊಳಿಸುತ್ತಿದ್ದೇವೆ ಎಂದು ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ಹೇಳಿದರು.

ರಾಯಚೂರು ತಾಲೂಕಿನ ಯರಗೇರಾ ಗ್ರಾಮದ ಶ್ರೀ ರಂಗನಾಥ ಸ್ವಾಮಿ ದೇವಸ್ಥಾನದ ಹತ್ತಿರ ಜೂನ್ 23ರಂದು ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್ ಹಾಗೂ ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ ಇವರ ವತಿಯಿಂದ ನಡೆದ ಬುಡಕಟ್ಟು

(2ನೇ ಪುಟ ನೋಡಿ)

## ಅನೇಕ ಕಾಂಗ್ರೆಸ್ ಶಾಸಕರು ಬಿಜೆಪಿ ಸೇರಲು ಸಜ್ಜಾಗಿದ್ದಾರೆ: ಜಗದೀಶ್ ಶೆಟ್ಟರ್

ಮಲ್ಲಮ್ಮ ನುಡಿ ವಾರ್ತೆ ಬೆಳಗಾವಿ:ಜೂ.23: ಆಡಳಿತಾರೂಢ ಕಾಂಗ್ರೆಸ್ ನಲ್ಲಿ ಅಸಮಾಧಾನ ಭುಗಿಲೆಳುತ್ತಿರುವಂತೆಯೇ ರಾಜು ಕಾಗೆ ಸೇರಿದಂತೆ ಹಲವು ಶಾಸಕರು ಬಿಜೆಪಿ ಸೇರಲು ಸಿದ್ಧತೆ ನಡೆಸಿದ್ದಾರೆ ಎಂದು ಸಂಸದ ಜಗದೀಶ್ ಶೆಟ್ಟರ್ ಸೋಮವಾರ ಹೇಳಿದರು.

ಬೆಳಗಾವಿಯಲ್ಲಿ ಮಾಧ್ಯಮಗಳ ಜೊತೆ ಮಾತನಾಡಿದ ಅವರು, ಕಾಂಗ್ರೆಸ್ ಆಂತರಿಕ ಸಂಘರ್ಷ ದಿನದಿಂದ ದಿನಕ್ಕೆ ಹೆಚ್ಚಾಗುತ್ತಿದ್ದು,



ಸರ್ಕಾರ ಪತನವಾಗುವ ಕಾಲ ಸನ್ನಿಹಿತವಾಗುತ್ತಿದೆ ಎಂದರು.

ಸಿಎಂ ಬದಲಾವಣೆ ಆಗ್ತಾರೆ ಎಂಬುದು ಗೊತ್ತಿಲ್ಲ. ಆದರೆ ಸರ್ಕಾರ ಮಾತ್ರ ಬಹಳ ದಿನ ಇರಲ್ಲ. ನಾವು ಆಪರೇಷನ್ ಕಮಲ ಮಾಡಲ್ಲ. ಆದರೆ ಹತಾಶ ಕಾಂಗ್ರೆಸ್ ಶಾಸಕರು ತಾವಾಗಿಯೇ ಬಿಜೆಪಿ ಸೇರಲಿದ್ದಾರೆ. ನಾವು ಸೆಳೆಯುವ ಪ್ರಯತ್ನ ಮಾಡುತ್ತಿಲ್ಲ. ಅವರೇ ಬರ್ತಾರೆ ಇದಕ್ಕೆ ಆಪರೇಷನ್

(2ನೇ ಪುಟ ನೋಡಿ)

## ಶೀಘ್ರದಲ್ಲೇ ಪೋಲಿಸ್ ಇಲಾಖೆಯ ಖಾಲಿ ಹುದ್ದೆಗಳ ಭರ್ತಿ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.23-ಪೋಲಿಸ್ ಇಲಾಖೆಯಲ್ಲಿ ಖಾಲಿಯಿರುವ ಹುದ್ದೆಗಳನ್ನು ಶೀಘ್ರದಲ್ಲಿಯೇ ಭರ್ತಿ ಮಾಡಲಾಗುವುದು ಎಂದು ಗೃಹ ಸಚಿವ ಜಿ.ಪರಮೇಶ್ವರ ಹೇಳಿದರು. ಸೋಮವಾರ ನಗರಕ್ಕೆ ಆಗಮಿಸಿದ ಸಂದರ್ಭದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಪಿಎಸ್‌ಐ ನೇಮಕಾತಿ ಹಗರಣದ ನಂತರ ಕಳೆದ ಐದು ವರ್ಷಗಳಿಂದ ಖಾಲಿ ಇರುವ ಹುದ್ದೆಗಳನ್ನು ಭರ್ತಿ ಮಾಡಿರಲಿಲ್ಲ. ಈಗ ಭರ್ತಿ ಕಾರ್ಯಕ್ಕೆ ಮುಂದಾಗಿರುವುದಾಗಿ ತಿಳಿಸಿದರು. 1 ಸಾವಿರ ಪಿಎಸ್‌ಐ ಹುದ್ದೆಗಳು ಖಾಲಿ ಇದ್ದು, ಈಗಾಗಲೇ 500 ಜನರ ನೇಮಕಾತಿ ಪ್ರಕ್ರಿಯೆ ನಡೆದಿದೆ. ಕೆಲವರು ತರಬೇತಿಯಲ್ಲಿದ್ದಾರೆ. ಇಲಾಖೆಯಲ್ಲಿರುವ



ಖಾಲಿ ಹುದ್ದೆಗಳನ್ನು ಭರ್ತಿ ಮಾಡಲು ಹಂತ ಹಂತವಾಗಿ ಕ್ರಮ ಕೈಗೊಳ್ಳಲಾಗುತ್ತಿದೆ ಎಂದ ಸಚಿವರು, ನೂತನ ಪೊಲೀಸ್ ಠಾಣೆಗಳನ್ನು ನಿರ್ಮಿಸಲು ಮುಂದಿನ ಬಜೆಟ್‌ನಲ್ಲಿ ಅನುದಾನವನ್ನು ಮೀಸಲಿಡಲಾಗುವುದು. ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಚೆನ್ನಾಗಿದ್ದು ಯಾವುದೇ ತೊಂದರೆ ಆಗಿಲ್ಲ ಎಂದರು. ಶಾಸಕ ಬಿ.ಆರ್.ಪಾಟೀಲ ಮಾಡಿದ ವಸತಿ ಹಗರಣದ ಕುರಿತು ಪ್ರತಿಕ್ರಿಯಿಸಿದ ಪರಮೇಶ್ವರ, ಅವರ ಆರೋಪ ನಿಜವಾಗಿದ್ದರೆ ದೂರು ನೀಡಲಿ, ಎಫ್‌ಐಆರ್ ಹಾಕಿ ಕ್ರಮಕೈಗೊಳ್ಳುತ್ತೇವೆ. ಸರ್ಕಾರಕ್ಕೆ ಮುಜುಗರವಾಗುವಂತಹ ಕೆಲಸ ಯಾರೂ ಮಾಡಬಾರದು ಎಂದು ಹೇಳಿದರು. ಜಿಲ್ಲೆಯಲ್ಲಿ ಕೆಲವಡೆ ಗ್ಯಾಂಬ್ಲಿಂಗ್ ನಡೆಯುತ್ತಿರುವುದರ ಕುರಿತು ಕೇಳಲಾದ ಪ್ರಶ್ನೆಗೆ, ಈ ಬಗ್ಗೆ ಸೂಕ್ತ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ಭರವಸೆ ನೀಡಿದರು. ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ, ಶಾಸಕರಾದ ಎಚ್.ವಾಯ್.ಮೇಟಿ, ಬಿ.ಬಿ.ಚಿಮ್ಮನಕಟ್ಟಿ, ಕಾಂಗ್ರೆಸ್ ಜಿಲ್ಲಾಧ್ಯಕ್ಷ ಎಸ್.ಜಿ.ನಂಜಯ್ಯನಮಠ ಇದ್ದರು.

## ರಾಜ್ಯ ಸರ್ಕಾರದ ಭ್ರಷ್ಟಾಚಾರ ಒಬ್ಬೊಬ್ಬರೇ ಬಾಯಿ ಬಿಡ್ತಾರೆ : ಬಿಎಸ್‌ವೈ

ಮಲ್ಲಮ್ಮ ನುಡಿ ವಾರ್ತೆ

ಬೆಂಗಳೂರು:ಜೂ.23: ಕಾಂಗ್ರೆಸ್ ಸರ್ಕಾರದ ಭ್ರಷ್ಟಾಚಾರದ ಬಗ್ಗೆ ಒಬ್ಬೊಬ್ಬರಾಗಿಯೇ ಮುಂದಿನ ದಿನಗಳಲ್ಲಿ ಬಾಯಿ ಬಿಡುತ್ತಾರೆ ಎಂದು ಮಾಜಿ ಸಿಎಂ ಬಿಎಸ್ ಯಡಿಯೂರಪ್ಪ ಸರ್ಕಾರದ ವಿರುದ್ಧ ವಾಗ್ದಾಳಿ ನಡೆಸಿದರು.

ಸರ್ಕಾರದ ಭ್ರಷ್ಟಾಚಾರದ ಬಗ್ಗೆ ಶಾಸಕರಾದ ಬಿ.ಆರ್.ಪಾಟೀಲ್ ಮತ್ತು ರಾಜು ಕಾಗೆ ಆರೋಪಕ್ಕೆ ಬಿಜೆಪಿ ಕಚೇರಿಯಲ್ಲಿ ಪ್ರತಿಕ್ರಿಯೆ ನೀಡಿದ ಅವರು, ಬಿ.ಆರ್.ಪಾಟೀಲ್ ಅವರು ಮನೆಗಳನ್ನು ಕೊಡುವ ಸಮಯದಲ್ಲಿ ದುಡ್ಡು ಕೊಡದೇ, ಲಂಚ ಕೊಡದೇ ಏನು ಕೆಲಸ ಆಗುವುದಿಲ್ಲ ಎಂದು ಗುರುತರದ ಆರೋಪ ಮಾಡಿದ್ದಾರೆ. ಸಿಎಂ ಸಿದ್ದರಾಮಯ್ಯ ಕರೆದರೆ ವಾಸ್ತವದ ಸ್ಥಿತಿ ಹೇಳುವುದಾಗಿ ಹೇಳಿದ್ದಾರೆ. ಸಿಎಂ ಅವರೇ ಬಿ.ಆರ್.ಪಾಟೀಲ್ ಅವರ ಬಾಯಿ ಮುಚ್ಚಿಸುವ ಆತಂಕ ನಮಗಿದೆ ಎಂದು ಅನುಮಾನ ವ್ಯಕ್ತಪಡಿಸಿದರು.

ಒಂದನೇ ಪುಟದಿಂದ

## ಜನ ಸಹಿಸುವುದಿಲ್ಲ: ಮಲ್ಲಿಕಾರ್ಜುನ ಖರ್ಗೆ

ಭಯೋತ್ಪಾದಕ ದಾಳಿಯ ಕುರಿತು ಸರ್ವಪಕ್ಷ ಸಭೆಯನ್ನು ಕರೆಯುವಂತೆ ಒತ್ತಾಯಿಸಿದ ಮೊದಲ ಪಕ್ಷ ಕಾಂಗ್ರೆಸ್ ಎಂದು ರಾಜ್ಯಸಭೆಯ ವಿರೋಧ ಪಕ್ಷದ ನಾಯಕರು ಹೇಳಿದರು.

'ಎರಡು ಬಾರಿ ಸಭೆ ಕರೆಯಲಾಗಿತ್ತು. ಆದರೆ, ಪ್ರಧಾನಿಯವರು ಎರಡೂ ಸಂದರ್ಭಗಳಲ್ಲಿ ಹಾಜರಾಗಲು ವಿಫಲರಾದರು. ಅವರು ಏಕೆ ಹಾಜರಾಗಲಿಲ್ಲ ಎಂದು ನಾನು ಅವರನ್ನು ಕೇಳಲು ಬಯಸುತ್ತೇನೆ. ಕನ್ಯಾಕುಮಾರಿಯಿಂದ ಕಾಶ್ಮೀರದವರೆಗಿನ ನಾಯಕರು ಸಭೆಯಲ್ಲಿ ಭಾಗವಹಿಸಲು ಪ್ರಮುಖ ಕಾರ್ಯಕ್ರಮಗಳನ್ನು ಬಿಟ್ಟು ಬಂದಿದ್ದರು. ಆದರೆ, ಪ್ರಧಾನಿಯವರು ದೇಶದಲ್ಲಿದ್ದರೂ ಹಾಜರಾಗದಿರಲು ನಿರ್ಧರಿಸಿದರು' ಎಂದು ತಿಳಿಸಿದರು.

'ಸರ್ವಪಕ್ಷ ಸಭೆಯಲ್ಲಿ ಹಾಜರಾಗುವ ಬದಲಿಗೆ, ಮೋದಿ ಅವರು ಬಿಹಾರ ಚುನಾವಣೆಯ ಪ್ರಚಾರದಲ್ಲಿ ನಿರತರಾಗಿದ್ದರು. ಅದರ ಅರ್ಥವೇನು? ದೇಶ ಮತ್ತು ಸೈನಿಕರು ಒಂದು ಕಡೆ ಹೋರಾಡುತ್ತಿದ್ದರೆ, ಮತ್ತೊಂದೆಡೆ ಪ್ರಧಾನಿ ನರೇಂದ್ರ ಮೋದಿಯವರು ಪ್ರಚಾರ ಮಾಡಲು ಆಯ್ಕೆ ಮಾಡಿಕೊಂಡರು. ಇದು ಸೂಕ್ತವಲ್ಲ. ಅಂತಹ ವರ್ತನೆ ಒಳ್ಳೆಯದಕ್ಕೆ ಸೂಚನೆ ನೀಡುವುದಿಲ್ಲ' ಎಂದು ಖರ್ಗೆ ಹೇಳಿದರು.

ನೀವು ವಿರೋಧ ಪಕ್ಷಗಳನ್ನು ಕೀಳಾಗಿ ಕಾಣುವಂತೆ ಮಾಡಲು ಪ್ರಯತ್ನಿಸಿದರೆ, ನಾಯಕರು, ಜನರು ಮತ್ತು ವಿಶೇಷವಾಗಿ ಈ ದೇಶದ ಯುವಕರು ಅದನ್ನು ಸಹಿಸುವುದಿಲ್ಲ. ಕಾಂಗ್ರೆಸ್ ಪಕ್ಷದ ಭರವಸೆಗಳನ್ನು ದೇಶದಾದ್ಯಂತ ಪರಿಣಾಮಕಾರಿಯಾಗಿ ಜಾರಿಗೆ ತರಲಾಗುತ್ತಿದೆ ಎಂದು ಅವರು ಹೇಳಿದರು.

'ಕೆಲವು ಅಸೂಯೆ ಪಟ್ಟ ನಾಯಕರು ಮತ್ತು ರಾಜಕೀಯ ಪಕ್ಷಗಳು ನಮ್ಮ ಭರವಸೆಗಳನ್ನು ದುರ್ಬಲಗೊಳಿಸಲು ಪ್ರಯತ್ನಿಸುತ್ತಿವೆ. ಆದರೆ, ಅವರು ತಮ್ಮ ಪ್ರಯತ್ನಗಳಲ್ಲಿ ಯಶಸ್ವಿಯಾಗುವುದಿಲ್ಲ. ಮಹಿಳೆಯರು ಮತ್ತು ಇತರ ನಾಗರಿಕರಿಗೆ ನೇರವಾಗಿ ಪ್ರಯೋಜನವನ್ನು ನೀಡಿದ ಕಲ್ಯಾಣ ಕಾರ್ಯಕ್ರಮಗಳನ್ನು ಟೀಕಿಸುವುದು ಮತ್ತು ಮಾನಹಾನಿ ಮಾಡುವುದರಿಂದ ಜನರನ್ನು ಮೆಚ್ಚಿಸಲು ಸಾಧ್ಯವಿಲ್ಲ' ಎಂದರು.

## ಸರ್ಕಾರ ನಮ್ಮದು: ಸಿಎಂ ಸಿದ್ಧರಾಮಯ್ಯ

ಸಾಂಸ್ಕೃತಿಕ ಉತ್ಸವ ಹಾಗೂ 371(ಜೆ) ದಶಮಾನೋತ್ಸವ ಮತ್ತು 936.00 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕಾಮಗಾರಿಗಳ ಅಡಿಗಲ್ಲು ಹಾಗೂ ಉದ್ಘಾಟನೆ ನೆರವೇರಿಸಿ ಅವರು ಮಾತನಾಡಿದರು.

ಗ್ಯಾರಂಟಿ ಯೋಜನೆಗಳಿಗೆ ನಾವು ಬಜೆಟನಲ್ಲಿ ಅನುದಾನ ಮೀಸಲಿರಿಸಿ ಯೋಜನೆಗಳನ್ನು ಅನುಷ್ಠಾನಗೊಳಿಸುತ್ತಿದ್ದೇವೆ. ಅಧಿಕಾರಕ್ಕೆ ಬಂದು ಎರಡು ವರ್ಷದ ಅವಧಿಯಲ್ಲಿ ನಾವು

ಅಂದಾಜು 90,000 ಕೋಟಿ ರೂ.ಗಳನ್ನು ಗ್ಯಾರಂಟಿ ಯೋಜನೆಗಳಿಗೆ ಖರ್ಚು ಮಾಡಿದ್ದೇವೆ. ಚುನಾವಣಾ ಸಂದರ್ಭದಲ್ಲಿ ರಾಜ್ಯ ಸರ್ಕಾರವು 560ಕ್ಕೂ ಹೆಚ್ಚು ಭರವಸೆ ನೀಡಿದ ಪೈಕಿ ನಾವು ಈ ಎರಡು ವರ್ಷಗಳ ಅವಧಿಯಲ್ಲಿ ಈಗಾಗಲೇ 242 ಭರವಸೆಗಳನ್ನು ಈಡೇರಿಸಿದ್ದೇವೆ. ಇನ್ನು ಮೂರ ವರ್ಷದಲ್ಲಿ ಇನ್ನುಳಿದ ಭರವಸೆಗಳನ್ನು ಸಹ ಈಡೇರಿಸುತ್ತೇವೆ ಎಂದು ತಿಳಿಸಿದರು.

ಕಲ್ಯಾಣ ಕರ್ನಾಟಕದ ಭಾಗವು ಶಿಕ್ಷಣ, ಆರೋಗ್ಯ ಕ್ಷೇತ್ರದಲ್ಲಿ ಹಿಂದುಳಿದಿದೆ. ಇದು ಸರಿ ಆಗಬೇಕು. ರಾಜ್ಯ ಸರ್ಕಾರವು ಕಲ್ಯಾಣ ಕರ್ನಾಟಕ ಪ್ರದೇಶಾಭಿವೃದ್ಧಿ ಮಂಡಳಿಯಿಂದ ನಾನಾ ಅಭಿವೃದ್ಧಿ ಕಾಮಗಾರಿಗಳಿಗೆ ಸಾವಿರಾರು ಕೋಟಿ ರೂ ಗಳನ್ನು ನೀಡುತ್ತಿದೆ. ರಾಯಚೂರ ಸೇರಿದಂತೆ ಕಲ್ಯಾಣ ಕರ್ನಾಟಕ ಭಾಗದ ಪ್ರದೇಶಕ್ಕೆ ಶಿಕ್ಷಣ, ಆರೋಗ್ಯ, ಉದ್ಯೋಗ ಕ್ಷೇತ್ರಗಳಿಗೆ ಹೆಚ್ಚಿನ ಪ್ರಮಾಣದಲ್ಲಿ ಅನುದಾನ ಕೊಡಬೇಕು ಎಂದು ಕೆಕೆಆರ್‌ಡಿಬಿ ಅಧ್ಯಕ್ಷರಿಗೆ ತಿಳಿಸಿದ್ದಾಗಿ ಮುಖ್ಯಮಂತ್ರಿಗಳು ತಿಳಿಸಿದರು.

ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್ ಅವರು ಮಾತನಾಡಿ, ಮಹತ್ವದ 371 (ಜೆ) ಜಾರಿ ಮೂಲಕ, ಹಿಂದುಳಿದ ಭಾಗದ ಜನತೆಗೆ ಅನುಕೂಲ ಕಲ್ಪಿಸಲು ಶ್ರಮಿಸಿದ ಹಿರಿಯರಾದ ಮಲ್ಲಿಕಾರ್ಜುನ ಖರ್ಗೆ ಸೇರಿದಂತೆ ನಮ್ಮ ಭಾಗದ ಅನೇಕ ಮಹನಿಯರು ನಮಗೆ ಕಾಮಧೇನು ಮತ್ತು ಕಲ್ಪವೃಕ್ಷ ಆಗಿದ್ದಾರೆ. 371 (ಜೆ) ಜಾರಿಯಿಂದಾಗಿ ಕಲ್ಯಾಣ ಕರ್ನಾಟಕ ಭಾಗದಲ್ಲಿ ನಮ್ಮ ಸಾಧನೆ ಅನನ್ಯವಾಗಿದೆ. 371(ಜೆ) ವಿಶೇಷ ಸ್ಥಾನಮಾನ ಜಾರಿಯಿಂದಾಗಿ ಈ ಭಾಗದಲ್ಲಿ ಎಲ್ಲರಿಗೂ ರಕ್ಷಣೆ ಸಿಗುವಂತಾಗಿದೆ. ಈ ಮೀಸಲು ಸೌಕರ್ಯ ಪಡೆದು ಈ ಭಾಗದ 9 ಸಾವಿರ ಮಕ್ಕಳು ಡಾಕ್ಟರ್ ಆಗಿದ್ದಾರೆ. ಇದೇ ರೀತಿ ಅನೇಕರು ನೌಕರಿ ಗಿಟ್ಟಿಸಿದ್ದಾರೆಂಬುದು ಸಣ್ಣ ಸಾಧನೆಯಲ್ಲ. ಈ ಭಾಗದ ಎಲ್ಲ ಹುದ್ದೆಗಳಲ್ಲಿ ಶೇ.75 ಹುದ್ದೆಗಳು ನಮ್ಮ ಭಾಗದ ಜನತೆಗೆ ದಕ್ಕಿದೆ. ಇದು ಬಹುದೊಡ್ಡ ಸಾಮಾಜಿಕ ಬದಲಾವಣೆ ಆಗಿದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ಮಾತನಾಡಿ, ರಾಜ್ಯದಲ್ಲಿ ನಮ್ಮ ಸರ್ಕಾರವು 5 ಗ್ಯಾರಂಟಿ ಯೋಜನೆಗಳನ್ನು ಸಮರ್ಪಕವಾಗಿ ಜಾರಿ ಮಾಡಿ ಜನಪರವಾಗಿ ಕೆಲಸ ಮಾಡುತ್ತಿದೆ. ರಾಯಚೂರ ಜಿಲ್ಲೆಯಲ್ಲಿ ಎರಡು ನದಿಗಳು ಹರಿದಿವೆ. ಆದಾಗ್ಯೂ ರಾಯಚೂರ ಗ್ರಾಮೀಣ ಪ್ರದೇಶದ ನನ್ನ ರೈತಾಪಿ ಜನರಿಗೆ ನೀರು ಸಿಗುತ್ತಿಲ್ಲ. ಮೇಲಿನ ನೀರು ನಮಗು ಸಹ ನ್ಯಾಯಯುತವಾಗಿ ಸಿಗಬೇಕು. ರಾಯಚೂರ ಗ್ರಾಮೀಣ ಕ್ಷೇತ್ರದಲ್ಲಿ ಈಗಾಗಲೇ ನೀರು ಎತ್ತುವ ಎರಡು ಯೋಜನೆಗಳು ಅನುಷ್ಠಾನವಾಗುತ್ತಿವೆ. ಇನ್ನು ಮೂರು ನೀರು ಎತ್ತುವ ನೀರಾವರಿ ಯೋಜನೆಗಳಿಗೆ ಡಿಪಿಆರ್ ಆಗಿದೆ ಎಂದರು.

ನಮ್ಮ ಭಾಗಕ್ಕೆ 371(ಜೆ) ಮೀಸಲು ಸ್ಥಾನಮಾನ ಲಭ್ಯವಾಗಿದ್ದರಿಂದಾಗಿ ನಮ್ಮ ಭಾಗದ ಜನರು ಉದ್ಯೋಗವಕಾಶ ಪಡೆಯುವಂತಾಗಿದೆ. ಇದರ ಸ್ಮರಣಾರ್ಥ ದಶಮಾನೋತ್ಸವ ಸಂಚಿಕೆ ಪ್ರಕಟಿಸಿ ಬಿಡುಗಡೆ ಮಾಡಿದ್ದೇವೆ. ರಾಯಚೂರ ಗ್ರಾಮೀಣ ಪ್ರದೇಶಕ್ಕೆ ಸೂಕ್ತ ನ್ಯಾಯಸಿಗುವ ನಿಟ್ಟಿನಲ್ಲಿ ಈ ಪ್ರದೇಶವನ್ನು ತಾಲೂಕು ಕೇಂದ್ರ ಎಂದು ಘೋಷಿಸಬೇಕು. ದೇವಸಗೂರನ್ನು ನಗರಸಭೆಯಾಗಿ ಮೇಲ್ದರ್ಜೆಗರಿಸಬೇಕು ಎಂದು ಶಾಸಕರು ಇದೆ ವೇಳೆ ಮುಖ್ಯಮಂತ್ರಿಗಳಲ್ಲಿ ಮನವಿ ಮಾಡಿದರು.

ಫಲಾನುಭವಿಗಳಿಗೆ ಹಕ್ಕುಪತ್ರ ವಿತರಣೆ: ಕಾರ್ಯಕ್ರಮದಲ್ಲಿ ವಿವಿಧ ಯೋಜನೆಗಳಡಿ ಫಲಾನುಭವಿಗಳಿಗೆ ಮುಖ್ಯಮಂತ್ರಿಗಳು ಹಾಗೂ ಸಚಿವರು, ಶಾಸಕರು ಸಾಂಕೇತಿಕವಾಗಿ ಸೌಲಭ್ಯ ವಿತರಿಸಿದರು. ಭೂ ಒಡೆತನ ಯೋಜನೆಯ ಹಕ್ಕುಪತ್ರ, ಪ್ರೇರಣಾ ಯೋಜನೆಯ ಯೋಜನಾ ಮಂಜೂರಾತಿ ಆದೇಶ ಪತ್ರ ಸೇರಿದಂತೆ ನಾನಾ ಸೌಕರ್ಯಗಳ ಮಂಜೂರಾತಿ ಆದೇಶ ಪತ್ರಗಳನ್ನು ವಿತರಿಸಲಾಯಿತು.

ಸಮಾರಂಭದಲ್ಲಿ ವಿರೋಧ ಪಕ್ಷದ ನಾಯಕರು ಹಾಗೂ ಸಂಸದರಾದ (ರಾಜ್ಯ ಸಭೆ) ಡಾ.ಮಲ್ಲಿಕಾರ್ಜುನ ಖರ್ಗೆ, ಕಾನೂನು, ನ್ಯಾಯ, ಮಾನವ ಹಕ್ಕುಗಳ, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಹಾಗೂ ಪ್ರವಾಸೋದ್ಯಮ ಇಲಾಖೆಯ ಸಚಿವರಾದ ಡಾ.ಹೆಚ್.ಕೆ.ಪಾಟೀಲ, ಸಮಾಜ ಕಲ್ಯಾಣ ಇಲಾಖೆ ಸಚಿವರಾದ ಡಾ.ಹೆಚ್.ಸಿ.ಮಹದೇವಪ್ಪ, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಚಿವರಾದ ಎನ್.ಎಸ್. ಭೋಸರಾಜು, ಉನ್ನತ ಶಿಕ್ಷಣ ಇಲಾಖೆ ಸಚಿವರಾದ ಡಾ.ಎಂ.ಸಿ. ಸುಧಾಕರ್, ಲೋಕೋಪಯೋಗಿ ಇಲಾಖೆ ಸಚಿವರಾದ ಸತೀಶ್ ಜಾರಕಿಹೊಳಿ, ಇಂಧನ ಸಚಿವರಾದ ಕೆ.ಜೆ.ಜಾರ್ಜ್,

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಇಲಾಖೆ ಸಚಿವರಾದ ಶರಣಬಸಪ್ಪ ದರ್ಶನಾಪೂರು, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರಾದ ಶಿವರಾಜ ತಂಗಡಗಿ, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ

ಬಾದರ್ಲಿ, ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಅಧ್ಯಕ್ಷರಾದ ಡಾ.ಅಜಯ್ ಧರ್ಮಸಿಂಗ್, ಪಂಚ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಕಲಬುರಗಿ ವಿಭಾಗದ ಉಪಾಧ್ಯಕ್ಷರಾದ ಎಸ್.ಆರ್. ಮೆಹರೋಜ್‌ಖಾನ್, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ಯಾದಗಿರಿ ಶಾಸಕರಾದ ಚೆನ್ನಾರೆಡ್ಡಿ ಪಾಟೀಲ ತನ್ನೂರ, ವಿಧಾನ ಪರಿಷತ್ ಶಾಸಕರಾದ ಡಾ.ಚಂದ್ರಶೇಖರ ಪಾಟೀಲ್, ಶರಣಗೌಡ ಅ. ಪಾಟೀಲ್ ಬಯ್ಯಾಪೂರ, ಮುಖಂಡರಾದ ಅಮರೇಗೌಡ ಪಾಟೀಲ ಬಯ್ಯಾಪುರ,

ತುಂಗಭದ್ರಾ ಯೋಜನೆಯ ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹಸನಸಾಬ್ ನಬಿಸಾಬ್ ದೋಟಿಹಾಳ, ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಯ ಅಧ್ಯಕ್ಷರಾದ ಮಲ್ಲಿಕಾರ್ಜುನ ಗೌಡ, ರಾಯಚೂರು ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ರಾಜಶೇಖರ ರಾಮಸ್ವಾಮಿ, ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪಾಮಯ್ಯ ಮುರಾರಿ, ರಾಯಚೂರು ತಾಲ್ಲೂಕ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷರಾದ ಪವನ್ ಕಿಶೋರ್ ಪಾಟೀಲ್, ಯರಗೇರಾ ಗ್ರಾಮ ಪಂಚಾಯತ್ ಅಧ್ಯಕ್ಷರಾದ ಶ್ರೀಮತಿ ಮಹಾದೇವಿ ಗಂ. ಭೀಮೇಶ ನಾಯಕ್, ಆರ್ಥಿಕ ಇಲಾಖೆ, ಉನ್ನತ ಶಿಕ್ಷಣ ಇಲಾಖೆ, ಪರಿಶಿಷ್ಟ ಪಂಗಡಗಳ ಕಲ್ಯಾಣ ಇಲಾಖೆ, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮ ಸೇರಿದಂತೆ ವಿವಿಧ ಇಲಾಖೆಯ ಉನ್ನತ ಅಧಿಕಾರಿಗಳು, ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ

ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ. ಯಾದಗಿರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಪೃಥ್ವಿಕ್ ಶಂಕರ್, ಅಪರ ಜಿಲ್ಲಾಧಿಕಾರಿಗಳಾದ ಶಿವಾನಂದ, ಲಿಂಗಸೂರ ಸಹಾಯಕ ಆಯುಕ್ತರಾದ ಬಸವಣ್ಣೆಪ್ಪ ಕಲಶೆಟ್ಟಿ, ತಹಸೀಲ್ದಾರ ಸುರೇಶ ವರ್ಮಾ, ಮುಖಂಡರಾದ ಬಸವರಾಜ ಪಾಟೀಲ ಇಟಗಿ, ಜಯಂತರಾವ್ ಪತಂಗೆ,

ಮಲ್ಲಿಕಾರ್ಜುನಗೌಡ ತಲಮಾರಿ, ನಾಗೇಂದ್ರಪ್ಪ ಮಟಮಾರಿ, ರಜಾಕ್ ಉಸ್ತಾದ್, ಅಸ್ಲಂ ಪಾಶಾ, ಚನ್ನಬಸು ನಾಯಕ ಸೇರಿದಂತೆ ಇತರರು ಇದ್ದರು.ವಿಧಾನ ಪರಿಷತ್ ಶಾಸಕರಾದ ಎ. ವಸಂತಕುಮಾರ ಅವರು ಸ್ವಾಗತಿಸಿದರು. ರಾಯಚೂರ ಸಹಾಯಕ ಆಯುಕ್ತರಾದ ಗಜಾನನ ಬಾಳೆ ಅವರು ವಂದಿಸಿದರು.

## ಸೇರಲು ಸಜ್ಜಾಗಿದ್ದಾರೆ: ಜಗದೀಶ್ ಶೆಟ್ಟರ್

ಕಮಲ ಅಂತಾರೆ ಎಂದು ಹೇಳಿದರು.

ಹಿರಿಯ ಶಾಸಕರು ಬಹಿರಂಗವಾಗಿಯೇ ಸಿಡಿದೇಳುವುದರೊಂದಿಗೆ ಕಾಂಗ್ರೆಸ್ ನಲ್ಲಿ ಆಂತರಿಕ ಕಚ್ಚಾಟ ಹೆಚ್ಚಾಗಿದೆ. ರಾಜ್ಯ ಸರ್ಕಾರದಲ್ಲಿ ಭ್ರಷ್ಟಾಚಾರ ತುಂಬಿ ತುಳುಕುತ್ತಿದೆ. ಸರ್ಕಾರದಲ್ಲಿ ಯಾವುದೇ ಕೆಲಸ ಆಗ್ತಿಲ್ಲ. ಸರ್ಕಾರ ದೀವಾಳಿ ಆಗಿದೆ ಆರ್ಥಿಕ ಪರಿಸ್ಥಿತಿ ಚಿಂತಾಜನಕವಾಗಿದೆ. ಯಾವ ಕೆಲಸ ಆಗ್ತಿಲ್ಲ ಅಂತಾ ಆಡಳಿತ ಪಕ್ಷದವರು ಹೇಳ್ತಿದ್ದಾರೆ ಎಂದರು.

ಮೂಗಿಗೆ ತುಪ್ಪ ಒರೆಸುವ ಕೆಲಸ ಸಿದ್ದರಾಮಯ್ಯ ಮಾಡ್ತಿದ್ದಾರೆ. ಟೆಂಡರ್ ಮಾಡೋದು ವರ್ಕ್ ಆರ್ಡರ್ ಕೊಡುವುದಿಲ್ಲ. ರಾಜು ಕಾಗೆ, ಬಿಆರ್ ಪಾಟೀಲ್ ಹೇಳಿಕೆ ಸರಿ ಇದೆ. ಸಿದ್ದರಾಮಯ್ಯ, ಡಿ.ಕೆ ಶಿವಕುಮಾರ್ ನೈತಿಕ ಹೊಣೆ ಹೊತ್ತು ರಾಜೀನಾಮೆ ಕೊಡಬೇಕು ಎಂದು ಶೆಟ್ಟರ್ ಒತ್ತಾಯಿಸಿದರು.

## ರಾಯಚೂರ ಗ್ರಾಮೀಣ ಕ್ಷೇತ್ರದ ಸಿಎಂ ಕಾರ್ಯಕ್ರಮಕ್ಕೆ ಸಹಸ್ರಾರು ಜನ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಜೂ 23 : ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಜೂನ್ 23ರಂದು ನಡೆದ ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಪ್ರತಿಯೊಂದು ಹಳ್ಳಿಯ ಜನರು ತಂಡೋಪ ತಂಡವಾಗಿ ಸೇರಿದ್ದರು.ಸಿಎಂ ಕಾರ್ಯಕ್ರಮದಲ್ಲಿ ಭಾಗಿಯಾಗಲು ಉತ್ಸುಕರಾಗಿ ಜನರು ಬೆಳಗ್ಗೆಯಿಂದಲೇ ವಾಹನಗಳನ್ನು ಏರಿ ಯರಗೇರಾ ಗ್ರಾಮದತ್ತ ಬರುವ ದೃಶ್ಯಗಳು ಎಲ್ಲೆಡೆ ಕಾಣಿಸಿತು.ಸಾರಿಗೆ ಬಸ್ಸುಗಳು, ಕ್ರೂಷರ್, ಮಿನಿಬಸ್, ಟಿಪ್ಪರ್, ಮಿನಿಲಾರಿ ಏರಿ ಜನರು ಯರಗೇರಾ ಗ್ರಾಮದತ್ತ ಆಗಮಿಸುತ್ತಿದ್ದರು. ರಾಯಚೂರ ಗ್ರಾಮೀಣ ಕ್ಷೇತ್ರ ಸೇರಿದಂತೆ, ರಾಯಚೂರ ನಗರ, ಸುತ್ತಲಿನ ಜಿಲ್ಲೆಗಳಾದ ಯಾದಗಿರಿ, ಕಲಬುರಗಿ, ಬೀದರ, ಬಳ್ಳಾರಿ, ವಿಜಯನಗರ ಮತ್ತು ಕೊಪ್ಪಳ ಜಿಲ್ಲೆಯ ಜನರು ಸಹ ಕಾರ್ಯಕ್ರಮಕ್ಕೆ ಆಗಮಿಸಿ, ಅದ್ದೂರಿಯಾಗಿ ನಡೆದ ಕಾರ್ಯಕ್ರಮಕ್ಕೆ ಸಾಕ್ಷಿಯಾದರು. ಪೂರ್ವ ನಿಗದಿಯಂತೆ ಬೆಂಗಳೂರಿನಿಂದ ವಾಯುಮಾರ್ಗವಾಗಿ ಹೊರಟ ಮುಖ್ಯಮಂತ್ರಿಗಳು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಹೆಲಿಪ್ಯಾಡಗೆ ಆಗಮಿಸಿ, ವಿಶ್ವವಿದ್ಯಾಲಯದ ಆವರಣದಲ್ಲಿ ನಡೆದ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ನಂತರ ಯರಗೇರಾ ಗ್ರಾಮದಲ್ಲಿನ ಮುಖ್ಯವೇದಿಕೆಯತ್ತ ಆಗಮಿಸುತ್ತಿದ್ದಂತೆ ಅಭಿಮಾನಿಗಳು ಸಿಳ್ಳೆ ಹಾಕಿ ಸಂಭ್ರಮಿಸಿ ಸ್ವಾಗತಿಸಿದರು.

ಅಚ್ಚುಕಟ್ಟಾದ ವ್ಯವಸ್ಥೆ: ಕಾರ್ಯಕ್ರಮದಲ್ಲಿ ಕಿಕ್ಕಿರಿದು ಸೇರಿದ್ದ ಜನತೆಗೆ ಯಾವುದೇ ತೊಂದರೆಯಾಗದಂತೆ ಮುಖ್ಯ ವೇದಿಕೆಯ ಬಳಿಯಲ್ಲಿ ಊಟ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಲಾಗಿತ್ತು.ಸರಕಾರಿ ಬಸ್‌ಗಳು ಸೇರಿದಂತೆ ಹೆಚ್ಚಿನ ಖಾಸಗಿ ವಾಹನಗಳ ಮೂಲಕ ಜನತೆಗೆ ಉತ್ತಮವಾದ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿತ್ತು.ಶಾಸಕರಿಂದ ಅಭಿನಂದನೆ: ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಅಂದಾಜು 936.00 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕಾಮಗಾರಿಗಳ ಅಡಿಗಲ್ಲು ಹಾಗೂ ಉದ್ಘಾಟನೆ, ರಾಯಚೂರಲ್ಲಿನ ವಿಶ್ವವಿದ್ಯಾಲಯಕ್ಕೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ನಾಮಕರಣ, ಬುಡಕಟ್ಟು ಸಾಂಸ್ಕೃತಿಕ ಉತ್ಸವ ಸೇರಿದಂತೆ ವಿವಿಧ ಕಾರ್ಯಕ್ರಮಗಳಿಗೆ ನಿರೀಕ್ಷೆಗೂ ಮೀರಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕಾರ್ಯಕ್ರಮ ಯಶಗೊಳಿಸಿದ್ದಕ್ಕೆ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ತಮ್ಮ ಕ್ಷೇತ್ರದ ಜನತೆಗೆ ಕೃತಜ್ಞತೆಗಳನ್ನು ತಿಳಿಸಿದರು. ಎಲ್ಲ ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ವಿವಿಧ ಮಂಡಳಿ, ಸಮಿತಿಗಳು, ನಿಗಮಗಳ ಅಧ್ಯಕ್ಷರು, ರಾಯಚೂರ ಸೇರಿದಂತೆ ವಿವಿಧ ಗ್ರಾಮಗಳ ಅಧ್ಯಕ್ಷರು ಮತ್ತು ಸದಸ್ಯರಿಗೆ, ಎಲ್ಲ ಗ್ರಾಮಸ್ಥರಿಗೆ, ಅಭಿಮಾನಿಗಳಿಗೆ ಅಭಿನಂದನೆ ತಿಳಿಸಿದರು.

## ಫಲಿತಾಂಶ ಕೊಡಿ ಇಲ್ಲವೇ ಕೆಲಸ ಬಿಡಿ: ಶಿಕ್ಷಕರಿಗೆ ಶಾಸಕ ಪ್ರಭು ಚವ್ಹಾಣ ತಾಕೀತು



ಮಲ್ಲಮ್ಮ ನುಡಿ ವಾರ್ತೆ

ಔರಾದ:ಜೂ.23:ಶಿಕ್ಷಣದ ಸುಧಾರಣೆಗೆ ನಾನು ಎಲ್ಲ ರೀತಿಯ ಪ್ರಯತ್ನಗಳನ್ನು ಮಾಡುತ್ತಿದ್ದೇನೆ. ಆದರೂ ಫಲಿತಾಂಶ ಕುಸಿಯುತ್ತಿದೆ. ಈ ಬಾರಿ ಎಲ್ಲ ಶಾಲೆಗಳಲ್ಲಿ ಉತ್ತಮ ಫಲಿತಾಂಶ ಬರುವ ನಿರೀಕ್ಷೆಹೊಂದಿದ್ದೇನೆ. ಉತ್ತಮ ಫಲಿತಾಂಶ ಕೊಡಿ ಇಲ್ಲವಾದರೆ ತಾವಾಗಿಯೇ ಕೆಲಸ ಬಿಟ್ಟು ಹೋಗಿ ಎಂದು ಮಾಜಿ ಸಚಿವರು ಹಾಗೂ ಶಾಸಕರಾದ ಪ್ರಭು ಬಿ.ಚವ್ಹಾಣ ಅವರು ಅಧಿಕಾರಿಗಳು ಮತ್ತು ಶಿಕ್ಷಕರಿಗೆ ಖಾರವಾಗಿ ಹೇಳಿದರು.

ಶಾಲಾ ಶಿಕ್ಷಣ ಇಲಾಖೆಯಿಂದ ಜೂನ್ 23ರಂದು ಪಟ್ಟಣದ ತಾಲ್ಲೂಕು ಪಂಚಾಯತ ಕಛೇರಿ ಸಭಾಂಗಣದಲ್ಲಿ ಜರುಗಿದ ಸರ್ಕಾರಿ, ಅನುದಾನಿತ ಮತ್ತು ಅನುದಾನ ರಹಿತ ಪ್ರೌಢ ಶಾಲಾ ಮುಖ್ಯಶಿಕ್ಷಕರ ಸಭೆ ಮತ್ತು ಶೈಕ್ಷಣಿಕ ಕಾರ್ಯಾಗಾರದಲ್ಲಿ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಶಿಕ್ಷಕರ ಮೇಲಿನ ಗೌರವದಿಂದಾಗಿ ಇಷ್ಟು ದಿನ ಸುಮ್ಮನಿದ್ದೆ. ಶಿಕ್ಷಕರು ಪ್ರತಿ ಬಾರಿ ಉತ್ತಮ ಫಲಿತಾಂಶ ಕೊಡುವುದಾಗಿ ಕೇವಲ ಆಶ್ವಾಸನೆಗಳನ್ನು ಮಾತ್ರ ನೀಡುತ್ತಾ ಬರುತ್ತಿದ್ದೀರಿ. ಆದರೆ ಫಲಿತಾಂಶ ಮಾತ್ರ ಸುಧಾರಿಸಿಲ್ಲ. ಹಿಂದೆ ಶೇ.82 ಇದ್ದ ಫಲಿತಾಂಶ ಶೇ.55ಕ್ಕೆ ಕುಸಿದಿರುವುದು ಮುಜುಗರದ ಸಂಗತಿ. ಈ ಬಾರಿ ಯಾವುದೇ ಕಾರಣಕ್ಕೂ ಸುಮ್ಮನೆ ಬಿಡುವುದಿಲ್ಲ. ಅಗತ್ಯವೆನಿಸಿದರೆ ರಸ್ತೆಗಿಳಿದು ಪ್ರತಿಭಟನೆ ಮಾಡುವುದಕ್ಕೂ ಸಿದ್ದ. ಶಿಕ್ಷಣಕ್ಕಾಗಿ ಯಾವ ಮಟ್ಟಕ್ಕಾದರೂ ಇಳಿಯುತ್ತೇನೆ ಎಂದರು.

ಶಾಲೆಗಳಿಗೆ ಕಟ್ಟಡ, ಕುಡಿಯುವ ನೀರು, ಶೌಚಾಲಯ, ಕಂಪೌಂಡ್‌ನಂತಹ ಸೌಕರ್ಯಗಳನ್ನು ಒದಗಿಸುವುದು ನನ್ನ ಜವಾಬ್ದಾರಿ. ಇಂತಹ ಬೇಡಿಕೆಗಳಿದ್ದರೆ ನನ್ನ ಬಳಿಗೆ ಬನ್ನಿ ಕಲ್ಪಿಸುತ್ತೇನೆ. ಗುಣಮಟ್ಟದ ಶಿಕ್ಷಣ, ಉತ್ತಮ ಫಲಿತಾಂಶ ಕೊಡುವುದು ನಿಮ್ಮ ಜವಾಬ್ದಾರಿ. ಯಾವುದೇ ರೀತಿಯ ಸಮಸ್ಯೆಯಿರಲಿ ನಾನು ನಿಮ್ಮ ಜೊತೆಗಿದ್ದೇನೆ. ಆದರೆ ನೀವು ಕರ್ತವ್ಯದಲ್ಲಿ ಯಾವುದೇ ರೀತಿಯ ಲೋಪವಾಗದಂತೆ ಕೆಲಸ ಮಾಡಬೇಕೆಂದು ಮುಖ್ಯ ಶಿಕ್ಷಕರಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.

ಬಹುತೇಕ ಖಾಸಗಿ ಶಾಲೆಗಳಲ್ಲಿ ನುರಿತ ಶಿಕ್ಷಕರು ಇರುವುದಿಲ್ಲ. ಆದರೂ ಉತ್ತಮ ಫಲಿತಾಂಶ ಬರುತ್ತದೆ. ಸರ್ಕಾರಿ ಶಾಲೆಗಳಲ್ಲಿ ಎಲ್ಲರೂ ಅರ್ಹತೆ ಹೊಂದಿರುವ ಶಿಕ್ಷಕರೇ ಇದ್ದರೂ ಫಲಿತಾಂಶ ಬಾರದಿರುವುದು ಬೇಸರ ಮೂಡಿಸುತ್ತಿದೆ. ಎಲ್ಲ ಶಿಕ್ಷಕರು ಸಮಯಕ್ಕೆ ಸರಿಯಾಗಿ ಶಾಲೆಗೆ ಬರಬೇಕು. ವೇಳಾಪಟ್ಟಿಯಂತೆ ಪಾಠ ಮಾಡಬೇಕು. ಕಲಿಕೆಯಲ್ಲಿ ಹಿಂದುಳಿದ ವಿದ್ಯಾರ್ಥಿಗಳಿಗೆ ವಿಶೇಷ ತರಗತಿಗಳನ್ನು ತೆಗೆದುಕೊಳ್ಳಬೇಕು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಾಂತವಾಗಿದ್ದರೆ ನಡೆಯುವುದಿಲ್ಲ. ಪದೇ ಪದೇ ಗೈರಾಗುವವರು, ಸರಿಯಾಗಿ ಬೋಧನೆ ಮಾಡದ ಶಿಕ್ಷಕರ ವಿರುದ್ಧ ಯಾವುದೇ ಮುಲಾಜಿಲ್ಲದೇ ಶಿಸ್ತು ಕ್ರಮ ಜರುಗಿಸಬೇಕು. ಇಂಥವುಗಳು ನಡೆದರೆ ಎಲ್ಲರೂ ಎಚ್ಚರಿಕೆಯಿಂದ ಕೆಲಸ ಮಾಡುತ್ತಾರೆ. ತಾವು ವಿಷಯವನ್ನು ಗಂಭೀರವಾಗಿ ಪರಿಗಣಿಸಬೇಕು. ತಮ್ಮ ಅಧಿನದಲ್ಲಿರುವ ಎಲ್ಲ ಅಧಿಕಾರಿಗಳು ಸರಿಯಾಗಿ ಕೆಲಸ ಮಾಡುವಂತೆ ನೋಡಿಕೊಳ್ಳಬೇಕೆಂದು ತಿಳಿಸಿದರು.

ಅಧಿಕಾರಿಗಳಿಗೆ ತರಾಟೆ:ಗ್ರಾಮ ಸಂಚಾರದ ಸಂದರ್ಭದಲ್ಲಿ ಪ್ರತಿ ಶಾಲೆಗೆ ಭೇಟಿ ನೀಡಿ ಸಮಸ್ಯೆಗಳನ್ನು ಖುದ್ದಾಗಿ ವೀಕ್ಷಿಸಿದ್ದೇನೆ. ಅನೇಕ ಶಾಲೆಗಳಲ್ಲಿ ವಿದ್ಯಾರ್ಥಿಗಳ ಸಂಖ್ಯೆಗೆ ಅನುಗುಣವಾಗಿ ಶಿಕ್ಷಕರು ಇಲ್ಲದಿರುವುದು ಕಾಣಿಸಿದೆ. ಸರಿಪಡಿಸುವಂತೆ ಸಾಕಷ್ಟು ಬಾರಿ ಹೇಳಿದರೂ ಏನೂ ಮಾಡಿಲ್ಲವೆಂದು ಅಧಿಕಾರಿಗಳಿಗೆ ತೀವ್ರತರಾಟೆಗೆ ತೆಗೆದುಕೊಂಡರು. ಅಂತಹ ಸಮಸ್ಯೆಗಳನ್ನು ಸರಿಪಡಿಸಿರುವುದಾಗಿ ಬಿಇಓ ಮಾಹಿತಿ ನೀಡಿದರು.

ಕೆಲವು ಶಾಲೆಗಳಲ್ಲಿ 7, 8ನೇ ತರಗತಿಯ ಮಕ್ಕಳಿಗೆ ಸರಿಯಾಗಿ ಕನ್ನಡ ಓದಲು ಬರೆಯಲು ಬರುತ್ತಿಲ್ಲ. ಹೀಗಾದರೆ ಫಲಿತಾಂಶ ಸುಧಾರಣೆ ಹೇಗೆ ಸಾಧ್ಯ ?, ಕಲಿಕೆಯಲ್ಲಿ ತೀವ್ರ ಹಿಂದುಳಿದಿರುವ ಮಕ್ಕಳನ್ನು ಗುರುತಿಸಿ ಅವರಿಗೆ ವಿಶೇಷ ತರಗತಿ ನಡೆಸಿ ಕನಿಷ್ಠ ತೇರ್ಗಡೆಯಾಗುವಂತೆ ನೋಡಿಕೊಳ್ಳಬೇಕೆಂದು ತಿಳಿಸಿದರು.

ಇದೇ ವೇಳೆ ಶಾಸಕರು ಶಾಲಾವಾರು ಪ್ರಗತಿ ಪರಿಶೀಲನೆ ನಡೆಸಿ, ಶಾಲೆಯಲ್ಲಿರುವ ಸಮಸ್ಯೆಗಳನ್ನು ಆಲಿಸಿದರು. ಶೌಚಾಲಯ, ಕುಡಿಯುವ ನೀರು, ಆಟದ ಮೈದಾನ ಗ್ರಾಮ ಪಂಚಾಯಿತಿಯಿಂದ ಮಾಡಿಸಿಕೊಡುವಂತೆ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ ನಿರ್ದೇಶನ ನೀಡಿದರು.

ಈ ಸಂದರ್ಭದಲ್ಲಿ ಕ್ಷೇತ್ರ ಶಿಕ್ಷಣಾಧಿಕಾರಿ ಬಿ.ಜೆ.ರಂಗೇಶ, ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿ ಪ್ರಕಾಶ ಸೂರ್ಯವಂಶಿ, ಬಿಆರ್‌ಸಿ ಪ್ರಕಾಶ ರಾಠೋಡ್, ಬಿಸಿಯೂಟ ಅಧಿಕಾರಿ ಧೂಳಪ್ಪ, ಸರ್ಕಾರಿ ನೌಕರರ ಸಂಘದ ಅಧ್ಯಕ್ಷ ಪಂಢರಿ ಆಡೆ, ಕಸಾಪ ಅಧ್ಯಕ್ಷ ಬಾಲಾಜಿ ಅಮರವಾಡಿ, ತಾಲ್ಲೂಕು ಪಂಚಾಯತ್ ಸಹಾಯಕ ನಿರ್ದೇಶಕ ಶಿವಕುಮಾರ ಘಾಟೆ, ಬಲಭೀಮ ಕುಲಕರ್ಣಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

## ಗಡಿ ಯಲ್ಲಿ ಕನ್ನಡ ನಾಡು, ನುಡಿ, ಜಲ ರಕ್ಷಣೆಗೆ ಕರವೇ ಸದಾ ಸಿದ್ಧ:ಸೋಮನಾಥ ಮುಧೋಳ



ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.23:ಗಡಿಯಲ್ಲಿ ಕನ್ನಡ ನಾಡು, ನುಡಿ, ಜಲ ರಕ್ಷಣೆಗೆ ಕರವೇ ಸದಾ ಸಿದ್ದ, ಎಂದು ಕರ್ನಾಟಕ ರಕ್ಷಣಾ ವೇದಿಕೆಯ ಬೀದರ ಜಿಲ್ಲಾ ಅಧ್ಯಕ್ಷ ಸೋಮನಾಥ ಮುಧೋಳ್ ಹೇಳಿದರು.

ಪಟ್ಟಣದ ಡಾ.ಚನ್ನಬಸವ ಪಟ್ಟದ್ದೇವರು ವಾಚನಾಲಯದ ಸಭಾಂಗಣದಲ್ಲಿ ಶನಿವಾರ ಕರ್ನಾಟಕ ರಕ್ಷಣಾ ವೇದಿಕೆ ತಾಲೂಕು ಘಟಕದ ನೂತನ ಪದಾಧಿಕಾರಿಗಳ ಪದಗ್ರಹಣ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಕಮಲನಗರ ತಾಲೂಕಿನಲ್ಲಿ ಕರವೇ ತಾಲೂಕ ಘಟಕ ಸ್ಥಾಪನೆ ಮಾಡಲಾಗಿದು, ನೂತನ ಪದಾಧಿಕಾರಿಗಳು, ಕನ್ನಡ ರಕ್ಷಣೆ ಕಾರ್ಯ ಕ್ಕೆ ಹಿಂಜರಿಯ ಬೇಡಿ ನಿಮ್ಮ ಹಿಂದೆ ನಾವಿದ್ದೇವೆ ಎಂದು ಭರವಸೆ ನೀಡಿದರು

ವಿಶೇಷ ಉಪನ್ಯಾಸ ನಿವೃತ್ತ ಪ್ರಾಚಾರ್ಯ ಡಾ.ಎಸ್.ಎಸ್. ಮೈನಾಳೆ ನೀಡಿದರು,

ಕನ್ನಡ ಉಳಿಸುವ ಅಭಿಯಾನ ನಿತ್ಯ, ನಿರಂತರವಾಗಿರಬೇಕು. ಗಡಿಭಾಗದಲ್ಲಿ ಲಿಂಗೈಕ್ಯ ಡಾ.ಚನ್ನಬಸವ ಪಟ್ಟದ್ದೇವರು ಕನ್ನಡ ಉಳಿಸಿದ ಪರಿ ಮರೆಯಲಾಗದು ಎಂದು ಹೇಳಿದರು.

ಡಾ.ಚನ್ನಬಸವ ಪಟ್ಟದ್ದೇವರು ಈ ಭಾಗದಲ್ಲಿ ಸಮಾನತೆಗಾಗಿ ಕ್ರಾಂತಿ ನಡೆಸಿದವರು. ನಿಜಾಮನ ಆಳ್ವಿಕೆಯಲ್ಲಿ ಗಡಿ ಭಾಗದಲ್ಲಿ ಕನ್ನಡ ಉಳಿಸಿದ ಕೀರ್ತಿ ಪೂಜ್ಯರಿಗೆ ಸಲ್ಲುತ್ತದೆ. ಅವರ ಆದರ್ಶಗಳು ನಿಜ ಜೀವನದ ಆಚರಣೆಯಲ್ಲಿ ಬರಬೇಕು ಎಂದು ತಿಳಿಸಿದರು.

ಕಸಾಪ ತಾಲೂಕು ಅಧ್ಯಕ್ಷ ಪ್ರಶಾಂತ ಮಠಪತಿ ಮಾತನಾಡಿ, ಕನ್ನಡಿಗರು ಸೌಹಾರ್ದಪ್ರಿಯರು, ಶಾಂತಿಪ್ರಿಯರು. ಹಾಗಂದ ಮಾತ್ರಕ್ಕೆ ನಮ್ಮ ನೆಲ, ಜಲ, ಭಾಷೆಯ ಮೇಲೆ ವಿನಾಕಾರಣ ಹಲ್ಲೆ ನಡೆಸುವ ಭಾಷಾಂಧರನ್ನು ಸಹಿಸಿಕೊಳ್ಳಲು ಸಾಧ್ಯವಿಲ್ಲ. ಗಡಿಬಾಗದಲ್ಲಿರುವ ಎಲ್ಲ ಕನ್ನಡ ಹೃದಯಗಳು ಒಗ್ಗಟ್ಟಾಗಿರಬೇಕು ಎಂದರು.

ನಿವೃತ್ತ ವೈದ್ಯಾಧಿಕಾರಿ ಡಾ.ಅಶೋಕಕುಮಾರ ಮಳಗೆ ಕಾರ್ಯಕ್ರಮ ಉದ್ಘಾಟಿಸಿದರು.

ಬಿಜೆಪಿ ಮುಖಂಡ ಶಿವಾನಂದ ವಡ್ಡೆ, ಉದ್ಯಮಿ ಸಂಜೀವಕುಮಾರ ಪಾಟೀಲ್, ಸುಭಾಷ ಮಿರ್ಚೆ, ಯಶವಂತ ಬಿರಾದಾರ, ಪ್ರವೀಣ ಕುಲಕರ್ಣಿ, ಕರವೇ ಪದಾಧಿಕಾರಿಗಳು ಇತರರಿದ್ದರು.

ಪ್ರಶಾಂತ ಖಾನಾಪುರೆ ಸ್ವಾಗತಿಸಿ, ನಿರೂಪಣೆ ಮಾಡಿದರು.

ಪದಾಧಿಕಾರಿಗಳನ್ನಾಗಿ ಮಂಜುನಾಥ ಸ್ವಾಮಿ ಅಧ್ಯಕ್ಷರು, ಪ್ರಶಾಂತ ಖಾನಾಪೂರೆ ಪ್ರಧಾನ ಕಾರ್ಯದರ್ಶಿ, ಅಜಯ ಪಾಟೀಲ ಉಪಾಧ್ಯಕ್ಷರು, ಅಜಯ ಸೂರ್ಯವಂಶಿ ಉಪಾಧ್ಯಕ್ಷರು, ಸುಭಾಷ ಮಿರ್ಚಿ ಗೌರಾವಧ್ಯಕ್ಷರು, ಬಸವರಾಜ ತಾಂಬೂಳೆ ವಲಯ ಅಧ್ಯಕ್ಷರು, ಸಂಗಮೇಶ ಬೇರೊಬೆ ಘಟಕ ಕಾರ್ಯದರ್ಶಿ, ಆಯುಬ ಖುರೇಷಿ ಘಟಕ ಕಾರ್ಯದರ್ಶಿ ಹಾಗೂ ಸದಸ್ಯರಾಗಿ ವೀರಶೆಟ್ಟಿ ಮಹಾಜನ್, ರಾಜಕುಮಾರ ಂಖುನಗುಂದೆ, ಓಂಕಾರ ಡೋಣಗಾಪೂರೆ, ಬಾಲಾಜಿ ಬಿರಾದಾರ, ಲೋಕೇಶಸ್ವಾಮಿ, ಪ್ರಶಾಂತ ಬಾವೂಗೆ, ಸಂಗಮೇಶ ಬಿರಾದಾರ ಡಿಗ್ಗಿ, ಆಕಾಶ ಸ್ವಾಮಿ, ಸೋಮನಾಥ ಸಂಗಮ, ಸೊಮು ಡೋಣಗಾಂವ (ಎಮ್), ಗಣೇಶ ಡೋಣಗಾಂವ (ಎವ್ಹ್), ಬಸವರಾಜ ಖತಗಾಂವ ಅವರನ್ನು ನೇಮಕ ಮಾಡಲಾಯಿತು.

# ಶಿಕ್ಷಕರ ನಿವೃತ್ತಿ ಜೀವನಕ್ಕೆ ಶುಭವಾಗಲಿ:ಬಸವ ಪ್ರಭು ಸ್ವಾಮಿಜೀ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಜೂ.23–ಭೂಮಿಗೆ ಬಿದ್ದ ಬೀಜ ಎದೆಗೆ ಬಿದ್ದ ಅಕ್ಷರ ಇವತ್ತು ಯಾವುದು ಸಹ ಉಸಿ ಹೋಗುವುದಕ್ಕೆಸಾಧ್ಯವಿಲ್ಲಎಂದು ಬಸವಕಲ್ಯಾಣದ ಸದ್ಗುರು ಬಸವ ಪ್ರಭು ಸ್ವಾಮಿಜೀ ಹೇಳಿದರು. ಶಿಕ್ಷಕ ವೃತ್ತಿ ಬಹಳ ಪವಿತ್ರವಾದುದು. ತಂದೆ ತಾಯಿಯೇ ಮೊದಲ ಗುರು, ಎರಡನೆ ಗುರು ಎಂದರೆ ವಿದ್ಯೆ ಕಲಿಸಿಕೊಡುವಂತಹ ಶಿಕ್ಷಕರು, ಮೊರನೇ ಗುರು ಎಂದ ಜನ್ಮ ಜನ್ಮಾಂತರದ ಬಹುಮತ ಕಳೆದಂತ ಮಹಾಗುರು ಆಧ್ಯಾತ್ಮ ಗುರುಗಳಾಗಿದ್ದಾರೆ ಎಂದು ಭಾನುವಾರ ಪಟ್ಟಣದಲ್ಲಿ ದೇವಣಿ ಪರಿವಾರದಿಂದ ಆಯೋಜಿಸಿದ ವಸವರಾಜ್ ದೇವಣಿ ರವರ ವಯೋನಿವೃತ್ತಿಸಮಾರಂಭಹಾಗೂ ಅಭಿನಂದನಾ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯವಹಿಸಿ ಮಾತನಾಡುತ್ತಾ ನುಡಿದರು. ಶಿಕ್ಷಕರ ನಿವೃತಿ ಜೀವನಕ್ಕೆ ಶುಭವಾಗಲಿ ಬಸವರಾಜ ದೇವಣಿ ಅವರು ತಮ್ಮ ಕರ್ತವ್ಯದಲ್ಲಿ ನಿಷ್ಠೆ, ಪ್ರಾಮಾಣಿಕತೆಯೊಂದಿಗೆ ಸಂಸ್ಥೆಯ ಬಳಗದ ಜೊತೆಗೆ ಹೊಂದಾಣಿಕೆ,ಪ್ರೀತಿ–ವಿಶ್ವಾಸಉತ್ತಮ ಕರ್ತವ್ಯದೊಂದಿಗೆ ಸೇವೆ ಸಲ್ಲಿಸಿ ಇತರರಿಗೆ ಮಾದರಿಯಾಗಿದ್ದಾರೆ ಎಂದು ಹೇಳಿದರು. ಮುಖ್ಯ ಅತಿಥಿಗಳಾಗಿ ಶರಣ ಸಾಹಿತ್ಯ ಪರಿಷತ್‌ನ ಅಧ್ಯಕ್ಷ ಮಲ್ಲಿಕಾರ್ಜುನ ಸಂಗಮಕರ್ ಮಾತನಾಡಿ, ಒತ್ತಡದ ಜೀವನದಲ್ಲಿ ಆರೋಗ್ಯವನ್ನು ಕಾಪಾಡಿಕೊಂಡು ನಿವೃತ್ತಿ ಹೊಂದುತ್ತಿರುವ ಮುಖ್ಯಗುರು ಬಸವರಾಜ ದೇವಣಿ ಅವರಿಗೆ ದೇವರು ಆರೋಗ್ಯ ಭಾಗ್ಯ ಕರುಣಿಸಿದ್ದಾನೆಎಂದರು. ಕರ್ತವ್ಯದಲ್ಲಿ ನಿಷ್ಠೆ, ಪ್ರಾಮಾಣಿಕತೆಯೊಂದಿಗೆ ಇಲಾಖೆಯ ಬಳಗದ ಜೊತೆಗೆ ಹೊಂದಾಣಿಕೆ, ಪ್ರೀತಿ ವಿಶ್ವಾಸ ಉತ್ತಮ ಕರ್ತವ್ಯದೊಂದಿಗೆ ಸೇವೆ ಸಲ್ಲಿಸಿದ ಅವರು ಇತರರಿಗೆ ಮಾದರಿಯಾಗಿದ್ದಾರೆ. ಪರಿಪೂರ್ಣ ಕರ್ತವ್ಯನಿರ್ವಹಿಸಿದ ಅವರ ಸತತ ಪರಿಶ್ರಮದ ಸೇವೆ ಶ್ಲಾಘಿಸಿದರು. ಅಲ್ಲದೆ ಮುಂದಿನ ಜೀವನ ಸುಖಕರವಾಗಿರಲಿ ಎಂದು ಹಾರೈಸಿದರು. ಶಿಕ್ಷಕರು ಸೇವೆ ನಿರಂತರ ಪ್ರಾಮಾಣಿಕತೆ ತಮ್ಮ ಜೀವನ ಶಾಲೆಯ ಮಕ್ಕಳ ಜೊತೆ ಕಳೆದು ಒಳ್ಳೆಯ ಪ್ರಾಮಾಣಿಕ ಗುರುಗಳಾಗಿ ಮಕ್ಕಳಿಗೆ ಒಳ್ಳೆಯ ವಿದ್ಯೆ ಅಭ್ಯಾಸ ನೀಡಿ ಅವರಿಗೆ ಒಂದು ಹಂತಕ್ಕೆ ಮುಟ್ಟಿಸುವ ಕರ್ತವ್ಯ ಶಿಕ್ಷಕರ ಪಾತ್ರ ಮುಖ್ಯ, ಈ ಶಿಕ್ಷಕರ ವಯೋನಿವೃತ್ತಿ ಹೊಂದಿದ ಬಸವರಾಜ್ ದೇವಣಿ ರವರ ಜೀವನ ಸುಖಕರವಾಗಿರಲಿ ಎಂದು ಎಲ್ಲಾ ಶಿಕ್ಷಕರ ಬಳಗದೊಂದಿಗೆ ಅವರನ್ನು ಗೌರವಿಸಿ ಶುಭಹಾರೈಸಿದರು.

ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿ, ಬಂಡೆಪ್ಪಾ ಖೂಬಾ ಮಾತನಾಡಿ, ಜ್ಞಾನ ಮತ್ತು ಕೌಶಲ್ಯ ಒಂದೇ ನಾಣ್ಯದ ಎರಡು ಮುಖಗಳಿದ್ದಂತೆ. ವಿದ್ಯಾರ್ಥಿಗಳಲ್ಲಿ ಉತ್ತಮ ಶಿಕ್ಷಣ ಜೊತೆಗೆ ಶಿಸ್ತು– ಓದುವ ಹವ್ಯಾಸವನ್ನು ಮೂಡಿಸುವಲ್ಲಿ ಮುಖ್ಯ ಪಾತ್ರ ವಹಿಸಿದ್ದ ಬಸವರಾಜ ದೇವಣಿ ಅವರು ವಿದ್ಯಾರ್ಥಿಗಳ ಮನಃ ಪರಿವರ್ತನೆ ಮಾಡುತ್ತಿದ್ದರು ಎಂದು ಹೇಳಿದರು. ಈ ಸಂದರ್ಭದಲ್ಲಿ ಶಿಕ್ಷಕರು, ಸ್ನೇಹಿತರು ವರ್ಗದವರು ಬಸವರಾಜ ದೇವಣಿ ಅವರನ್ನು ಸನ್ಮಾನಿಸಿದರು. ನನಗೆ ಅಭಿನಂದಿಸಿದ ಎಲ್ಲ ಶಿಕ್ಷಕ ವೃಂದದವರಿಗೆ ಹಾಗೂ ಸ್ನೇಹಿತರಿಗೆ ಕೃತಜ್ಞತೆ ಸಲ್ಲಿಸಿದರು.

# ನಿವೃತ್ತ ಶಿಕ್ಷಕ ಬಸವರಾಜ ದೇವಣಿರವರಿಗೆ ಸನ್ಮಾನ:ಅಭಿನಂದನೆ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ:ಜೂ.23– ವೃತ್ತಿಯಿಂದ ನಿವೃತ್ತಿ ಅನಿವಾರ್ಯ, ನಿವೃತ್ತಿಯವರೆಗೆ ದುಡಿಮೆ ಅನಿವಾರ್ಯ ಮುಂದಿನ ಜೀವನವನ್ನು ನಮ್ಮದಾಗಿ ಕಳೆಯೋಣ. ಬಸವರಾಜ ದೇವಣಿ ರವರು ಅಚ್ಚುಕಟ್ಟಾಗಿ ತಮ್ಮ ಜವಾಬ್ದಾರಿಯನ್ನು ನಿರ್ವಹಿಸಿದ್ದೀರಿ ಎಂದು ಪಟ್ಟಣದಲ್ಲಿ ಬಸವರಾಜ ದೇವಣಿರವರ ನಿವೃತ್ತಿಸಮಾರಂಭದಲ್ಲಿ ಶಶಿಕಾಂತ ಕೋಡ್ಲಿ ಹುಡಗಿ ಮಾತನಾಡುತ್ತಾ ನುಡಿದರು. ತಮಗೆ ಬಯಸಿದ್ದು ದೇವರು ಕರುಣಿಸಲಿ ಎಂದು ಶುಭ ಹಾರೈಸಿದರು. ಪಿಕೆಪಿಎಸ್ ಅಧ್ಯಕ್ಷ ಬಸವತೀರ್ಥಪ್ಪಾ ಸಿಂಧನಕೇರಾ ರವರು ಮಾತನಾಡಿ, ಎಷ್ಟೇ ಉನ್ನತ ಅಧಿಕಾರಿಯಾದರೂ ಅಕ್ಷರ ದಾಸೋಹಿಗಳಾದ ಶಿಕ್ಷಕ ವೃತ್ತಿಗಿರುವ ಗೌರವ, ಸಂತೃಪ್ತಿ, ಸಂತೋಷ, ಸಮಾಧಾನ ಬೇ–ರೊಂದು ವೃತ್ತಿಯಲ್ಲಿರುವ ಜನರಿಗೆ ಸಿಗಲಾರದು ಆದ್ದರಿಂದಲೇ ಶಿಕ್ಷಕ ವೃತ್ತಿ ಪವಿತ್ರವಾದ ವೃತ್ತಿ ಎಂದರು. ಶಿಕ್ಷಕರು ಸ್ನೇಹಿತರು ಉಪಸ್ಥಿತರಿದ್ದರು.

## ಕೋಟಿ ವೃಕ್ಷ ಆಂದೋಲನಕ್ಕೆ ಚಾಲನೆ

# ಮರ ಗಿಡ ಬೆಳೆಸಿ ಪರಿಸರ ಸಂರಕ್ಷಿಸಿ:– ಸುರೇಶಕುಮಾರ್



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ :– ಮಾಲಿನ್ಯ ಹೋಗಲಾಡಿಸಲು ಪ್ರತಿಯೊಬ್ಬರು ಮರ ಗಿಡ ಬೆಳೆಸಿ ಪರಿಸರ ಸಂರಕ್ಷಣೆಸಹಾಯಮಾಡಬೇಕೆಂದು ಹುಮನಾಬಾದ ಪೊಲೀಸ್ ಠಾಣೆಯಪಿಎಸ್‌ಐಸುರೇಶಕುಮಾರ್ ತಾಲೂಕಿನ ಹುಡಗಿ ಗ್ರಾಮದ ಬಸವತೀರ್ಥ ವಿದ್ಯಾಪೀಠ ಪ್ರಾಥಮಿಕ ಶಾಲೆಯಲ್ಲಿ ಪರಿಸರ ವಾಹಿನಿ ಬೀದರ್ ಹಮ್ಮಿಕೊಂಡಿದ್ದ ಪರಿಸರ ಸಂರಕ್ಷಣೆ ಜನ ಜಾಗೃತಿ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡುತ್ತ ತಿಳಿಸಿದರು. ವಿದ್ಯಾರ್ಥಿಗಳು ಸಸಿ ಬೆಳೆಸುವ ಹವ್ಯಾಸ ಬೆಳಸಿಕೊಳ್ಳಬೇಕು, ಮರ ಗಿಡಗಳು ನಮ್ಮ ಕಾಮ ಧೇನು ಕಲ್ಪವೃಕ್ಷ ಇದ್ದಂತೆ ಗಿಡಮರಗಳು ನಮಗೆಹುಟ್ಟಿನಿಂದ ಸಾಯುವರೆಗೂ ತುಂಬಾ ಸಹಾಯ ಮಾಡುತ್ತವೆ ಎಂದರು. ಪ್ರಾಣವಾಯು ನೀಡುವ ಮರ–ಗಿಡಗಳು ನಮಗೆದೇವರಸಮ ಎಂದರು. ಶಿಕ್ಷಕರು ವಿದ್ಯಾರ್ಥಿಗಳಿಗೆ ವಿಶೇಷವಾಗಿ ಗಣಿತ ಮತ್ತು ಇಂಗ್ಲಿಷ್ ವಿಷಯವನ್ನು ಚೆನ್ನಾಗಿ ಮಕ್ಕಳಿಗೆ ತಿಳಿಮುಟ್ಟುವ ರೀತಿಯಲ್ಲಿ ಹೇಳಬೇಕೆಂದು ಸಲಹೆ ನೀಡಿದರು. ಹುಮನಾಬಾದ ಡಿ.ದೇವರಾಜ ಅರಸು ಹಿಂದುಳಿದ ವರ್ಗಗಳ ಅಧೀಕ್ಷಕರಾದ ಪೈಗಂಬರ್ ಟಕಳಿಕ್ಕರ್ ಮುಖ್ಯ ಅತಿಥಿಗಳಾಗಿ ಮಾತನಾಡಿ, ಪರಿಸರ ಸಮತೋಲನ ಕಾಪಾಡಲು ಪ್ರತಿಯೊಬ್ಬರು ಮರ ಗಿಡಗಳನ್ನು ಬೆಳೆಸಿ ಸಂರಕ್ಷಣೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು. ನಾವು ಮಾಡುವ ಕೆಲಸದಲ್ಲಿಯೇ ಸ್ವರ್ಗ ಕಾಣಬೇಕು ಎಂದರು. ಜೀವಮಾನದಲ್ಲಿ ಪ್ರತಿಯೊಬ್ಬರು ಗಿಡ ಮರಗಳನ್ನು ಬೆಳೆಸಿದರೆ ಸ್ವರ್ಗಕ್ಕೆಸಿಗುತ್ತದೆ ಎಂಬ ಹಿರಿಯರ ಮಾತಿನಂತೆ ಸ್ವರ್ಗ ಪ್ರಾಪ್ತಿಯಾಗಲು ಗಿಡ ಮರಗಳನ್ನು ಬೆಳಸಬೇಕು ಎಂದರು. ಪರಿಸರವಾದಿ ಶೈಲೇಂದ್ರ ಕಾವಡಿ ಪ್ರಾಸ್ತಾವಿಕ ಮಾತನಾಡಿ, ಬಸವತೀರ್ಥ ವಿದ್ಯಾಪೀಠ ಪ್ರಾಥಮಿಕ ಶಾಲೆ ಪರಿಸರ ಸಂರಕ್ಷಣೆಗೆ ದತ್ತು ತೆಗೆದುಕೊಂಡು ವಿದ್ಯಾರ್ಥಿಗಳಲ್ಲಿ ಪರಿಸರದ ಜಾಗೃತಿ ಒಡಮೂಡಿಸಲಾಗುತ್ತಿದೆ ಎಂದರು. ಈ ವರ್ಷದ ವಿಶ್ವ ಪರಿಸರ ದಿನಾಚರಣೆಯ ಘೋಷವಾಕ್ಯ ಪ್ಲಾಸ್ಟಿಕ್ ಮಾಲಿನ್ಯ ಹೋಗಲಾಡಿಸಲು ಪರಿಸರ ಸಂರಕ್ಷಿಸಲು ಪ್ರತಿಯೊಬ್ಬರು ನಿತ್ಯ ಜೀವನದಲ್ಲಿ ಪ್ಲಾಸ್ಟಿಕ್ ಬಳಕೆ ನಿಲ್ಲಿಸಬೇಕು ಎಂದರು. ಪ್ಲಾಸ್ಟಿಕ್ ತ್ಯಾಜ್ಯದಿಂದ ಭೂ ಮಾಲಿನ್ಯ, ಜಲ ಮಾಲಿನ್ಯವಾಗಿತ್ತಿದೆ ಎಂದು ಕಳವಳದಿಂದ ತಿಳಿಸಿದರು. ಪರಿಸರ ಸಂರಕ್ಷಣೆ ಕುರಿತು ವಿದ್ಯಾರ್ಥಿಗಳಾದ ಕಾರ್ತಿಕ್, ಕಾವ್ಯತಾ, ಐಶ್ವರ್ಯ ಅತ್ಯುತ್ತಮವಾಗಿ ಭಾಷಣ ಮಾಡಿದರು. ಇದೇ ಸಂದರ್ಭದಲ್ಲಿ ಪರಿಸರ ವಾಹಿನಿ ಕೋಟಿ ವೃಕ್ಷ ಆಂದೋಲನವಾಗಿ ವಿದ್ಯಾರ್ಥಿಗಳಿಗೆ ಸಸಿ ವಿತರಿಸಲಾಯಿತು. ಈ ಸಂದರ್ಭದಲ್ಲಿ ಪತ್ರಕರ್ತ ರಾಜಕುಮಾರ ಆರ್. ಹಡಪದ, ಶಿಕ್ಷಕರಾದ ಕಾಶಯ್ಯಾ ಸ್ವಾಮಿ, ಮಾಣಿಕಪ್ಪ, ಕಾಳಿದಾಸ್ ಪೇಣೆ, ವಿಜಯಲಕ್ಷ್ಮಿ, ಕರಬಸಪ್ಪ ಸೇರಿದಂತೆ ಸಿಬ್ಬಂದಿ ವರ್ಗದವರು ಹಾಗೂ ವಿದ್ಯಾರ್ಥಿಗಳು ಉಪಸ್ಥಿತರಿದ್ದರು. ಕಾರ್ಯಕ್ರಮಕ್ಕೆ ಶಾಲೆಯ ಮುಖ್ಯ ಗುರುಗಳಾದ ವಿಜಯಕುಮಾರ ಸ್ವಾಗತಿಸಿದರು. ಶಿಕ್ಷಕ ದಿಗಂಬರ ಕಾಂಬಳೆ ನಿರೂಪಿಸಿದರು. ಶ್ರೀಮಂತ ವಂದಿಸಿದರು.

## ಸರ್ಕಾರಿ ನೌಕರರ ಸಂಘದ ಪದಾಧಿಕಾರಿಗಳ ಪದಗ್ರಹಣ

# ಡಾ. ಬಿ.ಆರ್. ಅಂಬೇಡ್ಕರ್ ಅವರ ಕೊಡುಗೆ ಅಪಾರ:– ಡಾ.ಸಿಂಧೆ







ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ಸಮಾಜದಲ್ಲಿ ಸಮಾನತೆ ಅಸ್ಪೃಶ್ಯತೆ ವಿರುದ್ಧ ಹಗಲಿರುಳು ಶ್ರಮಿಸಿದ ಮಹಾನ್ ವಿಶ್ವಜ್ಞಾನಿ ಡಾ. ಬಾಬಾ ಸಾಹೇಬ್ ಅಂಬೇಡ್ಕರ್ ಅವರ ತತ್ವಗಳು ಸಮಾಜಕ್ಕೆ ದಾರಿ ದೀಪವಾಗಿವೆ ಎಂದು ಪ್ರಥಮ ದರ್ಜೆ ಪ್ರಾಂಶುಪಾಲ ಡಾ. ಜಯಕುಮಾರ್ ಸಿಂಧೆ ತಿಳಿಸಿದರು. ಪಟ್ಟಣದ ಆರ್ಯ ಸಮಾಜ ಮಂದಿರದ ಆವರಣದಲ್ಲಿ ಹಮ್ಮಿಕೊಂಡಿದ್ದ ಸರ್ಕಾರಿ ನೌಕರರ ಸಂಘದ ನೂತನ ಪದಾಧಿಕಾರಿಗಳ ಪದಗ್ರಹಣ ಮತ್ತು ಬುದ್ಧ, ಬಸವ, ಅಂಬೇಡ್ಕರ್ ಜಯಂತೋತ್ಸವ ಕಾರ್ಯಕ್ರಮದಲ್ಲಿ ಉಪನ್ಯಾಸ ನೀಡುತ್ತ, ಮಾತನಾಡಿದ ಅವರು, ಪ್ರತಿಯೊಂದು ಸಮಾಜಕ್ಕೂ ಸಮಾನತೆಯ ಸ್ವಾತಂತ್ರ್ಯ ತಂದ ಮಹಾನ್ ವ್ಯಕ್ತಿ ಡಾ. ಬಿ.ಆರ್. ಅಂಬೇಡ್ಕರ್. ಪ್ರತಿಯೊಬ್ಬರು ಅವರ ತತ್ವ ಆದರ್ಶಗಳನ್ನು ಜೀವನದಲ್ಲಿ ಪಾಲಿಸಿಕೊಳ್ಳಬೇಕು, ಅವರ ಕನಸು ನನಸು ಮಾಡಲು ಸಮಾಜದಲ್ಲಿ ಹೊಸಬದಲಾವಣೆಗಳು ತಂದಾಗ ಮಾತ್ರ ಅವರ ಕನಸು ನನಸಾಗುತ್ತದೆ ಎಂದರು. ಶಿಕ್ಷಣ ಮತ್ತು ಸಬಲೀಕರಣದಿಂದ ಸಮಾನತೆ ಎಂಬುದು ಸಂಪೂರ್ಣವಾಗಿ ಹೋಗಲಾಡಿಸಬೇಕು. ಇದರ ಜೊತೆಯಲ್ಲಿ ಶೋಷಿತ, ದಲಿತ, ಹಿಂದುಳಿದ ಸಮುದಾಯಗಳ ಅಭಿವೃದ್ಧಿಯಾಗಬೇಕು ಎಂಬುವುದು ಅಂಬೇಡ್ಕರ್ ಅವರ ಆಶಯವಾಗಿತ್ತು. ಶಿಕ್ಷಣ ಎಂಬುದು ಹುಲಿಯ ಹಾಲಿದಂತೆ ಅದನ್ನು ಕುಡಿದವರು ಘರ್ಜಿಸಲೇಬೇಕು ಎಂದು ಹೇಳುವುದರ ಮೂಲಕ ದೇಶದಲ್ಲಿನ ಅಸಮಾನತೆ ನಿವಾರಣೆಗೆ ಶಿಕ್ಷಣವೇ ಮೂಲ ಮದ್ದು ಎನ್ನುವುದು ಅಂಬೇಡ್ಕರ್ ಅವರ ವಿಚಾರವಾಗಿತ್ತು. ಭಾರತ ದೇಶಕ್ಕೆ ಅಂಬೇಡ್ಕರ್ ಅವರು ನೀಡಿದ ಸಂವಿಧಾನದ ಪ್ರತಿಫಲವಾಗಿ ಇಂದು ದೇಶದಲ್ಲಿ ಕೆಳ ವರ್ಗದ ಮಕ್ಕಳು ಗುಣಮಟ್ಟದ ಶಿಕ್ಷಣ ಪಡೆದು, ಉನ್ನತ ಹುದ್ದೆಗಳಲ್ಲಿ ಸೇವೆ ಸಲ್ಲಿಸುತ್ತಿರುವುದು ಅಂಬೇಡ್ಕರ್ ಅವರ ಮಹಾನ ಕೊಡುಗೆ ಎಂದರು. ಇಂದಿನ ಯುವ ಪೀಳಿಗೆಗಳು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜೀವನ ಚರಿತ್ರೆಯನ್ನು ಅರಿತುಕೊಳ್ಳುವ ಮೂಲಕ ಅವರ ತತ್ವ ಸಿದ್ಧಾಂತಗಳನ್ನು ಮೈಗೂಡಿಸಿಕೊಂಡು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು ಎಂದು ಹೇಳಿದರು. ನೌಕರರ ಸಂಘದ ಜಿಲ್ಲಾಧ್ಯಕ್ಷ ಸೋಮಶೇಖರ್ ಬಿರಾದಾರ್ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ನೌಕರರು ಶಿಸ್ತು, ನಿಷ್ಠೆ, ಪ್ರಾಮಾಣಿಕತೆ ಮತ್ತು ಜವಾಬ್ದಾರಿಯಿಂದ ನಡೆದುಕೊಂಡು, ಸಮಸ್ಯೆಗಳನ್ನು ಹೊತ್ತು ಬರುವ ಸಾರ್ವಜನಿಕರಿಗೆ ಸ್ಪಂದಿಸಬೇಕು, ಸರ್ಕಾರಿ ಯೋಜನೆಗಳು ಹಾಗೂ ಸೌಲಭ್ಯಗಳನ್ನು ಸಾರ್ವಜನಿಕರಿಗೆ ತಲುಪಿಸುವ ಕೆಲಸ ಸರ್ಕಾರಿ ನೌಕರರದ್ದು. ಸರ್ಕಾರ ಮತ್ತು ಸಾರ್ವಜನಿಕರ ನಡುವೆ ಕೊಂಡಿ–ಯಾಗಿ ಕರ್ತವ್ಯ ನಿರ್ವಹಿಸಬೇಕು ಎಂದರು. ತಾಲುಕಾಧ್ಯಕ್ಷ ರಾಜಶೇಖರ ಉಪ್ಪಿನ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ತಾಲೂಕು ಸಂಘದ ನಿವೇಶಕ್ಕಾಗಿ ಭೂಮಿ ಮಂಜೂರು ಮಾಡುವಂತೆ ಮನವಿ ಸಲ್ಲಿಸಲಾಗಿದೆ. ಜಿಲ್ಲಾ ಸಂಘದವರು ನಮ್ಮ ತಾಲೂಕು ಸಂಘದ ನಿವೇಶನಕ್ಕಾಗಿ ಮುತುವರ್ಜಿ ವಹಿಸಿ ನಮ್ಮ ಬೇಡಿಕೆ ಈಡೇರಿಸುವಂತೆ ಗಮನ ಹರಿಸಬೇಕು.

ಇನ್ನು ಚಿಟಗುಪ್ಪ ತಾಲೂಕಿನ ಸದಸ್ಯತಾ ಶುಲ್ಕದ ಹಣವು ಹುಮನಾಬಾದಗೆ ಜಮೆಯಾಗುತ್ತಿವೆ, ಅವುಗಳನ್ನು ಮುಂದಿನ ದಿನಗಳಲ್ಲಿ ನಮ್ಮ ಚಿಟಗುಪ್ಪ ಘಟಕಕ್ಕೆ ಜಮೆಯಾಗಬೇಕು ಎಂದು ತಿಳಿಸಿದರು. ಜಿಲ್ಲಾ ಕಾರ್ಯದರ್ಶಿ ಪ್ರಭುಲಿಂಗ ತುಗಾಂವೆ ಮಾತನಾಡಿದರು. ಇದೇ ಸಂದರ್ಭದಲ್ಲಿ ಎಸ್.ಎಸ್.ಎಲ್.ಸಿ. ಮತ್ತು ಪಿ.ಯು.ಸಿ. ಪರೀಕ್ಷೆಯಲ್ಲಿ ಅತೀ ಹೆಚ್ಚು ಅಂಕ ಪಡೆದ ಸರ್ಕಾರಿ ಶಾಲೆ ಕಾಲೇಜುಗಳ ವಿದ್ಯಾರ್ಥಿಗಳಿಗೆ ಮತ್ತು ಸೇವಾ ನಿವೃತ್ತಿ ಹೊಂದಿದವರಿಗೆ ಸನ್ಮಾನಿಸಿದರು. ಸಂದರ್ಭದಲ್ಲಿ ಕನ್ನಡ ಸಾಹಿತ್ಯ ಪರಿಷತ್ತಿನ ಜಿಲ್ಲಾಧ್ಯಕ್ಷ ಸುರೇಶ್ ಚನ್ನಶೆಟ್ಟಿ, ಅನೀಲಕುಮಾರ ಸಿಂಧೆ, ದೇವಪ್ಪ ಚಾಂಬೋಳೆ, ರಾಜಕುಮಾರ ಮಾಳಗೆ, ವೆಂಕಟಪ್ಪ, ಓಂಕಾರ–ರೆಡ್ಡಿ ಸಲಗರ್, ದಯಾನಂದ ಕಾರಬಾರಿ, ರಾಮಕೃಷ್ಣ ನಿರ್ಣಾಕ್ಕರ್, ಅಶೋಕಕುಮಾರ್ ಮಹಿಂದ್ರಕ್ಕರ್ ಪ್ರೇಮಿಳಾ ರೆಡ್ಡಿ, ವಿಜಯಕುಮಾರ್ ಚಾಂಗಲೇರಾ, ಪಂಡಿತ ಕಲ್ಯಾಣಿ, ವೀರಭದ್ರಪ್ಪ ಉಪ್ಪಿನ, ಅಮೃತರಾವ್ ಮರಕಲೆ, ಸುದರ್ಶನ ವಿಶ್ವಕರ್ಮ, ಸಂಗಮೇಶ ಜವಾದಿ, ಶಿವರಾಜ್ ಕಮಲಾಪುರೆ, ಶಿವಪ್ಪ ಗುಮ್ಮಾ, ಬಸವರಾಜ ಮೇತ್ರೆ, ಸಂಜೀವನ ಭೋಸ್ಲೆ, ಹಸನ್ ಲಚ್ಚಿಕೆ, ಮಹಾರುದ್ರಪ್ಪ ಅಣದುರೆ, ಹಾವಣ ಸೇರಿದಂತೆ ಇತರರು ಉಪಸ್ಥಿತರಿದ್ದರು. ರಮೇಶ ಸಲಗರ್ ನಿರೂಪಿಸಿದರು. ಶಾಂತಕುಮಾರ್ ಪಾಟೀಲ್ ವಂದಿಸಿದರು.

## ನೂತನ ಮೂರ್ತಿ ಅನಾವರಣ ಸಮಾರಂಭ, ಮಾಜಿ ಸಚಿವ ಪಾಟೀಲ್

# ಸಮಾಜದ ಅಭಿವೃದ್ಧಿಗೆ ಗುಣಮಟ್ಟದ ಶಿಕ್ಷಣ ಅಗತ್ಯ



ಮಲ್ಲಮ್ಮ ನುಡಿ ವಾರ್ತೆ

ಹುಮನಾಬಾದ್ : ಸಮಾಜದ ಸಮಗ್ರ ಅಭಿವೃದ್ಧಿಗೆ ಪೂರಕವಾಗಿ ಗುಣಮಟ್ಟದ ಶಿಕ್ಷಣ ಅಗತ್ಯ ಎಂದು ಮಾಜಿ ಸಚಿವ ರಾಜಶೇಖರ ಪಾಟೀಲ್ ಹೇಳಿದರು.

ತಾಲೂಕಿನ ಬೋತಗಿ ಗ್ರಾಮದ ನೆಹರು ನಗರದಲ್ಲಿ ಭಾನುವಾರ ನಡೆದ ವಿಶ್ವ ಜ್ಞಾನಿ, ಭಾರತ ರತ್ನ, ಸಂವಿಧಾನ ಶಿಲ್ಪಿ ಡಾ. ಬಿ.ಆರ್. ಅಂಬೇಡ್ಕರ್ ಅವರ ನೂತನ ಮೂರ್ತಿ ಅನಾವರಣ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದರು.

ಅಂಬೇಡ್ಕರ್ ಅವರು ತಮ್ಮ ಜೀವನದುದ್ದಕ್ಕೂ ತಾರತಮ್ಯ, ಜಾತಿ ವ್ಯವಸ್ಥೆ ವಿರುದ್ಧ ನಿರಂತರವಾಗಿ ಹೋರಾಟ ನಡೆಸುತ್ತಲೇ ಬಾಬಾ ಸಾಹೇಬರು ಪ್ರತಿಯೊಬ್ಬರಿಗೂ ಸಮಾನ ಹಕ್ಕುಗಳು ಮತ್ತು ಅವಕಾಶಗಳು ಸಿಗಬೇಕೆಂದು ಅಚಲ ಸಂಕಲ್ಪ ಹೊಂದಿದ್ದರು ಎಂದು ತಿಳಿಸಿದರು.

ಶಿಕ್ಷಣ ಮತ್ತು ಸಬಲೀಕರಣದಿಂದ ಸಮಾನತೆ ಎಂಬುದು ಸಂಪೂರ್ಣವಾಗಿ ಹೋಗಲಾಡಿಸಬೇಕು. ಇದರ ಜೊತೆಯಲ್ಲಿ ಶೋಷಿತ, ದಲಿತ, ಹಿಂದುಳಿದ ಸಮುದಾಯಗಳ ಅಭಿವೃದ್ಧಿಯಾಗಬೇಕು ಎಂಬುವುದು ಅಂಬೇಡ್ಕರ್ ಅವರ ಆಶಯವಾಗಿತ್ತು.

ಶಿಕ್ಷಣ ಎಂಬುದು ಹುಲಿಯ ಹಾಲಿದ್ದಂತೆ ಅದನ್ನು ಕುಡಿದವರು ಘರ್ಜಿಸಲೇಬೇಕು ಎಂದು ಹೇಳುವುದರ ಮೂಲಕ ದೇಶದಲ್ಲಿನ ಅಸಮಾನತೆ ನಿವಾರಣೆಗೆ ಶಿಕ್ಷಣವೇ ಮೂಲ ಮದ್ದು ಎನ್ನುವುದು ಅಂಬೇಡ್ಕರ್ ವಿಚಾರವಾಗಿತ್ತು ಎಂದರು.

ಶಿಕ್ಷಣದ ಮೂಲಕ ಸಬಲೀಕರಣ, ಸಾಮಾಜಿಕ ಕಟ್ಟುಪಾಡುಗಳಿಗೆ ಸವಾಲು ಹಾಕುವ ಮತ್ತು ಭಯ ಹುಟ್ಟಿಸುವ ಸಾಧನವಾಗಿ ಶಿಕ್ಷಣಕ್ಕೆ ಅಂಬೇಡ್ಕರ್ ಅವರು ಬಹಳ ಒತ್ತು ನೀಡಿದ್ದರು ಎಂದು ಕೊಂಡಾಡಿದರು.

ತಳ ಸಮುದಾಯದಲ್ಲಿ ಆತ್ಮವಿಶ್ವಾಸವನ್ನು ಮೂಡಿಸುವ ಮತ್ತು ಹೊಸ ನಾಯಕರನ್ನು ಸೃಷ್ಟಿಸುವ ಸಾಧನವಾಗಿ ಶಿಕ್ಷಣ ಪ್ರಮುಖ ಪಾತ್ರ ವಹಿಸುತ್ತದೆ ಎಂದು ಅಂಬೇಡ್ಕರ್ ಅವರು ಬಲವಾಗಿ ನಂಬಿದ ಮಹಾನ್ ಚೇತನ ಎಂದರು.

ಭಾರತ ದೇಶಕ್ಕೆ ಅಂಬೇಡ್ಕರ್ ಅವರು ನೀಡಿದ ಸಂವಿಧಾನದ ಪ್ರತಿಫಲವಾಗಿ ಇಂದು ದೇಶದಲ್ಲಿ ಕೆಳ ವರ್ಗದ ಬಹುತೇಕ ನಾಯಕರು ಗುಣಮಟ್ಟದ ಶಿಕ್ಷಣ ಪಡೆದು, ರಾಜಕೀಯ ಕ್ಷೇತ್ರದಲ್ಲಿ ರಾಷ್ಟ್ರೀಯ ಪಕ್ಷದ ಅಧ್ಯಕ್ಷರಾಗಿ, ಮುಖ್ಯಮಂತ್ರಿಯಾಗಿ, ಸಚಿವರಾಗಿ ಸಾಮಾಜಿಕ ಸೇವೆ ಸಲ್ಲಿಸುತ್ತಿದ್ದಾರೆ ಎಂದರು.

ಒಟ್ಟಾರೆಯಾಗಿ ಇಂದಿನ ಯುವ ಪೀಳಿಗೆಗಳು ಬಾಬಾ ಸಾಹೇಬ್ ಅಂಬೇಡ್ಕರ್ ಅವರ ಜೀವನ ಚರಿತ್ರೆಯನ್ನು ಅರಿತುಕೊಳ್ಳುವ ಮೂಲಕ ಅವರ ತತ್ವ ಸಿದ್ಧಾಂತಗಳನ್ನು ಮೈಗೂಡಿಸಿಕೊಂಡು ತಮ್ಮ ಭವಿಷ್ಯವನ್ನು ರೂಪಿಸಿಕೊಳ್ಳಬೇಕು. ಅಲ್ಲದೆ ಗುರು ಹಿರಿಯರನ್ನು ಗೌರವದಿಂದ ಕಾಣಬೇಕು. ಜೊತೆಗೆ ಅಂಬೇಡ್ಕರ್ ಅವರ ಕನಸು ನನಸು ಮಾಡುವ ಪ್ರಾಮಾಣಿಕ ಪ್ರಯತ್ನ ಮಾಡಬೇಕು ಎಂದು ಸಲಹೆ ನೀಡಿದರು.

ಅಂಬೇಡ್ಕರ್ ಅವರ ವಿಚಾರಧಾರೆಗಳು ಎಲ್ಲರೂ ತಮ್ಮ ಜೀವನದಲ್ಲಿ ಅಳವಡಿಸಿಕೊಂಡು ಸರಿದಾರಿಯಲ್ಲಿ ನಡೆದಾಗ ಮಾತ್ರ ಅಂಬೇಡ್ಕರ್ ಅವರ ಜಯಂತಿ ಹಾಗೂ ಅವರ ಮೂರ್ತಿ ಅನಾವರಣ ಕಾರ್ಯಕ್ರಮಗಳಿಗೆ ವಿಶೇಷವಾದ ಅರ್ಥವನ್ನು ಬರುತ್ತದೆ ಎಂದರು.

ವಿಧಾನ ಪರಿಷತ್ ಸದಸ್ಯ ಡಾ. ಚಂದ್ರಶೇಖರ ಪಾಟೀಲ್, ವಿಧಾನ ಪರಿಷತ್ ಮಾಜಿ ಸದಸ್ಯ ಅರವಿಂದಕುಮಾರ ಅರಳಿ, ಜಿಪಂ. ಮಾಜಿ ಸದಸ್ಯ ವೀರಣ್ಣ ಪಾಟೀಲ್, ಅಬ್ದುಲ್ ಮನ್ನಾನ್ ಸೇಠ್, ಪಂಡಿತರಾವ ಚಿದ್ರಿ, ರಮೇಶ ಡಾಕುಳಗಿ, ಮಲ್ಲಿಕಾರ್ಜುನ್ ಮಹೇಂದ್ರಕರ್, ಮಲ್ಲಿಕಾರ್ಜುನ್ ಪ್ರಭಾ, ಸಮಿತಿ ಚಂದ್ರಕಾಂತ ಮೇಲ್ದೊಡ್ಡಿ, ಹುಲೆಪ್ಪ ಠಾಕೂರ, ಬಾಬುರಾವ ಮೇಲ್ದೊಡ್ಡಿ, ಬಸವರಾಜ ಮೇಲ್ದೊಡ್ಡಿ, ಕುಪೇಂದ್ರ ಮೇಲ್ದೊಡ್ಡಿ, ಶೇಖರ ಮೇಲ್ದೊಡ್ಡಿ, ಅಭಿಷೇಕ ಭೋಲಾ, ಸಂದೀಪ ನಡುವಿನಕೇರಿ, ಸಾಗರ ಮೇಲ್ದೊಡ್ಡಿ, ಮಹಾಂತೇಶ ಬೆಳಕೇರಿ, ಸೋಮನಾಥ ಮೇಲ್ದೊಡ್ಡಿ ಇದ್ದರು.

# ಶಾಮ ಪ್ರಸಾದ್ ಮುಖರ್ಜಿ ಅವರ ಪುಣ್ಯ ಸ್ಮರಣೆ ನಿಮಿತ್ಯ ಬಲಿದಾನ ದಿವಸ ಆಚರಣೆ




ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:– ತಾಲೂಕಿನ ಮನ್ನಾಏಖೇಳ್ಳಿ ಗ್ರಾಮದ ಹೊರವಲಯದ ಬೀದರ್ ರಸ್ತೆಯಲ್ಲಿರುವ ಪಕ್ಷದ ಕಚೇರಿಯಲ್ಲಿ ಅಪ್ರತಿಮ ದೇಶಭಕ್ತ, ಭಾರತೀಯ ಜನ ಸಂಘದ ಸಂಸ್ಥಾಪಕರಾದ ಡಾ. ಶಾಮ ಪ್ರಸಾದ್ ಮುಖರ್ಜಿ ಅವರ ಪುಣ್ಯ ಸ್ಮರಣೆಯನ್ನು ಬಲಿದಾನ ದಿವಸ ಎಂದು ಆಚರಿಸಲಾಯಿತು. ಡಾ. ಶಾಮ ಪ್ರಸಾದ್ ಮುಖರ್ಜಿ ಅವರ ಭಾವಚಿತ್ರಕ್ಕೆ ಪೂಜೆ ಸಲ್ಲಿಸಿ ಪುಷ್ಪಾರ್ಚನೆ ಮಾಡುವ ಮುಖಾಂತರ ಗೌರವ ನಮನಗಳನ್ನು ಸಲ್ಲಿಸಲಾಯಿತು. ಬಲಿದಾನ ದಿವಸದ ಕಾರ್ಯಕ್ರಮದಲ್ಲಿ ಮಂಡಲ ಅಧ್ಯಕ್ಷ ಗುರುನಾಥ ರಾಜಗಿರಿ ಬಗದಲ, ರಾಜ್ಯ ಪರಿಷತ್ ಸದಸ್ಯ ರಾಜರೆಡ್ಡಿ ಶಾಬಾದ್, ರಾಜ್ಯ ಮಹಿಳಾ ಮೋರ್ಚಾ ಕಾರ್ಯದರ್ಶಿ ಹೇಮಾ ತುಕ್ಕಾರೆಡ್ಡಿ, ಜಿಲ್ಲಾ ಉಪಾಧ್ಯಕ್ಷ ಪ್ರಭುಶೆಟ್ಟಿ ಮೆಂಗಾ, ಜಿಲ್ಲಾ ಕಾರ್ಯದರ್ಶಿ ಸಂತೋಷಿ ನಿಡುವಂಚ, ಸಂಜುಕುಮಾರ್ ಕೂಲಿ ಬಲಿದಾನ ದಿವಸದ ಸಂಚಾಲಕ ರಾಜು ವಡ್ಡಿ, ಸಹಸಂಚಾಲಕ ಗುಂಡಮ್ಮ ಬುಧೆರಾ, ಶರಣು ಪಾಟೀಲ್, ವೀರಶೆಟ್ಟಿ ಮಂಗಲಗಿ, ರಾಮುಲು ಮಂತ್ರಿ, ಆಬೆದಲಿ, ತಾಜುದ್ದೀನ್, ಶಿವಶಂಕರ್ ಫುಲೆ, ಬಾಬು ಬಿಟ್ಟೆ, ವೆಂಕಟರೆಡ್ಡಿ, ಪ್ರವೀಣ್ ತರಿ, ವೀರೇಶ್ ಬಾವುಗಿ, ಮೋಹನ್, ಸುಜಾತಾ ಬೋರಾಳ, ಸುನೀತಾ ಶಾಪುರ್, ನಾಗಮ್ಮ ಹೂಗಾರ್, ಶಿಲ್ಪಾ ಭಕ್ತ ಕುಮಾರ್, ರಾಚಪ್ಪ ಮೀನಕೇರಾ, ಸಂತೋಷ್ ಚೌಹಾನ್, ಎಲ್ಲೇಶ್ ರೇಖುಳಗಿ ಕುಪೇಂದ್ರ ರಾಥೋಡ್ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮಾನವನಿಗೆ ಬಾಹ್ಯ ಸೌಂದರ್ಯ ಎಷ್ಟು ಮುಖ್ಯವೋ, ಆಂತರಿಕ ಸೌಂದರ್ಯವೂ ಅಷ್ಟೇ ಮುಖ್ಯ:– ಮೇತ್ರೆ



ಮಲ್ಲಮ್ಮ ನುಡಿ ವಾರ್ತೆ

ಚಿಟಗುಪ್ಪ:–ಪಟ್ಟಣದ ಸರ್ಕಾರಿ ಕನ್ಯಾಪ್ರೌಢ ಶಾಲೆಯ ಆವರಣದಲ್ಲಿ ವಿದ್ಯಾರ್ಥಿಗಳೊಂದಿಗೆ ಯೋಗಾಸನ ಮಾಡುತ್ತಾ ವಿಶ್ವ ಯೋಗ ದಿನಾಚರಣೆ ಆಚರಿಸಲಾಯಿತು. ನಂತರ ಶಾಲೆಯ ಮುಖ್ಯ ಗುರುಗಳಾದ ಬಸವರಾಜ ಮೇತ್ರೆ ಮಾತನಾಡಿ, ಯೋಗವು ಬಹಳ ಹಳೆಯ ಅಭ್ಯಾಸವಾಗಿದ್ದು, ಇದು ಪ್ರಾಚೀನ ಕಾಲದಿಂದಲೂ ನಮ್ಮ ದೇಶದಲ್ಲಿ ಅನುಸರಿಸುತ್ತಾ ಬರಲಾಗುತ್ತಿದೆ. ಇತ್ತೀಚಿನ ದಿನಗಳಲ್ಲಿ ಪ್ರಪಂಚದಾದ್ಯಂತ ಅನೇಕ ದೇಶಗಳಲ್ಲಿ ತಮ್ಮ ಮಾನಸಿಕ ಒತ್ತಡ ಹಾಗೂ ದೈಹಿಕ ಸೌಂದರ್ಯಕ್ಕಾಗಿ ಯೋಗದ ಮೊರೆಹೋಗುತ್ತಿದ್ದಾರೆ. ಯೋಗವು ಮನಸ್ಸು ಮತ್ತು ದೇಹವನ್ನು ಸಂಪರ್ಕಿಸುವ ಪ್ರಾಚೀನ–ಪುರಾಣ ಕಾಲದಿಂದಲೂ ಒಂದು ಕಲೆಯಾಗಿ ರೂಢಿಯಾಗಿದೆ ಹೀಗಾಗಿ ಭಾರತವು ಜಗತ್ತಿಗೆ ನೀಡಿದ ಒಂದು ದೊಡ್ಡ ಕೊಡುಗೆ–ಯಾಗಿದೆ. ಮಾನವನಿಗೆ ಬಾಹ್ಯ ಸೌಂದರ್ಯ ಎಷ್ಟು ಮುಖ್ಯವೋ, ಆಂತರಿಕ ಸೌಂದರ್ಯವೂ ಅಷ್ಟೇ ಮುಖ್ಯವಾಗಿದೆ. ಪ್ರತಿ ನಿತ್ಯ ಯೋಗ ಮಾಡುವುದರಿಂದ ಉತ್ತಮವಾದ ಆರೋಗ್ಯಕರ ಜೀವನ ಹಾಗೂ ಮನಸ್ಸಿನ ಏಕಾಗ್ರತೆಗೆ ಯೋಗ ಅವಶ್ಯಕವಾಗಿದೆ ಎಂದು ಹೇಳಿದರು. ಈ ಸಂದರ್ಭದಲ್ಲಿ ಶಿಕ್ಷಕರಾದ ಸಂಜೀವನ ಭೋಸ್ಲೆ, ಗುಂಡಪ್ಪ ಕೋರೆ, ಪಂಚಶೀಲ ಕಟ್ಟಿಮನಿ, ಅಂಬಿಕಾ ಮಾಳಗೆ, ಮಲ್ಲಮ್ಮ ಹುಡಗಿ, ಹಸನ್ ಲಚ್ಚಿಕೆ, ಶಿಲ್ಪಾ, ಬ್ಲೇಸಿರಾಣಿ, ಸುಮಾ ರೆಡ್ಡಿ, ಆಯಿಷ್ಯ ಸೇರಿದಂತೆ ವಿದ್ಯಾರ್ಥಿಗಳಿದ್ದರು.

# ಕಮಲನಗರ ಪಿ.ಡಿ.ಓ ತಂಬಾಕೆ ವಿರೂದ್ಧ ಸಿ.ಐ.ಡಿ ತನಿಖೆಯಾಗಬೇಕು: ಮುಧಾಳೆ

ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 23 : ಕಮಲನಗರ ಗ್ರಾಮ ಪಂಚಾಯತ ಅಭಿವೃದ್ಧಿ ಅಧಿಕಾರಿ ರಾಜಕುಮಾರ ತಂಬಾಕೆ ವ್ಯಾಪಕ ಭ್ರಷ್ಟಾಚಾರ ಎಸಗಿದ್ದು, ಅವರ ವಿರೂದ್ಧ ಸಿ.ಐ.ಡಿ ತನಿಖೆಯಾಗಬೇಕೆಂದು ಕಮಲನಗರ ನಾಗರಿಕ ಸೇವಾ ಸಮಿತಿ ಅಧ್ಯಕ್ಷ ದಿಲಿಪ ಮುಧಾಳೆ ಆಗ್ರಹಿಸಿದರು.

ಸೋಮವಾರ ನಗರದ ಜಿಲ್ಲಾ ಪತ್ರಿಕಾ ಭವನದಲ್ಲಿ ಪತ್ರಿಕಾ ಗೋಷ್ಠಿ ಉದ್ದೇಶಿಸಿ ಮಾತನಾಡಿರುವ ಅವರು, ಪಿಡಿ.ಓ ತಂಬಾಕೆ ಅವರ ವಿರೂದ್ಧ ನಾನು ಈ ತಿಂಗಳ 16ರಂದು ಕರ್ನಾಟಕ ಲೋಕಾಯುಕ್ತ-ಕ್ಕೆ ಮತ್ತು ಬೀದರ್ ಜಿಲ್ಲಾ ಪಂಚಾಉಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳಿಗೆ ದೂರು ಸಲ್ಲಿಸಿದ್ದೇನೆ. ನನ್ನ ವಿರೂದ್ಧ ಸೇಡು ತೀರಿಸಿಕೊಳ್ಳಲು ಮೊನ್ನೆಯಷ್ಟೆ ಪಿ.ಡಿ.ಓ ರಾಜಕುಮಾರ ಹಾಗೂ ಅಲ್ಲಿಯ ಗ್ರಾ.ಪಂ ಅಧ್ಯಕ್ಷರು ಮತ್ತು ಸದಸ್ಯರು ಕೂಡಿಕೊಂಡು ಬೀದರ್ ಪತ್ರಿಕಾ ಭವನದಲ್ಲಿ ಸುದ್ದಿಗೋಷ್ಠಿ ನಡೆಸಿ ನನ್ನ ವಿರೂದ್ಧ ಅವಹೇಳನಕಾರಿ ಮಾತನಾಡಿದ್ದಾರೆ. ನನ್ನನ್ನು ಓರ್ವ ಬ್ರೋಕರ್, ದಲಾಲ್ ಎಂದು ಸಂಬೋಧಿಸಿ ಅವಮಾನ ಮಾಡಿದ್ದಾರೆ. ನಾನೊಬ್ಬ ಹೋರಾಟಗಾರ. ಬಡವರ ಆಸ್ತಿ ದಾಖಲೆ 9/11 ಮಾಡಿಕೊಡಲು ಸುಮಾರು 10 ಸಾವಿರದಿಂದ 50 ಸಾವಿರದ ವರೆಗೆ ಬೇಡಿಕೆ ಇಡುತ್ತಿದ್ದು, ಹಣ ಕೊಟ್ಟವರಿಗೆ ದಾಖಲೆ ನೀಡುತ್ತಿದ್ದು, ಕೊಡದವರಿಗೆ ಸತಾಯಿಸಿ ಅವರು ಗ್ರಾ.ಪಂಗೆ ಬರದಂತೆ ನೋಡಿಕೊಳ್ಳುತ್ತಿರುವರು. ಆದರೆ ಹಣ ನೀಡಿದವರಿಗೆ ಮೂರು ಸಲ ಬೇಕಿದ್ದರೂ 9/11 ದಾಖಲೆ ಮಾಡಿ ಕೊಡುತ್ತಿರುವರು. ಇವರಿಗೆ ಸಹಕಾರ ನೀಡಲು ಭಾಲ್ಕಿ ಕ್ರಾಸ್‌ರೋಡ್‌ನಿಂದ ಸಂಗಮ ವರೆಗೆ ದಲ್ಲಾಳಿಗಳು ಕಾಣದ ಕೈಗಳಾಗಿ ಕೆಲಸ ಮಾಡುತ್ತಿದ್ದಾರೆ. ಇದೆಲ್ಲದರ ವಿರೂದ್ಧ ದಾಖಲೆ ನಿರ್ಮಿಸಿ ದೂರು ನೀಡಿದ್ದೇನೆ. ಸ್ಥಳಿಯರ ಸಂಸತ್ತೆಂದರೆ ಗ್ರಾ.ಪಂ. ಅಲ್ಲಿಯೆ ಭ್ರಹ್ಮಾಂಡ ಭ್ರಷ್ಟಾಚಾರ ನಡೆಯುತ್ತಿದ್ದರೆ ಹೇಗೆ? ಎಂದು ದಿಲಿಪ ಪ್ರಶ್ನೆ ಮಾಡಿದ್ದಾರೆ.

ಪಿ.ಡಿ.ಓ ರಾಜಕುಮಾರ ಅವರ ವಿರೂದ್ಧ ಲೋಕಾಯುಕ್ತದಲ್ಲಿ ಕೇಸ್ ದಾಖಲಾಗಿರುವಾಗ ನನ್ನ ವಿರೂದ್ಧ ಗ್ರಾ.ಪಂ ಪ್ರತಿನಿಧಿಗಳನ್ನು ಛು ಬಿಟ್ಟು ಬಾಯಿಗೆ ಬಂದಂತೆ ಮಾತನಾಡಿಸುತ್ತಿದ್ದಾರೆ. ಈ ವಿಚಾರವಾಗಿ ಜಿಲ್ಲಾಧಿಕಾರಿಗಳಿಗೂ ಸಹ ದೂರು ಸಲ್ಲಿಸಲಾಗಿದೆ.



ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತರಾಜ್ ಸಚಿವ ಪ್ರಯಂಕ ಖರ್ಗೆ ಅವರಿಗೂ ಸಹ ದೂರು ರವಾನಿಸಲಾಗಿದ್ದು, ವ್ಯಾಪಕ ಭ್ರಷ್ಟಾಚಾರದಲ್ಲಿ ಶಾಮಿಲಾಗಿರುವ ಗ್ರಾ.ಪಂ ಅಭಿವೃದ್ಧಿ ಅಧಿಕಾರಿ ತಂಬಾಕೆ ಅವರ ವಿರೂದ್ಧ ಸಿ.ಒ.ಡಿ ತನಿಖೆ ಮಾಡಿಸಿ ಅವರನ್ನು ಸೇವೆಯಿಂದ ವಜಾ ಮಾಡುವಂತೆ ಮುಧಾಳೆ ಒತ್ತಾಯಿಸಿದರು.

ಲಂಚ ಪಡೆದು ನಕಲಿ ದಾಖಲೆ ನೀಡುತ್ತಿರುವ ಗ್ರಾ.ಪಂ ಅಧಿಕಾರಿಗಳು: ದಸ್ತಗೀರ ಗಂಭೀರ ಆರೋಪ ಕಮಲನಗರ ತಾಲೂಕಿನ ಚಿಕ್ಲಿ(ಯು) ಗ್ರಾ.ಪಂ ನಲ್ಲಿ ಇಂತಹದೆ ಒಂದು ಭ್ರಷ್ಟಾಚಾರ ನಡೆಯುತ್ತಿದ್ದು, ಅದಕ್ಕೆ ನಾನೇ ನೇರ ಪ್ರತ್ಯಕ್ಷ ಸಾಕ್ಷಿಯಾಗಿರುವೆ ಎಂದು ಸಾಮಾಜಿಕ ಹೋರಾಟಗಾರ ಗುಲಾಮ ದಸ್ತಗೀರ ಆರೋಪಿಸಿದ್ದಾರೆ.

ಜಿಲ್ಲಾ ಪತ್ರಿಕಾ ಭವನದಲ್ಲಿ ಸೋಮವಾರ ಸುದ್ದಿಗಾರರೊಂದಿಗೆ ಮಾತನಾಡಿರುವ ದಸ್ತಗೀರ, ಚಿಕ್ಲಿ)(ಯು) ಗ್ರಾಮದ ಶಾದೂಲ್ ತಂದೆ ಅಹಮ್ಮದ್ ಖಾನ್ ಈತನಿಗೆ ಖೊಟ್ಟಾ ದಾಖಲೆ ಸೃಷ್ಟಿಸಿ ನನ್ನ ಜಾಗದಲ್ಲಿ ಆತನಿಗೆ ಮನೆ ಕಟ್ಟಲು ಇಲ್ಲಿಯ ಗ್ರಾ.ಪಂ ಅಧಿಕಾರಿಗಳು ಅನುಮತಿ ನೀಡಿರುತ್ತಾರೆ. ಅಲ್ಲದೆ ಆತನಿಂದ ಲಂಚ ಸ್ವೀಕರಿಸಿ ಸರ್ಕಾರಿ ಮನೆ ಸಹ ಮಂಜೂರಿ ಮಾಡಿದ್ದಾರೆ. ಅಲ್ಲಿಯ ಪಿ.ಡಿ.ಓ ವಿಜಯಕುಮಾರ ಧೂಳಪ್ಪ ಅವರಿಗೆ, ಕಮಲನಗರ ತಾ.ಪಂ ಕಾರ್ಯನಿರ್ವಹಣಾಧಿಕಾರಿ, ಜಿ.ಪಂಸಿ.ಇ.ಒ, ಜಿಲ್ಲಾಧಿಕಾರಿಗಳಿಗೆ ಸಹ ದೂರು ನೀಡಲಾಗಿದೆ. ಆದರೂ 2 ವರ್ಷಗಳಿಂದ ಇಲ್ಲಿಯ ವರೆಗೆ ಯಾವುದೇ ಕ್ರಮ ವಹಿಸದೇ ಇರುವುದು ಎಲ್ಲರ ಮೇಲೂ ಅನುಮಾನಕ್ಕೆ ಎಡೆಮಾಡಿಕೊಟ್ಟಿದೆ. ಹೊಕ್ರಾಣಾ ಪೋಲಿಸ್ ಠಾಣೆಗೂ ಸಹ ದೂರು ನೀಡಿದರೂ ಯಾವುದೇ ಪ್ರಯೋಜನವಾಗಲಿಲ್ಲ ಎಂದು ದಸ್ತಗೀರ ಬೇಸರ ವ್ಯಕ್ತಪಡಿಸಿದರು.

ಈಗಲಾದರೂ ಜಿಲ್ಲಾಧಿಕಾರಿಗಳು ಹಾಗೂ ಎಸ್.ಪಿ ಅವರು ಈ ವಿಚಾರವನ್ನು ಗಂಭೀರವಾಗಿ ಪರಿಗಣಿಸಿ ಆಕ್ರಮವಾಗಿ ನನ್ನ ಆಸ್ತಿ ಕಬಳಿಸಿದ ಶಾದೂಲ್ ತಂದೆ ಅಹಮ್ಮದ್ ಖಾನ್ ವಿರೂದ್ಧ ಕಾನೂನು ಕ್ರಮ ಜರುಗಿಸಬೇಕು, ನಕಲಿ ದಾಖಲೆ ಸೃಷ್ಟಿಸಿದ ಚಿಕ್ಲಿ(ಯು) ಗ್ರಾ.ಪಂ ಅಧಿಕಾರಿಗಳ ವಿರೂದ್ಧ ಕಠಿಣ ಕ್ರಮ ಜರುಗಿಸಿ ಸೇವೆಯಿಂದ ಅಮಾನತು ಮಾಡಬೇಕು, ಆಕ್ರಮವಾಗಿ ನಿರ್ಮಿಸಿದ ಮನೆಯನ್ನು ನೆಲಸಮಗೊಳಿಸಿ ಬಡವನಾದ ನನಗೆ ನ್ಯಾಯ ಒದಗಿಸಬೇಕೆಂದು ದಸ್ತಗೀರ ಒತ್ತಾಯಿಸಿದರು.

ಕಮಲನಗರ ದಿನೇಶ ಎನ್ನುವವರು ಇದೇ ವೇಳೆ ಕಮಲನಗರ ಗ್ರಾ.ಪಂ ನಿಂದ ತಮಗಾದ ಅನ್ಯಾಯ ವಿವರಿಸಿದರು.

# ಮಾಸಿಕ ವಚನ ಮಂಟಪ, ಸಸಿ ವಿತರಣೆ ನಾಳೆ

ಮಲ್ಲಮ್ಮ ನುಡಿ ವಾರ್ತೆ

ಬೀದರ.ಜೂ.23: ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ವತಿಯಿಂದ ನಗರದ ಗಾಂಧಿಗಂಜನ ಬಸವೇಶ್ವರ ದೇವಸ್ಥಾನದಲ್ಲಿ ಜೂನ್ 25 ರಂದು ಸಂಜೆ 6ಕ್ಕೆ ಮಾಸಿಕ ವಚನ ಮಂಟಪ, ವಿಶ್ವ ಪರಿಸರ ದಿನಾಚರಣೆ ಹಾಗೂ ಸಸಿ ವಿತರಣೆ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ.

ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಪರಿಸರ ಅಧಿಕಾರಿ ಮೃತ್ಯುಂಜಯ ಉದ್ಘಾಟಿಸುವರು.

ಬಸವ ಮುಕ್ತಿ ಮಂದಿರದ ಜಗದ್ಗುರು ಶಿವಯೋಗೀಶ್ವರ ಸ್ವಾಮೀಜಿ ಸಾನಿಧ್ಯ, ಮಹಾಸಭಾ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ಅಧ್ಯಕ್ಷತೆ ವಹಿಸುವರು.

ಸಾಹಿತಿ ಡಾ. ಬಸವರಾಜ ಬಲ್ಲೂರ 'ಶರಣರ ಪರಿಸರ ಪ್ರೇಮ' ಕುರಿತು ಉಪನ್ಯಾಸ ನೀಡುವರು.

ವಲಯ ಅರಣ್ಯ ಅಧಿಕಾರಿ ವಿಜಯಕುಮಾರ ವಿ. ಜಾಧವ್, ರೋಟರಿ ಕ್ಲಬ್ ಬೀದರ್ ಅಧ್ಯಕ್ಷ ಸೋಮಶೇಖರ ಬಿ. ಪಾಟೀಲ, ರೋಟರಿ ಕ್ಲಬ್ ಬೀದರ್ ಫೋರ್ಟ್ ಅಧ್ಯಕ್ಷ ಗುಂಡಪ್ಪ ಗೋಢೆ, ರೋಟರಿ ಕ್ಲಬ್ ಆಫ್ ಬೀದರ್ ನ್ಯೂ ಸೆಂಚುರಿ ಅಧ್ಯಕ್ಷ ಶಿವಕುಮಾರ ಪಾಖಾಲ್, ರೋಟರಿ ಕ್ಲಬ್ ಬೀದರ್ ಕ್ವಿನ್ಸ್ ಅಧ್ಯಕ್ಷೆ ಜಯಶ್ರೀ ಪ್ರಭಾ, ಇನ್ನರ್ ವ್ಹೀಲ್ ಕ್ಲಬ್ ಅಧ್ಯಕ್ಷೆ ಕವಿತಾ ಪ್ರಭಾ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

ರಾಜ್ಯ ಅಲ್ಪಸಂಖ್ಯಾತರ ಆಯೋಗದ ಸದಸ್ಯೆ ಮನದೀಪ್ ಕೌರ್ ಅವರನ್ನು ಅಭಿನಂದಿಸಿ, ಬಸವೇಶ್ವರ ಪತ್ತಿನ ಸಹಕಾರ ಸಂಘದ ಅಧ್ಯಕ್ಷ ಸಿದ್ದಯ್ಯ ಕಾವಡಿ ಹಾಗೂ ಉಪಾಧ್ಯಕ್ಷ ಉದಯಕುಮಾರ ಲದ್ದೆ ಅವರನ್ನು ಸನ್ಮಾನಿಸಲಾಗುವುದು.

ಕಲಾವಿದರಾದ ಅಶ್ವಿನಿ ರಾಜಕುಮಾರ ದಂಪತಿ ವಚನ ಗಾಯನ ನಡೆಸಿಕೊಡುವರು.

ಯುವ ಉದ್ಯಮಿ ಯೋಗೇಶ ಶ್ರೀಗರಿ ಕಾರ್ಯಕ್ರಮದ ಭಕ್ತಿ ದಾಸೋಹಿ ಆಗಿರುವರು ಎಂದು ಜಾಗತಿಕ ಲಿಂಗಾಯತ ಮಹಾಸಭಾದ ಜಿಲ್ಲಾ ಘಟಕದ ಅಧ್ಯಕ್ಷ ಬಸವರಾಜ ಧನ್ನೂರ ತಿಳಿಸಿದ್ದಾರೆ.

# ಆನ್‌ಲೈನ್ ಅಂಚೆ ಸೇವೆಗೆ ಚಾಲನೆ

ಬೀದರ. ಜೂ. 23 : ಅಂಚೆ ಇಲಾಖೆಯ ವಿವಿಧ ಸೌಲಭ್ಯಗಳ ಆನ್‌ಲೈನ್ ಸೇವೆಗೆ ಅಂಚೆ ಅಧೀಕ್ಷಕ ವಿ.ಎಲ್. ಚಿತಕೋಟೆ ಇಲ್ಲಿಯ ಪ್ರಧಾನ ಅಂಚೆಕಚೇರಿಯಲ್ಲಿ ಸೋಮವಾರ ಚಾಲನೆ ನೀಡಿದರು.



ಅಂಚೆ ಇಲಾಖೆಯು ಅಡ್ವಾನ್ಸ್ಡ್ ಪೋಸ್ಟಲ್ ಟೆಕ್ನಾಲಜಿ (ಎಪಿಟಿ) ಅಭಿವೃದ್ಧಿಪಡಿಸಿದ್ದು, ಇಲಾಖೆಯ ವಿವಿಧ ಸೇವೆಗಳು ಇನ್ನು ಆನ್‌ಲೈನ್ ಮೂಲಕವೂ ದೊರೆಯಲಿವೆ ಎಂದು ಅವರು ತಿಳಿಸಿದರು. ಬುಕ್ಕಿಂಗ್ ಹಾಗೂ ಡೆಲಿವರಿ ಆನ್‌ಲೈನ್ ಮೂಲಕ ಮಾಡಬಹುದು. ಗ್ರಾಹಕರು ಅಂಚೆ ಮೂಲಕ ವಸ್ತು ಕಳುಹಿಸಬೇಕಿದ್ದರೆ ಆನ್‌ಲೈನ್‌ನಲ್ಲಿ ಬುಕ್ ಮಾಡಬಹುದು. ಬುಕ್ ಮಾಡಿದ ನಂತರ ಪೋಸ್ಟ್‌ಮ್ಯಾನ್ ಮನೆಗೆ ಬಂದು ಪಾರ್ಸಲ್ ಪಡೆಯುತ್ತಾರೆ. ಪಾರ್ಸಲ್ ಕಳುಹಿಸಿದ ನಂತರ ಗ್ರಾಹಕರಿಗೆ ಮಾಹಿತಿ ದೊರೆಯುತ್ತದೆ. ಗ್ರಾಹಕರು ತಮ್ಮ ಪಾರ್ಸಲ್ ಎಲ್ಲಿದೆ ಎಂಬ ಮಾಹಿತಿ ಸಹ ಪಡೆಯಬಹುದು ಎಂದು ಹೇಳಿದರು. ಪಾರ್ಸಲ್ ತಲುಪಿದ ನಂತರ ಪೋಸ್ಟ್‌ಮ್ಯಾನ್ ಗ್ರಾಹಕರ ಡಿಜಿಟಲ್ ಸಹಿ ಪಡೆಯುತ್ತಾರೆ. ಪಾರ್ಸಲ್ ತಲುಪಿಸಿದ ನಂತರ ಕಳುಹಿಸಿದವರಿಗೆ ಸಂದೇಶ ರವಾನೆಯಾಗುತ್ತದೆ. ಸಾಮಾನ್ಯ ಪತ್ರಗಳು, ಲಕೋಟೆಗಳನ್ನು ಕಳುಹಿಸಲು ಭವಿಷ್ಯದಲ್ಲಿ ಬಾರ್‌ಕೋಡ್ ಸೌಲಭ್ಯ ಒದಗಿಸಲಾಗುತ್ತದೆ. ಈ ಸೇವೆಯಡಿ ತಮ್ಮ ಲಕೋಟೆ, ಪತ್ರ ಯಾವ ಸ್ಥಳದಲ್ಲಿದೆ ಎಂಬ ಮಾಹಿತಿಯನ್ನು ಗಾಹಕರು ಆನ್‌ಲೈನ್ ಮೂಲಕ ಪಡೆಯಬಹುದು ಎಂದು ತಿಳಿಸಿದರು. ಜಿಲ್ಲೆಯ ನಗರ, ಪಟ್ಟಣ, ಗ್ರಾಮೀಣ ಪ್ರದೇಶಗಳಲ್ಲಿ ಆನ್‌ಲೈನ್ ಸೇವೆಗೆ ಅಗತ್ಯ ಸಿದ್ಧತೆಗಳು ಪೂರ್ಣಗೊಂಡಿವೆ. ಈಗಾಗಲೇ ಸಿಬ್ಬಂದಿಗೆ ಆನ್‌ಲೈನ್ ಸೇವೆಗಳ ಕುರಿತು ತರಬೇತಿ ಕೂಡ ನೀಡಲಾಗಿದೆ ಎಂದು ಹೇಳಿದರು. ಉಪ ಅಂಚೆ ಅಧೀಕ್ಷಕ ಲೆಫ್ಟಿನೆಂಟ್ ಕರ್ನಲ್ ನಾಗರಾಜ, ರಾಜೇಂದ್ರ ವಗ್ಗೆ, ಪ್ರಕಾಶ ಗೌಳಿ, ಅಭಿನವ, ಪುರೋಹಿತ, ಚಿದಾನಂದ ಕಟ್ಟಿ ಮತ್ತಿತರರು ಇದ್ದರು. ಸುಭಾಷ್ ದೊಡ್ಡಿ ನಿರೂಪಿಸಿದರು.

ಅಂಚೆ ಇಲಾಖೆಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಮಂಗಲಾ ಭಾಗವತ್ ವಂದಿಸಿದರು.

## ಔರಾದ್‌ನಲ್ಲಿ ವಿದ್ಯಾರ್ಥಿ ವೇತನ ಅಭಿಯಾನ




ಮಲ್ಲಮ್ಮ ನುಡಿ ವಾರ್ತೆ

ಬೀದರ.ಜೂ. 23 : ಸಮಾಜ ಕಲ್ಯಾಣ ಇಲಾಖೆ ವತಿಯಿಂದ ಔರಾದ್ ಪಟ್ಟಣದಲ್ಲಿ ಸೋಮವಾರ ವಿದ್ಯಾರ್ಥಿ ವೇತನ ಅಭಿಯಾನ ನಡೆಯಿತು.

ಸಮಾಜ ಕಲ್ಯಾಣ ಇಲಾಖೆಯ ತಾಲ್ಲೂಕು ಸಹಾಯಕ ನಿರ್ದೇಶಕ ಅನಿಲಕುಮಾರ ಮೇಲ್ದೊಡ್ಡಿ ಹಾಗೂ ಸಿಬ್ಬಂದಿ ಪಟ್ಟಣದ ಬೌದ್ಧನಗರ, ನಾಲಂದಾ ಪದವಿಪೂರ್ವ ಕಾಲೇಜು, ಪರಿಶಿಷ್ಟ ಜಾತಿ ಅಲೆಮಾರಿ ಕಾಲೊನಿ ಹಾಗೂ ಜನತಾ ನಗರದಲ್ಲಿ ಸಮಾಜ ಕಲ್ಯಾಣ ಇಲಾಖೆ ವಸತಿ ನಿಲಯ, ವಿದ್ಯಾರ್ಥಿ ವೇತನ ಹಾಗೂ ಪ್ರೋತ್ಸಾಹ ಧನದ ಕುರಿತು ವಿದ್ಯಾರ್ಥಿಗಳು ಹಾಗೂ ಪಾಲಕರಿಗೆ ಮಾಹಿತಿ ನೀಡಿದರು.

ಪರಿಶಿಷ್ಟ ಜಾತಿಯ ವಿದ್ಯಾರ್ಥಿಗಳು ಶೈಕ್ಷಣಿಕ ಪ್ರಗತಿಗೆ ವಸತಿ ನಿಲಯಗಳ ಪ್ರಯೋಜನ ಪಡೆಯಬೇಕು. ಇಲಾಖೆಯ ವಸತಿ ನಿಲಯಗಳಲ್ಲಿ ವಿದ್ಯಾರ್ಥಿಗಳಿಗೆ ಉಚಿತ ಊಟ, ವಸತಿ, ಸಮವಸ್ತ್ರ ಸೇರಿದಂತೆ ವಿವಿಧ ಸೌಲಭ್ಯಗಳಿವೆ. ಅಧ್ಯಯನಕ್ಕೆ ಒಳ್ಳೆಯ ವಾತಾವರಣವೂ ಇದೆ ಎಂದು ಅನಿಲಕುಮಾರ ಮೇಲ್ದೊಡ್ಡಿ ತಿಳಿಸಿದರು.

ವಿದ್ಯಾರ್ಥಿಗಳಿಗೆ ಶಿಷ್ಯವೇತನ, ಪ್ರೋತ್ಸಾಹ ಧನ ಸೌಲಭ್ಯ ಇದೆ. ಮೊದಲ ಯತ್ನದಲ್ಲಿ ಸ್ನಾತಕೋತ್ತರ ಪದವಿ, ಸ್ನಾತಕ ಪದವಿ, ಪಿಯುಸಿ, ಎಸ್‌ಎಸ್‌ಎಲ್‌ಸಿಯಲ್ಲಿ ಪ್ರಥಮ ದರ್ಜೆಯಲ್ಲಿ ತೇರ್ಗಡೆಯಾದವರಿಗೆ ರೂ. 7,500 ರಿಂದ ರೂ. 40 ಸಾವಿರ ವರೆಗೆ ಪ್ರೋತ್ಸಾಹ ಧನ ಕೊಡಲಾಗುತ್ತಿದೆ ಎಂದು ಹೇಳಿದರು.

ಪ್ರಥಮ ದರ್ಜೆ ಸಹಾಯಕ ಸತೀಶ್ ಕುಂದನ್, ದ್ವಿತೀಯ ದರ್ಜೆ ಸಹಾಯಕ ಖದೀರ್, ವಾರ್ಡನ್ ಪ್ರಿಯಾಂಕ ಶಾಸವಲ್ಲಿ, ಸಿಬ್ಬಂದಿ ಶ್ರೀಮಂತ, ಸಂತೋಷ್ ಮತ್ತಿತರರು ಇದ್ದರು.

# ಪರಿಶಿಷ್ಟ ಜಾತಿ ಒಳಮೀಸಲಾತಿ:
## ಸಮೀಕ್ಷಾ ಅವಧಿ ಜೂ.೩೦ ರವರೆಗೆ ವಿಸ್ತರಣೆ

ಬೀದರ. ಜೂ. 23: ಬೀದರ ತಾಲೂಕಿನ ಪರಿಶಿಷ್ಟ ಜಾತಿ ಸಮಗ್ರ ಸಮೀಕ್ಷೆ 2025ರ ಒಳಮೀಸಲಾತಿಯ ಸಮೀಕ್ಷೆಯಲ್ಲಿ ಇದುವರೆಗೂ ಭಾಗವಹಿಸದೇ ಇರುವ ಕರ್ನಾಟಕ ರಾಜ್ಯ-ಕ್ಕೆ ಸೇರಿದ ಪರಿಶಿಷ್ಟ ಜಾತಿ ಕುಟುಂಬದವರಿಗೆ ದಿನಾಂಕ: 23-06-2025 ರಿಂದ 30-06-2025ರ ವರೆಗೆ ಕಾಲಾವಧಿಯನ್ನು ವಿಸ್ತರಿಸಿ ಸಮೀಕ್ಷೆಯಲ್ಲಿ ಪಾಲ್ಗೊಳ್ಳಲು ಕರ್ನಾಟಕ ಒನ್, ಗ್ರಾಮ ಒನ್ ಮತ್ತು ಬಾಪೂಜಿ ಸೇವಾ ಕೇಂದ್ರ ಸ್ಥಳಗಳಲ್ಲಿ ಸಮೀಕ್ಷೆಗೆ ಅವಕಾಶವನ್ನು ಕಲ್ಪಿಸಲಾಗಿರುತ್ತದೆ ಹಾಗೂ ಆನ್‌ಲೈನ್ ಮೂಲಕ https://schedulecastesurvey.karnataka.gov.in/selfdeclaration ಈ ಲಿಂಕ್ ಮೂಲಕ ಸ್ವಯಂ ಘೋಷಣೆ ಮಾಡಿಕೊಳ್ಳಲು ಸಹ ದಿನಾಂಕ 30-06-2025 ರವರೆಗೆ ವಿಸ್ತರಿಸಲಾಗಿದೆಂದು ಬೀದರ ಸಮಾಜ ಕಲ್ಯಾಣ ಇಲಾಖೆಯ ಸಹಾಯಕ ನಿರ್ದೇಶಕರು(ಗ್ರೇಡ್-ಖ) ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಯೋಗವು ಆರೋಗ್ಯಕರ ಜೀವನಶೈಲಿಯ ಪ್ರಮುಖ ಭಾಗವಾಗಿದೆ:ಚನ್ನಬಸವ ಘಾಳೆ

ಮಲ್ಲಮ್ಮ ನುಡಿ ವಾರ್ತೆ

ಕಮಲನಗರ:ಜೂ.23: ಯೋಗವು ಆರೋಗ್ಯಕರ ಜೀವನಶೈಲಿಯ ಪ್ರಮುಖ ಭಾಗವಾಗಿದೆ. ದೈಹಿಕ ಮತ್ತು ಮಾನಸಿಕ ಆರೋಗ್ಯ ಎರಡನ್ನೂ ಸುಧಾರಿಸಲು ಯೋಗವನ್ನು ಅಭ್ಯಾಸ ಮಾಡುವುದು ಒಳ್ಳೆಯ ಉಪಯೋಗ ಇದೆ ಎಂದು ಚನ್ನಬಸವ ಘಾಳೆ ನುಡಿದರು.



ಪಟ್ಟಣದ ಡಾ॥ ಚನ್ನಬಸವ ಪಟ್ಟದ್ದೇವರು ಪ್ರೌಢ ಶಾಲೆ ಹಾಗೂ ಶ್ರೀ ಗುರಪ್ಪ ಟೊಣ್ಣೆ ಪ್ರಾಥಮಿಕ ಶಾಲೆ, ಗುರುಕಾರುಣ್ಯ ಪಬ್ಲಿಕ್ ಸ್ಕೂಲ್‌ನಲ್ಲಿ ಶನಿವಾರ ವಿಶ್ವ ಯೋಗ ದಿನಾಚರಣೆ ಕಾರ್ಯಕ್ರಮದಲ್ಲಿ ಶಾಲೆಯ ಆಡಳಿತ ಅಧಿಕಾರಿ ಚನ್ನಬಸವ ಘಾಳೆ ಮಾತನಾಡಿದರು.

ಸ್ವಯಂ ನಿಯಂತ್ರಣವನ್ನು ನಿರ್ಮಿಸುತ್ತದೆ ಯೋಗದ ನಿಯಂತ್ರಿತ ಚಲನೆಗಳು ನಿಮ್ಮ ಜೀವನದ ಎಲ್ಲಾ ಅಂಶಗಳಲ್ಲಿ ಆ ಸ್ವಯಂ ನಿಯಂತ್ರಣವನ್ನು ಹೇಗೆ ನೀಡಬೇಕೆಂದು ಯೋಗ ಮಾಡುವುದರಿಂದ ಲಾಭವಾಗುತ್ತೆ. ಮಕ್ಕಳು ದಿನಾಲೂ ಯೋಗ ಮಾಡಿ ನೆನಪಿನ ಶಕ್ತಿ ಮತ್ತು ಶರೀರಕವಾಗಿ ಆರೋಗ್ಯಕ್ಕೆ ಸಹಾಯವಾಗುತ್ತದೆ ಎಂದು ಹೇಳಿದರು.

ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಯೋಗಪಟುಗಳಾದ ಶ್ರೀನಿವಾಸ ಪಟವಾರಿ ಆಗಮಿಸಿ ಯೋಗದ ಮಹತ್ವ ತಿಳಿಸುವುದರೊಂದಿಗೆ ಯೋಗಮಾಡುವ ವಿಧಾನವನ್ನು ಮತ್ತು ತಾವು ಯೋಗ ಮಾಡಿ ತಿಳಿಸಿಕೊಟ್ಟರು.

ಶಾಲೆಯ ಶಿಕ್ಷಕಿಯಾದ ಪೂಜಾ.ಬಿ ಶಾಲಾಮಕ್ಕಳಿಂದ ಯೋಗನೃತ್ಯ ಮಾಡಿಸಿ ಗಮನ ಸೆಳೆದರು.

ಕ್ರಾರ್ಯಕ್ರಮದಲ್ಲಿ ಅತಿಥಿಗಳಾಗಿ ಮಾಹಾದೇವ ಬಿರಾದರ, ಪಬ್ಲಿಕ್ ಶಾಲೆಯ ಪ್ರಾಂಶುಪಾಲರಾದ ನಿಲಕಂಠ ಪಾಂಡ್ರೆ ದೈಹಿಕ ಶಿಕ್ಷಕರಾದ ಜ್ಞಾನೋಬಾ ಹಂಡೆ, ದೇವಿದಾಸ ಡಾಂಗೆ, ರಾಜಕುಮಾರ ರಾಂಪೂರೆ ಸೂರ್ಯಕಾಂತ ಭೋಸಗೆ ಹಾಗೂ ಶಾಲೆಯ ಶಿಕ್ಷಕರಾದ ಭರತ ನಂದನವರೆ, ಅರ್ಚನಾ ಮುಚಳಂಬೆ, ರಾಜೇಶ್ವರಿ, ಪರಮೇಶ್ವರ ಕುಂದನ, ವಿವೇಕಾನಂದ ಬಿರಾದರ, ಸೌಂದರ್ಯ ಶೇಖರ ಖೆಳಗೆ, ಮತ್ತು ಸಿಬ್ಬಂಧಿ ವರ್ಗ ಉಪಸ್ಥಿತರಿದ್ದರು.

## ಗೊಲ್ಲಾಳೇಶ್ವರ ವಚನಗಳಲ್ಲಿ ಅರಿವಿನ ಬೆಳಕು:ಡಾ.ಬಸವಲಿಂಗ ಪಟ್ಟದ್ದೇವರು

ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ:ಜೂ.23: ಕುರುಬ ಗೊಲ್ಲಾಳೇಶ್ವರ ವಚನಗಳು ಅನುಭಾವದ ಖಣಿಯಾಗಿವೆ. ಬಸವಣ್ಣನವರ ನೇತೃತ್ವದಲ್ಲಿ ರೂಪತಾಳಿದ ಕಲ್ಯಾಣಕ್ರಾಂತಿಯಲ್ಲಿ ಭಾಗಿಯಾದ ಗೊಲ್ಲಾಳೇಶ್ವರರು ಹತ್ತು ವಚನಗಳು ಬರೆದಿದ್ದಾರೆ ಎಂದು ಬಸವಕಲ್ಯಾಣ ಅನುಭವ ಮಂಟಪ ಟ್ರಸ್ಟ್ ಅಧ್ಯಕ್ಷ ನಾಡೋಜ ಡಾ.ಬಸವಲಿಂಗ ಪಟ್ಟದ್ದೇವರು ಹೇಳಿದರು.



ಪಟ್ಟಣದ ಚನ್ನಬಸವಾಶ್ರಮ ಪರಿಸರದಲ್ಲಿ ಹಿರೇಮಠ ಸಂಸ್ಥಾನದ ವತಿಯಿಂದ ಭಾನುವಾರ ಆಯೋಜಿಸಿದ್ದ 312ನೆಯ ಮಾಸಿಕ ಶರಣ ಸಂಗಮ ಮತ್ತು ಕುರುಬ ಗೊಲ್ಲಾಳೇಶ್ವರ ಜಯಂತಿ ಕಾರ್ಯಕ್ರಮದ ದಿವ್ಯ ಸಾನ್ನಿಧ್ಯ ವಹಿಸಿ ಅವರು ಮಾತನಾಡಿದರು.

ಅವರ ವಚನಗಳಲ್ಲಿ ಬೆಡಗು ಕಾಣುಬರುತ್ತದೆ. ಅನುಭಾವದ ಆಳ, ಅಗಲ ಗೋಚರಿಸುತ್ತದೆ. ಅವರ ಜೀವನ ಮತ್ತು ವಚನ ಸಂದೇಶ ನಮಗೆ ಅರಿವಿನ ಬೆಳಕು ನೀಡುತ್ತವೆ ಎಂದರು.

ಝೀ ಕನ್ನಡ ವಾಹಿನಿಯ ಸರಿಗಮಪ ಸೀಜನ್-21ರ ಸ್ಪರ್ಧೆಯಲ್ಲಿ ಗಡಿ ಭಾಗದ ಬೀದರ್‌ನ ಶಿವಾಜಿ ಸ್ವಾಮಿ ಅವರು ವಿಜೇತರಾಗಿರುವುದು ಅತ್ಯಂತ ಖುಷಿ ತಂದು ಕೊಟ್ಟಿದೆ. ಆ ವೇದಿಕೆಯಲ್ಲಿ ಶರಣ ಸಂಸ್ಕೃತಿಯನ್ನು ಮೆರೆದಿರುವುದು ನಮ್ಮೆಲ್ಲರಿಗೆ ಹೆಮ್ಮೆ ತಂದಿದೆ. ಅವರ ಕುಟುಂಬದ ಎಲ್ಲರೂ ಹಣೆಯ ಮೇಲೆ ವಿಭೂತಿ ಧರಿಸಿ ತಮ್ಮ ಕಲೆ ಪ್ರದರ್ಶನ ಮಾಡುವ ಮೂಲಕ ನಾಡಿಗೆ ಶರಣ ಸಂಸ್ಕೃತಿಯ ಪ್ರಭಾವ ತೋರಿಸಿದ್ದಾರೆಂದು ಹೇಳಲು ಖುಷಿಯಾಗುತ್ತದೆ. ಆಕೆ ಇನ್ನೂ ಉತ್ತರೋತ್ತರವಾಗಿ ಬೆಳೆಯಲೆಂದು ಹಾರೈಸಿದರು.

ನಿಂಗಣ್ಣ ಎಸ್ ಗಚ್ಚಿನಮನಿ ಕಾರ್ಯಕ್ರಮ ಉದ್ಘಾಟಿಸಿದರು. ಪುರಸಭೆ ಮಾಜಿ ಅಧ್ಯಕ್ಷ ಶರಣಪ್ಪ ಛತ್ರೆ ಅಧ್ಯಕ್ಷತೆ ವಹಿಸಿದ್ದರು. ಶಿವರಾಜ ಮಲ್ಲೇಶಿ ಬಸವ ಗುರುವಿನ ಪೂಜೆ ನೆರವೇರಿಸಿದರು.

ಹಿರೇಮಠ ಸಂಸ್ಥಾನದ ಪೀಠಾಧಿಪತಿ ಗುರುಬಸವ ಪಟ್ಟದ್ದೇವರು, ಮಹಾಲಿಂಗ ಸ್ವಾಮೀಜಿ ನೇತೃತ್ವ ವಹಿಸಿದ್ದರು. ಈ ಸಂದರ್ಭದಲ್ಲಿ ಪುರಸಭೆ ಸದಸ್ಯ ಬಾಲಾಜಿ ಖೇಡಕರ್, ಪ್ರಮುಖರಾದ ಪಂಡರಿ ಮೇತ್ರೆ, ಸಂಜು ಗುಂಜರಗೆ, ಶಿವದಾಸ ಸ್ವಾಮಿ ಸೇರಿದಂತೆ ಹಲವರು ಇದ್ದರು. ಶ್ರೀದೇವಿ ಶರಣಪ್ಪ ಬಿರಾದಾರ್ ಕಾರ್ಯಕ್ರಮದ ಭಕ್ತಿ ದಾಸೋಹ ವಹಿಸಿ ಕೊಂಡಿದ್ದರು. ವೀರಣ್ಣ ಕುಂಬಾರ ನಿರೂಪಿಸಿ, ವಂದಿಸಿದರು.

ಸನ್ಮಾನ :ಇದೇವೇಳೆ ಝೀ ಕನ್ನಡ ವಾಹಿನಿಯ ಸರಿಗಮಪ ಸೀಜನ್-21ರ ವಿಜೇತೆ ಶಿವಾನಿ ಶಿವದಾಸ ಸ್ವಾಮಿ ಅವರನ್ನು ಶ್ರೀಮಠದ ಪರವಾಗಿ ಸತ್ಕರಿಸಲಾಯಿತು. ಅಂತರ ರಾಷ್ಟ್ರೀಯ ಶಾಂತಿ ಪುರಸ್ಕೃತ ಡಾ.ಮನ್ಮಥ ಢೋಳೆ, ಪಿಎಚ್‌ಡಿ ಪುರಸ್ಕೃತ ಶಿವಲಿಂಗ ಹೇಡೆ ಅವರನ್ನು ಉಭಯ ಪೂಜ್ಯರು ಸನ್ಮಾನಿಸಿ, ಆಶೀರ್ವದಿಸಿದರು.

## ರಸ್ತೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ನಾಡಗೌಡ ಚಾಲನೆ



ಮಲ್ಲಮ್ಮ ನುಡಿ ವಾರ್ತೆ


ತಾಳಿಕೋಟಿ: ತಾಲೂಕಿನ ಕೊಣ್ಣೂರಗ್ರಾಮದಮುಖ್ಯರಸ್ತೆಯಿಂದ ಹೂವಿನ ಹಿಪ್ಪರಗಿಗೆ ಸಂಪರ್ಕ ಕಲ್ಪಿಸುವ ಕೆ ಆರ್ ಐ ಡಿ ಎಲ್ ಇಲಾಖೆ ವ್ಯಾಪ್ತಿಯ ರೂ 350 ಲಕ್ಷ ಮೊತ್ತದ ರಸ್ತೆ ಸುಧಾರಣೆ ಕಾಮಗಾರಿಗೆ ಶಾಸಕ, ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದಅಧ್ಯಕ್ಷಸಿ.ಎಸ್.ನಾಡಗೌಡ ಅಪ್ಪಾಜಿ ಅವರು ಶನಿವಾರ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ಚಾಲನೆ ನೀಡಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಮತಕ್ಷೇತ್ರ ವ್ಯಾಪ್ತಿಯ ಎಲ್ಲಾ ಗ್ರಾಮಗಳಿಗೆ ಅಗತ್ಯವಿದ್ದಲ್ಲಿ ರಸ್ತೆಗಳ ಸುಧಾರಣೆಗೆ ಆದ್ಯತೆ ಕೊಟ್ಟು ಕೆಲಸ ಮಾಡುತ್ತಿದ್ದೇನೆ ಇವತ್ತು ಇಲ್ಲಿ ರೂ 3.50 ಕೋಟಿ ರಸ್ತೆ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದ್ದೇನೆ ಇದು ಈ ಭಾಗದ ಜನರ ಬಹು ದಿನಗಳ ಬೇಡಿಕೆಯಾಗಿತ್ತು ಸದರಿ ರಸ್ತೆಯ ಕಾಮಗಾರಿ ಗುಣಮಟ್ಟದಾಗಿರುವಂತೆ ನೋಡಿಕೊಳ್ಳಲು ಇಲಾಖೆಯ ಅಧಿಕಾರಿಗಳಿಗೆ ಸೂಚಿಸುತ್ತೇನೆ ಎಂದರು. ವೇದ ಮೂರ್ತಿ ಶ್ರೀನಾಥ ಹಿರೇಮಠ ಪೂಜಾ ಕಾರ್ಯಕ್ರಮ ನೆರವೇರಿಸಿದರು. ಕಾರ್ಯಕ್ರಮದಲ್ಲಿ ಗ್ರಾಮ ಅಧ್ಯಕ್ಷೆ ಬಸ್ಸಮ್ಮ ಮಾದರ, ಪಿಡಿಓ ಸಾವಿತ್ರಿ ಬಿರಾದಾರ, ತಾಪಂ ಸಹಾಯಕ ನಿರ್ದೇಶಕಿ ಸುಜಾತಾ ಯಡ್ರಾಮಿ, ಕಾಂಗ್ರೆಸ್ ಮುಖಂಡ ಸಿ.ಬಿ.ಅಸ್ಕಿ, ಶರಣುಭೂಪಾಲ ದೇಶಮುಖ, ಪ್ರಕಾಶ ಪಾಟೀಲ, ಸಂಗನಗೌಡ ದೇಸಾಯಿ, ಸಂಗನಗೌಡ ಅಸ್ಕಿ, ವೀರೇಶಗೌಡ ಅಸ್ಕಿ ಎಇಇ ಆನಂದ ಸ್ವಾಮಿ, ಜೆಇ ಸಚಿನ್ ಮುಗಳಿ, ಸಾಹೇಬಗೌಡ ಬಿರಾದಾರ, ಗ್ರಾಪಂ ಸದಸ್ಯರು, ಗಣ್ಯರು ಇದ್ದರು.

## ಡಾ. ಶ್ಯಾಮ ಪ್ರಸಾದ್ ಮುಖರ್ಜಿ ಅವರ ಭಾವಚಿತ್ರಕ್ಕೆ ಪುಷ್ಪಾರ್ಪಣೆ ಸಲಿಕೆ

ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಜಿಲ್ಲೆಯ ಕುಕನೂರು ತಾಲೂಕಿನ ಮಸಬ ಹಂಚಿನಾಳ ಗ್ರಾಮದ ಬಿಜೆಪಿ ಪಕ್ಷದ ಕಚೇರಿಯಲ್ಲಿ ಮಾಜಿ ಸಚಿವರಾದ ಹಾಲಪ್ಪ ಆಚಾರ್ ಅವರು ಕಚೇರಿಯಲ್ಲಿ ಡಾ. ಶ್ಯಾಮ ಪ್ರಸಾದ್ ಮುಖರ್ಜಿಯವರ ಬಲಿದಾನ ದಿವಸ ಅಂಗವಾಗಿ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿದರು. ಈ ಸಂದರ್ಭದಲ್ಲಿ ಮಂಡಲ ಅಧ್ಯಕ್ಷರಾದ ಮಾರುತಿ ಗಾವರಳ, ಹಿರಿಯರಾದ ಶರಣಪ್ಪ ಬಣ್ಣದಬಾವಿ, ಮಂಜುನಾಥ ನಾಡಗೌಡ್ರು, ಲಕ್ಷ್ಮಣ ಕಾಳಿ , ಹನುಮಂತ ಬನ್ನಿಕೊಪ್ಪ, ಬಸವರಾಜ್ ಪೂಜಾರ್, ಹಾಗೂ ಕುಕನೂರ ಪ ಪಂ ಸದಸ್ಯರು ಮತ್ತು ಪಕ್ಷದ ಕಾರ್ಯಕರ್ತರು ಉಪಸ್ಥಿತರಿದ್ದರು.

## ಟೂರಿಸ್ಟ್ ಪೊಲೀಸ್ 20 ಜನಕ್ಕೆ ಡ್ರೆಸ್ ವಿತರಣೆ–ಡಿಸಿ ಸುಶೀಲಾ.ಬಿ



ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 23 : ಜಿಲ್ಲೆಯ ಪ್ರವಾಸಿ ತಾಣಗಳಲ್ಲಿ ಪ್ರಸ್ತುತಕರ್ತವ್ಯನಿರ್ವಹಿಸುತ್ತಿರುವ ಪ್ರವಾಸಿ ಮಿತ್ರ ಸಿಬ್ಬಂದಿಗಳಿಗೆ ಸಮವಸ್ತ್ರಗಳನ್ನು ಪ್ರವಾಸಿ ಮಿತ್ರರ ಸಮವಸ್ತ್ರ (ಬ್ಯಾಚ್–1) 10 ಜನ ಹಾಗೂ ಪ್ರವಾಸಿ ಮಿತ್ರರ ಸಮವಸ್ತ್ರ (ಬ್ಯಾಚ್–2) 10 ಜನ, ಟೂರಿಸ್ಟ್ ಪೊಲೀಸ್ ಒಟ್ಟು 20 ಜನರಿಗೆ ಡ್ರೆಸ್ ವಿತರಿಸಿದೆ ಎಂದು ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ ಅವರು ಹೇಳಿದರು.

ಯಾದಗಿರಿ ನಗರದ ಜಿಲ್ಲಾಧಿಕಾರಿಗಳ ಸಭಾಂಗಣದಲ್ಲಿ ಜೂನ್ 23ರ ಸೋಮವಾರರಂದು ಪ್ರವಾಸೋದ್ಯಮ ಇಲಾಖೆಯಿಂದ ಪ್ರವಾಸಿ ಯೋಜನೆಯಡಿ ಪ್ರವಾಸಿ ಮಿತ್ರಗಳಾಗಿ ಜಿಲ್ಲಾಧಿಕಾರಿ ಟೂರಿಸ್ಟ್ ಪೊಲೀಸ್ 20 ಜನಕ್ಕೆ ಡ್ರೆಸ್ ವಿತರಣೆ ಮಾಡಲಾಯಿತು.

ಟೂರಿಸ್ಟ್ ಪೊಲೀಸ್ ಒಟ್ಟು 20 ಜನರು ಜಿಲ್ಲಾ ಕಮಾಂಡೆಂಟ್ ಈರಣ್ಣ ಬಡಿಗೇರ್ ಹಾಗೂ ಟೂರಿಸ್ಟ್ ಪೊಲೀಸರಾದ ಭೀಮರಾಯ ಹುಲುಕಲ್ ಬನ್ನಯ ಸ್ವಾಮಿ ದಶರಥ ನಕ್ಕಲ್ ಹಣಮಂತ್ರಾಯಗೌಡ ಪಾಟೀಲ್ ವಿಶ್ವನಾಥ ಬಡಿಗೇರ್ ಅವರಿಗೆ ವಿತರಣೆ ಮಾಡಿದೆ ಎಂದು ಹೇಳಿದರು.

ಪ್ರವಾಸಿ ಮಿತ್ರರ ಸಮವಸ್ತ್ರ ವಿತರಣೆ (ಬ್ಯಾಚ್–1) ಸಮವಸ್ತ್ರ 1 ಖಾಕಿ ಸಮವಸ್ತ್ರ, ಒಂದು ಜೊತೆ ಶೂ, ಒಂದು ಬ್ಲಾಕ್ ಬೆಲ್ಟ್, ಪ್ರವಾಸಿ ಮಿತ್ರ ಬಕಲ್, ಒಂದು ಕ್ಯಾಪ್, ಒಂದು ಜಾಕೆಟ್, ಸೈಡ್ ಮತ್ತು ಶೋಲ್ಡರ್ ಬ್ಯಾಡ್ಜ್ ನೇಮ ಬೋರ್ಡ್‌ಗಳ, ಟೂರಿಸ್ಟ್ ಜಾಕೆಟ್ ವಿಜಿಲ್ ಚೈನ್ 10 ಜನಕ್ಕೆ ದಶರಥ ತಂದೆ ದ್ಯಾವಣ್ಣ, ವಿಶ್ವನಾಥ ತಂದೆ ಸಕ್ರೆಪ್ಪ, ವಿಶ್ವನಾಥ ತಂದೆ ಮಹದೇವಪ್ಪ, ಹಣಮಂತ್ರಾಯ ತಂದೆ ನಾಗಪ್ಪ, ಕಾಶಿನಾಥ ತಂದೆ ಸಾಯಬಣ್ಣ, ಭೀಮರಾಯ ತಂದೆ ಮಹದೇವ, ಮಾನಯ್ಯ ತಂದೆ ದೇವಿಂದ್ರಪ್ಪ, ಬಾಸುಮಿಯಾ ತಂದೆ ದವಲಸಾಬ, ಬನ್ನಯ್ಯ ತಂದೆ ಮಲ್ಲಿಕಾರ್ಜುನಯ್ಯ, ರಾಮರೆಡ್ಡಿ ತಂದೆ ಭಿಮರೆಡ್ಡಿ ಅವರಿಗೆ ಡ್ರೆಸ್ ವಿತರಿಸಿ ಪ್ರವಾಸಿ ತಾಣಗಳಲ್ಲಿ ಪ್ರವಾಸಿಗರ ಸಂರಕ್ಷಣೆ ಹಾಗೂ ಸುರಕ್ಷಣೆ ದೃಷ್ಟಿಯಿಂದ ಪ್ರವಾಸಿ ಮಿತ್ರಗಳಾಗಿ ಎಂದರು.

ಅದರಂತೆ ಪ್ರವಾಸಿ ಮಿತ್ರರ ಸಮವಸ್ತ್ರ ವಿತರಣೆ (ಬ್ಯಾಚ್–2) ಸಮವಸ್ತ್ರ 01 ಖಾಕಿ ಸಮವಸ್ತ್ರ, ಸಮವಸ್ತ್ರ ಒಂದು ಜೊತೆ ಶೂ, ಒಂದು ಬ್ಲಾಕ್ ಬೆಲ್ಟ್, ಪ್ರವಾಸಿ ಮಿತ್ರ ಬಕಲ್, ಒಂದು ಕ್ಯಾಪ್, ಒಂದು ಜಾಕೆಟ್, ಸೈಡ್ ಮತ್ತು ಶೋಲ್ಡರ್ ಬ್ಯಾಡ್ಜ್, ನೇಮ ಬೋರ್ಡ್‌ಗಳ, ಟೂರಿಸ್ಟ್ ಜಾಕೆಟ್ ವಿಜಿಲ್ ಚೈನ್ 10 ಜನಕ್ಕೆ ಸುರೇಂದ್ರಕುಮಾರ ಎಮ್, ಮಾಂತೇಶ ತಂದೆ ನಾಗಪ್ಪ, ಮೌಲಾಲಿ ತಂದೆ ಖಾಸಿಂಸಾಬ, ವೆಂಕಟೇಶ ಕುಲಕರ್ಣಿ, ರಾಮಲಿಂಗಪ್ಪ ಸಂಗನ, ಶರಣಪ್ಪ ತಂದೆ ಮಲ್ಲಪ್ಪ, ಸುರೇಷ ತಂದೆ ನಿಂಗಣ್ಣಾ, ಅಮರಪ್ಪಾ ತಂದೆ ರಂಗಯ್ಯ, ಪ್ರೇಮಸುಂದರ ತಂದೆ ರಾಜಯ್ಯ, ಕಾಶಿಂ ತಂದೆ ಸೋಪಿಲಾಲ್ ಡ್ರೆಸ್ ವಿತರಿಸಿ ಪ್ರವಾಸಿ ತಾಣಗಳಲ್ಲಿ ಸುರಕ್ಷತೆ ಸೇವೆ ನೀಡಿ ಎಂದು ತಿಳಿಸಿದರು. ಈ ಸಂದರ್ಭದಲ್ಲಿ ಯಾದಗಿರಿ ಪ್ರವಾಸೋದ್ಯಮ ಇಲಾಖೆ ಸಹಾಯಕ ನಿರ್ದೇಶಕರು ರಾಮಚಂದ್ರಪ್ಪ ಕಟ್ಟಿಮನಿ, ಪ್ರವಾಸಿ ಪ್ರವರ್ತಕರಾದ ಪರಮೇಶ್ವರ ಇನ್ನಿತರರು ಉಪಸ್ಥಿತರಿದ್ದರು.

## ಅಭಿವೃದ್ಧಿ ಕಾರ್ಯಗಳಲ್ಲಿ ಜನರ ಸಹಕಾರ ಅಗತ್ಯ: ಶಾಸಕ ನಾಡಗೌಡ




ಮಲ್ಲಮ್ಮ ನುಡಿ ವಾರ್ತೆ

ತಾಳಿಕೋಟಿ: ಗ್ರಾಮಗಳು ಸುಧಾರಣೆಗೊಂಡರೆ ದೇಶದ ಪ್ರಗತಿ ಸಾಧ್ಯವಾಗುತ್ತದೆ ಇವು ಒಂದಕ್ಕೊಂದು ಪೂರಕವಾಗಿವೆ. ಆದ್ದರಿಂದ ಮತಕ್ಷೇತ್ರ ವ್ಯಾಪ್ತಿಗೆ ಬರುವ ಗ್ರಾಮಗಳ ಮೂಲಭೂತ ಸೌಕರ್ಯ ಅದರಲ್ಲೂ ವಿಶೇಷವಾಗಿ ರಸ್ತೆ ಸುಧಾರಣೆಗೆ ಆದ್ಯತೆ ಕೊಟ್ಟು ಕೆಲಸ ಮಾಡುತ್ತಿದ್ದೇನೆ ಎಂದು ಶಾಸಕ, ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಗಮದ ಅಧ್ಯಕ್ಷ ಸಿ.ಎಸ್.ನಾಡಗೌಡ(ಅಪ್ಪಾಜಿ) ಹೇಳಿದರು. ತಾಲೂಕಿನ ಬಳಗಾನೂರ ಕ್ರಾಸ್ ಬಳಿ ಬಳಗಾನೂರದಿಂದ ಸಾಸನೂರ ಗ್ರಾಮದವರೆಗೆ ಸಂಪರ್ಕ ಕಲ್ಪಿಸುವ ಕೇಂದ್ರ ರಸ್ತೆ ನಿಧಿ ಯೋಜನೆಯ ರೂ.600 ಲಕ್ಷ ವೆಚ್ಚದಲ್ಲಿ ನಿರ್ಮಾಣಗೊಂಡ ರಸ್ತೆಯನ್ನು ಉದ್ಘಾಟಿಸಿ ಅವರು ಶನಿವಾರ ಮಾತನಾಡಿದರು. ಕ್ಷೇತ್ರದ ಅಭಿವೃದ್ಧಿ ಕಾರ್ಯಗಳನ್ನು ಹಂತ ಹಂತವಾಗಿ ಮಾಡಲಾಗುವುದು ಇದಕ್ಕೆ ಕ್ಷೇತ್ರದ ಜನರ ಸಹಕಾರ ನನಗೆ ಬೇಕು ಎಂದರು. ಕಾಂಗ್ರೆಸ್ ಮುಖಂಡ ಸಿ.ಬಿ.ಅಸ್ಕಿ ಮಾತನಾಡಿ ಶಾಸಕ ಅಪ್ಪಾಜಿ ಅವರು ನುಡಿದಂತೆ ನಡೆಯುವ ವ್ಯಕ್ತಿ ಅವರ ಮಾತು ಕಡಿಮೆ ಆದರೆ ಕೆಲಸ ಹೆಚ್ಚು, ಅವರು ಪ್ರಚಾರ ಪ್ರಿಯರಲ್ಲ, ಜನರ ಪ್ರಾಮಾಣಿಕ ಸೇವೆ ಮಾಡುವ ಕಾಳಜಿ ಹೊಂದಿದವರಾಗಿದ್ದಾರೆ. ಇವತ್ತು ಎರಡು ವರ್ಷದ ಅವಧಿಯಲ್ಲಿ 200 ಕೋಟಿಯ ಅನುದಾನ ತಂದು ಕ್ಷೇತ್ರದಲ್ಲಿ ಕೆಲಸ ಮಾಡುತ್ತಿದ್ದಾರೆ ಈಗಾಗಲೇ ಹಲವಾರು ಕಾಮಗಾರಿಗಳು ಮುಗಿದಿದ್ದರೆ ಕೆಲವು ಕಾಮಗಾರಿಗಳು ಪ್ರಗತಿ ಹಂತದಲ್ಲಿವೆ ಇನ್ನೂ ಮೂರು ವರ್ಷಗಳ ಅವಧಿ ಅವರ ಬಳಿ ಇದೆ ಸಾಕಷ್ಟು ಕೆಲಸ ಮಾಡುವ ಅವಕಾಶವಿದೆ ಇದಕ್ಕೆ ನಮ್ಮೆಲ್ಲರ ಸಹಕಾರ ಅವರಿಗೆ ಬೇಕು ಈ ಭಾಗದ ಜನರ ಪರವಾಗಿ ನಾನು ಅವರನ್ನು ಅಭಿನಂದಿಸುತ್ತೇನೆ ಎಂದರು. ತಾಳಿಕೋಟಿ ಪುರಸಭೆ ಮಾಜಿ ಸದಸ್ಯ ಪ್ರಭುಗೌಡ ಮದರಕಲ್ಲ ಪ್ರಾಸ್ತಾವಿಕವಾಗಿ ಮಾತನಾಡಿದರು. ಉದ್ಘಾಟನಾ ಕಾರ್ಯಕ್ರಮದಲ್ಲಿ ವೇದಮೂರ್ತಿ ಶ್ರೀಕಂಠಯ್ಯಮುತ್ಯಾ, ಮುಖಂಡರಾದ ಶರಣಭೂಪಾಲ ದೇಶಮುಖ, ಪ್ರಕಾಶ ಪಾಟೀಲ ತಮ್ಮೊಡ್ಡಿ, ಗುತ್ತಿಗೆದಾರ ಬಿ.ಎಂ. ಅರಳಿಕೋಟಿ, ಬಸನಗೌಡ ಬಗಲಿ, ಸಂಗಣ್ಣ ಸಾಹುಕಾರ ಬಿರಾದಾರ, ಸಂಗನಗೌಡ ಅಸ್ಕಿ, ಮಲ್ಲನಗೌಡ ಯಾದಗಿರಿ, ಚೆನ್ನಣ್ಣ ದೇಸಾಯಿ, ಮಲ್ಲಣ್ಣ ದೋರನಹಳ್ಳಿ, ಕಡಕೋಳ ಸರ್, ಚಂದ್ರಶೇಖರ ಸಾಸನೂರ, ಶಾಂತಗೌಡ ಕೊಣ್ಣೂರ ಮತ್ತೀತರರು ಇದ್ದರು. ಗಾಯಕ ಹೈದರಶಾ ಮಕಾನದಾರ ಹಾಗೂ ಸಂಗಡಿಗರು ಸಂಗೀತ ಕಾರ್ಯಕ್ರಮ ನಡೆಸಿಕೊಟ್ಟರು. ಶಿಕ್ಷಕ ಆರ್. ಎಸ್.ವಾಲಿಕಾರ ಕಾರ್ಯಕ್ರಮ ನಿರೂಪಿಸಿ ಕೊನೆಯಲ್ಲಿ ವಂದಿಸಿದರು.

## ಚರಂಡಿ ದುರ್ವಾಸನೆಯಿಂದ ಜನ ಹೈರಾಣ



ಮಲ್ಲಮ್ಮ ನುಡಿ ವಾರ್ತೆ

ಲಿಂಗಸುಗೂರು: ತಾಲೂಕಿನ ಮಾವಿನಬಾವಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಬರುವ ಹುನುಕುಂಟಿ ಗ್ರಾಮದಲ್ಲಿ ಚರಂಡಿಗಳನ್ನು ಸಕಾಲದಲ್ಲಿ ಸ್ವಚ್ಛಗೊಳಿಸದೇ ಇರುವುದರಿಂದ ದುರ್ವಾಸನೆ ಬೀರುತ್ತಿದ್ದು, ಕೂಡಲೇ ಸ್ವಚ್ಛಗೊಳಿಸುವಂತೆ ಗ್ರಾಮಸ್ಥರು ಆಗ್ರಹಿಸಿದ್ದಾರೆ.

ಸ್ವಚ್ಛತೆ ಸಿಬ್ಬಂದಿ ನಿಯಮಿತವಾಗಿ ಬಂದು ಚರಂಡಿಗಳನ್ನು ಸ್ವಚ್ಛಗೊಳಿಸುವುದಿಲ್ಲ. ಇದರಿಂದ ಎಲ್ಲೆಂದರಲ್ಲಿ ಚರಂಡಿಗಳು ಬ್ಲಾಕ್ ಆಗಿ ನೀರು ನಿಂತು ಗಬ್ಬು ವಾಸನೆ ಹರಡುತ್ತಿದೆ.

ಇದರಿಂದ ಸುತ್ತಲಿನ ನಿವಾಸಿಗಳು ಮೂಗು ಮುಚ್ಚಿಕೊಂಡು ತಿರುಗಾಡುವಂತಾಗಿದೆ. 2ನೇ ವಾರ್ಡ್‌ನಲ್ಲಂತೂ ಎಲ್ಲೆಂದರಲ್ಲಿ ಚರಂಡಿಗಳು ತುಂಬಿಕೊಂಡು ಗ್ರಾಮಸ್ಥರಿಗೆ ತೊಂದರೆಯಾಗಿದೆ. ಎರಡನೇ ವಾರ್ಡ್‌ನಲ್ಲಿ ಚರಂಡಿ ತುಂಬಿದ್ದರಿಂದ ದುರ್ವಾಸನೆ ಈ ಕುರಿತು ಗ್ರಾಪಂನವರಿಗೆ ಅನೇಕ ಬಾರಿ ತಿಳಿಸಿದರೂ ಸ್ವಚ್ಛಗೊಳಿಸುತ್ತೇವೆ ಎಂಬ ಆಶ್ವಾಸನೆ ನೀಡುತ್ತಾರೆ. ಆದರೆ ಅದು ಕಾರ್ಯರೂಪಕ್ಕೆ ಬರುತ್ತಿಲ್ಲ ಎಂಬುದು ಗ್ರಾಮಸ್ಥರ ಆರೋಪವಾಗಿದೆ.

ಗ್ರಾಪಂನವರು ಕೂಡಲೇ ನಿಯಮಿತವಾಗಿ ಸ್ವಚ್ಛತೆ ಕೈಗೊಳ್ಳಬೇಕು. ಸೊಳ್ಳೆಗಳು ಹೆಚ್ಚಾಗಿ ರೋಗ ಬರುವ ಮುನ್ನವೇ ಕ್ರಮ ಕೈಗೊಳ್ಳದಿದ್ದರೆ ಗ್ರಾಪಂ ಮುಂದೆ ಪ್ರತಿಭಟನೆ ನಡೆಸುವುದು ಅನಿವಾರ್ಯವಾಗುತ್ತದೆ ಎಂದು ಗ್ರಾಮಸ್ಥರು ಎಚ್ಚರಿಸಿದ್ದಾರೆ.

## ರಾಯಚೂರ ಗ್ರಾಮೀಣ ಕ್ಷೇತ್ರದ ಸಿಎಂ ಕಾರ್ಯಕ್ರಮಕ್ಕೆ ಸಹಸ್ರಾರು ಜನ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರ ಜೂನ್ 23– ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಜೂನ್ 23ರಂದು ನಡೆದ ಮಾನ್ಯ ಮುಖ್ಯಮಂತ್ರಿಗಳ ಕಾರ್ಯಕ್ರಮಕ್ಕೆ ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದ ಪ್ರತಿಯೊಂದು ಹಳ್ಳಿಯ ಜನರು ತಂಡೋಪತಂಡವಾಗಿ ಸೇರಿದ್ದರು.

ಸಿಎಂ ಕಾರ್ಯಕ್ರಮದಲ್ಲಿ ಭಾಗಿಯಾಗಲು ಉತ್ಸುಕರಾಗಿ ಜನರು ಬೆಳಗ್ಗೆಯಿಂದಲೇ ವಾಹನಗಳನ್ನು ಏರಿ ಯರಗೇರಾ ಗ್ರಾಮದತ್ತ ಬರುವ ದೃಶ್ಯಗಳು ಎಲ್ಲೆಡೆ ಕಾಣಿಸಿತು.

ಸಾರಿಗೆ ಬಸ್ಸುಗಳು, ಕ್ರೂಷರ್, ಮಿನಿಬಸ್, ಟಿಪ್ಪರ್, ಮಿನಿಲಾರಿ ಏರಿ ಜನರು ಯರಗೇರಾ ಗ್ರಾಮದತ್ತ ಆಗಮಿಸುತ್ತಿದ್ದರು. ರಾಯಚೂರ ಗ್ರಾಮೀಣ ಕ್ಷೇತ್ರ ಸೇರಿದಂತೆ, ರಾಯಚೂರ ನಗರ, ಸುತ್ತಲಿನ ಜಿಲ್ಲೆಗಳಾದ ಯಾದಗಿರಿ, ಕಲಬುರಗಿ, ಬೀದರ, ಬಳ್ಳಾರಿ, ವಿಜಯನಗರ ಮತ್ತು ಕೊಪ್ಪಳ ಜಿಲ್ಲೆಯ ಜನರು ಸಹ ಕಾರ್ಯಕ್ರಮಕ್ಕೆ ಆಗಮಿಸಿ, ಅದ್ದೂರಿಯಾಗಿ ನಡೆದ ಕಾರ್ಯಕ್ರಮಕ್ಕೆ ಸಾಕ್ಷಿಯಾದರು.

ಪೂರ್ವ ನಿಗದಿಯಂತೆ ಬೆಂಗಳೂರಿನಿಂದ ವಾಯುಮಾರ್ಗವಾಗಿ ಹೊರಟ ಮುಖ್ಯಮಂತ್ರಿಗಳು ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯದ ಹೆಲಿಪ್ಯಾಡಗೆ ಆಗಮಿಸಿ, ವಿಶ್ವವಿದ್ಯಾಲಯದ ಆವರಣದಲ್ಲಿ ನಡೆದ ವಿವಿಧ ಕಾರ್ಯಕ್ರಮಗಳಲ್ಲಿ ಭಾಗಿಯಾಗಿ ನಂತರ ಯರಗೇರಾ ಗ್ರಾಮದಲ್ಲಿನ ಮುಖ್ಯವೇದಿಕೆಯತ್ತ ಆಗಮಿಸುತ್ತಿದ್ದಂತೆ ಅಭಿಮಾನಿಗಳು ಸಿಳ್ಳೆ ಹಾಕಿ ಸಂಭ್ರಮಿಸಿ ಸ್ವಾಗತಿಸಿದರು.

ಅಚ್ಚುಕಟ್ಟಾದ ವ್ಯವಸ್ಥೆ: ಕಾರ್ಯಕ್ರಮದಲ್ಲಿ ಕಿಕ್ಕಿರಿದು ಸೇರಿದ್ದ ಜನತೆಗೆ ಯಾವುದೇ ತೊಂದರೆಯಾಗದಂತೆ ಮುಖ್ಯ ವೇದಿಕೆಯ ಬಳಿಯಲ್ಲಿ ಊಟ ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಅಚ್ಚುಕಟ್ಟಾಗಿ ಮಾಡಲಾಗಿತ್ತು. ಸರಕಾರಿ ಬಸ್‌ಗಳು ಸೇರಿದಂತೆ ಹೆಚ್ಚಿನ ಖಾಸಗಿ ವಾಹನಗಳ ಮೂಲಕ ಜನತೆಗೆ ಉತ್ತಮವಾದ ಸಾರಿಗೆ ವ್ಯವಸ್ಥೆ ಕಲ್ಪಿಸಲಾಗಿತ್ತು.

ಶಾಸಕರಿಂದ ಅಭಿನಂದನೆ: ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಅಂದಾಜು 936.00 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕಾಮಗಾರಿಗಳ ಅಡಿಗಲ್ಲು ಹಾಗೂ ಉದ್ಘಾಟನೆ, ರಾಯಚೂರಲ್ಲಿನ ವಿಶ್ವವಿದ್ಯಾಲಯಕ್ಕೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ನಾಮಕರಣ, ಬುಡಕಟ್ಟು ಸಾಂಸ್ಕೃತಿಕ ಉತ್ಸವ ಸೇರಿದಂತೆ ವಿವಿಧ ಕಾರ್ಯಕ್ರಮಗಳಿಗೆ ನಿರೀಕ್ಷೆಗೂ ಮೀರಿ ಜನರು ಹೆಚ್ಚಿನ ಸಂಖ್ಯೆಯಲ್ಲಿ ಸೇರಿ ಕಾರ್ಯಕ್ರಮ ಯಶಗೊಳಿಸಿದ್ದಕ್ಕೆ ರಾಯಚೂರ ಗ್ರಾಮೀಣ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್ ಅವರು ತಮ್ಮ ಕ್ಷೇತ್ರದ ಜನತೆಗೆ ಕೃತಜ್ಞತೆಗಳನ್ನು ತಿಳಿಸಿದರು. ಎಲ್ಲ ಸಚಿವರು, ಶಾಸಕರು, ವಿಧಾನ ಪರಿಷತ್ ಸದಸ್ಯರು, ವಿವಿಧ ಮಂಡಳಿ, ಸಮಿತಿಗಳು, ನಿಗಮಗಳ ಅಧ್ಯಕ್ಷರು, ರಾಯಚೂರ ಸೇರಿದಂತೆ ವಿವಿಧ ಗ್ರಾಮಗಳ ಅಧ್ಯಕ್ಷರು ಮತ್ತು ಸದಸ್ಯರಿಗೆ, ಎಲ್ಲ ಗ್ರಾಮಸ್ಥರಿಗೆ, ಅಭಿಮಾನಿಗಳಿಗೆ ಅಭಿನಂದನೆ ತಿಳಿಸಿದರು.

## ಗುರುಮಠಕಲ್ ಪಟ್ಟಣಕ್ಕೆ ಭೀಮಾನದಿ ಮೂಲದಿಂದ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯಡಿ ಕುಡಿಯುವ ನೀರು ಸರಬರಾಜು ಯೋಜನೆಯ ಶಂಕುಸ್ಥಾಪನೆ

ಮಲ್ಲಮ್ಮ ನುಡಿ ವಾರ್ತೆ

ಯಾದಗಿರಿ : ಜೂನ್ 23–ನಗರಾಭಿವೃದ್ಧಿ ಇಲಾಖೆ ಹಾಗೂ ಯಾದಗಿರಿ ಜಿಲ್ಲಾಡಳಿತ, ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಬೆಂಗಳೂರು ಮತ್ತು ಗುರುಮಠಕಲ್ ಪುರಸಭೆ ಸಂಯುಕ್ತಾಶ್ರಯದಲ್ಲಿ ಗುರುಮಠಕಲ್ ಪಟ್ಟಣಕ್ಕೆ ಭೀಮಾನದಿ ಮೂಲದಿಂದ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯಡಿಯಲ್ಲಿ ಕುಡಿಯುವ ನೀರು ಸರಬರಾಜು ಯೋಜನೆಯ ಅಂದಾಜು ಮೊತ್ತ 2475 ಲಕ್ಷ ರೂ.ಗಳ ಶಂಕುಸ್ಥಾಪನಾ ಕಾರ್ಯಕ್ರಮವನ್ನು 2025ರ ಜೂನ್ 24ರ ಮಂಗಳವಾರ ರಂದು ಬೆಳಿಗ್ಗೆ 10 ಗಂಟೆಗೆ ಗುರುಮಠಕಲ್ ಹೈದ್ರಾಬಾದ್ ಮುಖ್ಯ ರಸ್ತೆದಲ್ಲಿ ಆಯೋಜಿಸಲಾಗಿದೆ.

ಸಣ್ಣ ಕೈಗಾರಿಕೆ ಮತ್ತು ಸಾರ್ವಜನಿಕ ಉದ್ದಿಮೆಗಳ ಸಚಿವರು ಹಾಗೂ ಯಾದಗಿರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಶರಣಬಸಪ್ಪ ದರ್ಶನಾಪೂರ ಅವರು ಗುರುಮಠಕಲ್ ಪಟ್ಟಣ–ಕ್ಕೆ ಭೀಮಾನದಿ ಮೂಲದಿಂದ ಕೇಂದ್ರ ಪುರಸ್ಕೃತ ಅಮೃತ 2.0 ಯೋಜನೆಯಡಿಯಲ್ಲಿ ಕುಡಿಯುವ ನೀರು ಸರಬರಾಜು ಯೋಜನೆಯ ಅಂದಾಜು ಮೊತ್ತ 2475 ಲಕ್ಷ ರೂ.ಗಳ ಶಂಕುಸ್ಥಾಪನೆಯನ್ನು ಅವರ ಘನ ಉಪಸ್ಥಿತಿಯಲ್ಲಿ ನೆರವೇರಿಸುವರು.

ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರಾದ ಶ್ರೀ ಬೈರತಿ ಸುರೇಶ ಕಾರ್ಯಕ್ರಮವನ್ನು ಉದ್ಘಾಟಿಸುವರು. ಧಾರವಾಡ ಗ್ರಾಮೀಣ ವಿಧಾನಸಭಾ ಶಾಸಕರು ಹಾಗೂ ಬೆಂಗಳೂರು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಅಧ್ಯಕ್ಷರು ಶ್ರೀ ವಿನಯ ಕುಲಕರ್ಣಿ ಹಾಗೂ ಕರ್ನಾಟಕ ವಿಧಾನ ಪರಿಷತ್ತು ವಿರೋಧ ಪಕ್ಷದ ನಾಯಕ ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ ಅವರ ಗೌರವಾನ್ವಿತ ಉಪಸ್ಥಿತಿಯಲ್ಲಿ ನೆರವೇರಲಿದೆ. ಗುರುಮಠಕಲ್ ವಿಧಾನಸಭಾ ಕ್ಷೇತ್ರದ ಶಾಸಕ ಶ್ರೀ ಶರಣಗೌಡ ಕಂದಕೂರ ಅಧ್ಯಕ್ಷತೆ ವಹಿಸುವರು.

ಕಲಬುರಗಿ ಲೋಕಸಭಾ ಸದಸ್ಯರು ಶ್ರೀ ರಾಧಾಕೃಷ್ಣ ದೊಡ್ಡಮನಿ ವಿಶೇಷ ಅತಿಥಿಗಳಾಗಿ ಆಗಮಿಸುವರು. ವಿಧಾನ ಪರಿಷತ್ತು ಸದಸ್ಯರು ಶ್ರೀ ಬಿ.ಜಿ.ಪಾಟೀಲ್, ಡಾ.ಚಂದ್ರಶೇಖರ ಬಿ.ಪಾಟೀಲ್, ಶ್ರೀ ಶಶೀಲ್ ಜಿ.ನಮೋಶಿ, ಗುರುಮಠಕಲ್ ಪುರಸಭೆ ಅಧ್ಯಕ್ಷರು ಶ್ರೀಮತಿ ಜಯಶ್ರೀ ಪೂ.ಪಾಟೀಲ್, ಗುರುಮಠಕಲ್ ಪುರಸಭೆ ಉಪಾಧ್ಯಕ್ಷರು ಶ್ರೀಮತಿ ರೇಣುಕಾ ಪಡಿಗೆ, ಗುರುಮಠಕಲ್ ಪುರಸಭೆ ಸರ್ವ ಸದಸ್ಯರು ಅತಿಥಿಗಳಾಗಿ ಪಾಲ್ಗೊಳ್ಳುವರು.

ಬೆಂಗಳೂರು ನಗರಾಭಿವೃದ್ಧಿ ಇಲಾಖೆ ಸರ್ಕಾರದ ಕಾರ್ಯದರ್ಶಿಗಳಾದ ಶ್ರೀಮತಿ ದೀಪ ಚೋಳನ್, ಯಾದಗಿರಿ ಜಿಲ್ಲಾ ಉಸ್ತುವಾರಿ ಕಾರ್ಯದರ್ಶಿ ಹಾಗೂ ಯಾದಗಿರಿ ಜಿಲ್ಲಾ ಪಂಚಾಯತ್ ಆಡಳಿತಾಧಿಕಾರಿ ಮತ್ತು ಯೋಜನಾ ಕಾರ್ಯಕ್ರಮ ಸಂಯೋಜನೆ, ಸಾಂಖ್ಯಿಕ ಇಲಾಖೆ ಮತ್ತು ನಾಗರಿಕ ಸರಬರಾಜು ಗ್ರಾಹಕರ ವ್ಯವಹಾರಗಳು ಮತ್ತು ಕಾನೂನು ಮಾಪನಶಾಸ್ತ್ರ ಇಲಾಖೆ, ಸರ್ಕಾರದ ಕಾರ್ಯದರ್ಶಿಗಳಾದ ಶ್ರೀ ಮನೋಜ್ ಜೈನ್, ಬೆಂಗಳೂರು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ವ್ಯವಸ್ಥಾಪಕ ನಿರ್ದೇಶಕರು ಡಾ.ಸೆಲ್ವಮಣಿ.ಆರ್, ಯಾದಗಿರಿ ಜಿಲ್ಲಾಧಿಕಾರಿ ಡಾ.ಸುಶೀಲಾ.ಬಿ, ಬೆಂಗಳೂರು ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಜಂಟಿ ವ್ಯವಸ್ಥಾಪಕ ನಿರ್ದೇಶಕರು ಶ್ರೀ ಜ್ಞಾನೇಂದ್ರಕುಮಾರ ಗಂಗ್ವಾರ್, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶ್ರೀ ಲವೀಶ್ ಒರಡಿಯಾ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಶ್ರೀ ಪೃಥ್ವಿಕ್ ಶಂಕರ್ ವಿಶೇಷ ಆಹ್ವಾನಿತರಾಗಿ ಆಗಮಿಸುವರು.

ಗುರುಮಠಕಲ್ ಸರ್ವರಿಗೂ ಆದರದ ಸ್ವಾಗತ ಕಲಬುರಗಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಮುಖ್ಯ ಅಭಿಯಂತರರು ಪ್ರವೀಣ ಲಿಂಗಯ್ಯ, ಯಾದಗಿರಿ ಜಿಲ್ಲಾ ನಗರಾಭಿವೃದ್ಧಿ ಕೋಶ ಯೋಜನಾ ನಿರ್ದೇಶಕರು ಶ್ರೀ ಲಕ್ಷ್ಮೀಕಾಂತ, ಕಲಬುರಗಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಕಾರ್ಯಪಾಲಕ ಅಭಿಯಂತರರು ಶ್ರೀ ನರಸಿಂಹರಡ್ಡಿ ಎನ್, ಯಾದಗಿರಿ ಕರ್ನಾಟಕ ನಗರ ನೀರು ಸರಬರಾಜು ಮತ್ತು ಒಳಚರಂಡಿ ಮಂಡಳಿ ಸಹಾಯಕ ಕಾರ್ಯಪಾಲಕ ಅಭಿಯಂತರರು ಶ್ರೀ ಅಶೋಕ ಕುಮಾರ, ಗುರುಮಠಕಲ್ ಪುರಸಭೆ ಮುಖ್ಯಾಧಿಕಾರಿ ಶ್ರೀಮತಿ ಭಾರತಿ ದಂಡೋಶಿ, ಗುರುಮಠಕಲ್ ಪುರಸಭೆ ಕಿ. ಅಭಿಯಂತರರು ಶ್ರೀ ಅಬ್ದುಲ್ ಅಲೀಮ್ ಆರೋಗ್ಯವೇ ಭಾಗ್ಯ ಸ್ವಚ್ಛತೆಯೇ ಆರೋಗ್ಯದ ಮೂಲಮಂತ್ರ "ನೀರು ಅತಿ ಅಮೂಲ್ಯ ಅದನ್ನು ಮಿತವಾಗಿ ಬಳಸಿ" ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.



**ಬಸವಕಲ್ಯಾಣ :– ತಾಲೂಕಿನ ಹಾರಕೂಡ ಶ್ರೀಮಠದಲ್ಲಿ ಹಾರಕೂಡ ಗ್ರಾಮದ ಡಾವರೆ ಮತ್ತು ಸಂಗೋಳಗೆ ಪರಿವಾರದ ಹೆಣ್ಣು ಮಕ್ಕಳಿಂದ ಆಯೋಜಿಸಿದ ಗುರುವಂದನೆ ಹಾಗೂ 842ನೇ ತುಲಾಭಾರ ಸಮಾರಂಭವನ್ನು ಹಾರಕೂಡದ ಪೂಜ್ಯಶ್ರೀ ಡಾ. ಚನ್ನವೀರ ಶಿವಾಚಾರ್ಯರು ದೀಪ ಬೆಳಗಿಸಿ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯಿತಿ ನಿವೃತ್ತ ಉಪ ಕಾರ್ಯದರ್ಶಿ ಬಿ. ಕೆ. ಹಿರೇಮಠ, ಮಲ್ಲಿನಾಥ ಹಿರೇಮಠ ಹಾರಕೂಡ, ಮೇಘರಾಜ ನಾಗರಾಳೆ, ಹೇಮಲತಾ ಹಿರೇಮಠ ಸೇರಿದಂತೆ ಅನೇಕರು ಉಪಸ್ಥಿತರಿದ್ದರು. (ಮಲ್ಲಮ್ಮ ನುಡಿ ಚಿತ್ರ).**

ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯಲ್ಲಿ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಸೂಚನೆ

# ಸಣ್ಣ ನೀರಾವರಿ ಹಾಗೂ ನೀರಿನಾಸರೆಗಳ ಗಣತಿ ಕಾರ್ಯ ಅಚ್ಚುಕಟ್ಟಾಗಿರಲಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.23-ಜಿಲ್ಲೆಯಲ್ಲಿನಸಣ್ಣ ನೀರಾವರಿ ಹಾಗೂ ನೀರಿನಾಸರೆಗಳ ಗಣತಿ ಕಾರ್ಯವನ್ನು ಅಚ್ಚುಕಟ್ಟಾಗಿ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಸಂಬಂಧಿಸಿದ ಅಧಿಕಾರಿಗಳಿಗೆ ಸೂಚಿಸಿದರು.




ನಗರದ ಜಿಲ್ಲಾಧಿಕಾರಿಗಳ ಕಚೇರಿಯ ಕೆಸ್ವಾನ್ ವಿಡಿಯೋ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ 7ನೇ ಸಣ್ಣ ನೀರಾವರಿ ಮತ್ತು 2ನೇ ನೀರಿನಾಸರೆಗಳ ಗಣತಿ ಕಾರ್ಯದ ಜಿಲ್ಲಾ ಮಟ್ಟದ ಸಮನ್ವಯ ಸಮಿತಿ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು.

ಭಾರತ ಸರ್ಕಾರದ ಜಲ ಸಂಪನ್ಮೂಲ ಇಲಾಖೆಯ ಶೇ.100ರಷ್ಟು ಕೇಂದ್ರ ಸುರಕ್ಷಿತ ಸಣ್ಣ ನೀರಾವರಿ ಅಂಕಿ-ಅಂಶಗಳ ಸಮನ್ವಯೀಕರಣ ಯೋಜನೆ ಅಡಿಯಲ್ಲಿ ಪ್ರತಿ ಐದು ವರ್ಷಕ್ಕೊಮ್ಮೆ ಸಣ್ಣ ನೀರಾವರಿ ಗಣತಿಯನ್ನು ಕೈಗೊಳ್ಳಲಾಗುತ್ತಿದೆ. ಜಿಲ್ಲೆಯಲ್ಲಿರುವ ಎಲ್ಲಾ ಸಣ್ಣ ನೀರಾವರಿ ಹಾಗೂ ನೀರಿನಾಸರೆಗಳ ಗಣತಿಯನ್ನು ಸಮರ್ಪಕವಾಗಿ ಕೈಗೊಳ್ಳಬೇಕೆಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.

ಜಿಲ್ಲಾ ಮಟ್ಟದಲ್ಲಿ ಗಣತಿ ಕಾರ್ಯ ಮಾಡುವ ಮೇಲ್ವಿಚಾಕರಿಗೆ ಮತ್ತು ತಾಲ್ಲೂಕು ಮಟ್ಟದಲ್ಲಿ ಗಣತಿ ಕಾರ್ಯ ಕೈಗೊಳ್ಳುವ ಕಂದಾಯ ಇಲಾಖೆಯ ಗ್ರಾಮ ಲೆಕ್ಕಾಧಿಕಾರಿಗಳು ಹಾಗೂ ಕಂದಾಯ ನಿರೀಕ್ಷಕರು ಗಣತಿ ಕಾರ್ಯ ವಿಧಾನದ ಕುರಿತು ಸೂಕ್ತ ತರಬೇತಿ ಹೊಂದಬೇಕು ಎಂದು ತಿಳಿಸಿದರು.

ಕಂದಾಯ ಇಲಾಖೆ, ಆರ್ಥಿಕ ಮತ್ತು ಸಾಂಖ್ಯಿಕ ಇಲಾಖೆ, ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆ, ಭಾರಿ ಮತ್ತು ಮಧ್ಯಮ ನೀರಾವರಿ ಇಲಾಖೆ, ಕೃಷಿ, ತೋಟಗಾರಿಕೆ ಇಲಾಖೆ ಹಾಗೂ ಸ್ಥಳೀಯ ಸಂಸ್ಥೆಗಳಾದ ಮಹಾನಗರ ಪಾಲಿಕೆ, ಪುರಸಭೆ, ನಗರಸಭೆಗಳು ರಾಜ್ಯದ ಹಿತದೃಷ್ಟಿಯಿಂದ ಈ ಎಲ್ಲಾ ಇಲಾಖೆಗಳ ಸಮನ್ವಯದೊಂದಿಗೆ ಗಣತಿ ಕ್ಷೇತ್ರಕಾರ್ಯ ಕೈಗೊಳ್ಳುವಂತೆ ಜಿಲ್ಲಾಧಿಕಾರಿಯವರು ತಿಳಿಸಿದರು.

ಜಿಲ್ಲಾ ಸಂಖ್ಯಾಸಂಗ್ರಹಣಾಧಿಕಾರಿ ಪತ್ರಿಬಸಪ್ಪ ಅವರು ಮಾತನಾಡಿ, ಪ್ರಸ್ತುತ 2023-24ನೇ ವರ್ಷವನ್ನಾಧರಿಸಿ 7ನೇ ಸಣ್ಣ ನೀರಾವರಿ ಹಾಗೂ 2ನೇ ನೀರಿನಾಸರೆಗಳ ಗಣತಿಯನ್ನು ಡಿಜಿಟಲ್ ಮೋಡ್‌ನೊಂದಿಗೆ ಪ್ರಥಮ ಬಾರಿಗೆ ಮೊಬೈಲ್ ಆಪ್ ಬಳಸಿ ಕೈಗೊಳ್ಳಲಾಗುತ್ತಿದೆ. ಪ್ರಸ್ತುತ ಗಣತಿ ಕಾರ್ಯಕ್ಕೆ ತಾಲ್ಲೂಕು ಮಟ್ಟದಲ್ಲಿ ಸಂಬಂಧಪಟ್ಟ ಸಿಬ್ಬಂದಿಗೆ ತರಬೇತಿ ಏರ್ಪಡಿಸಲಾಗುವುದು ಎಂದರು. ಅಂತರ್ಜಲ ಯೋಜನೆಗಳು ಹಾಗೂ ಮೇಲ್ಮೈ ಜಲ ಯೋಜನೆಗಳು ಎಂದು ವರ್ಗೀಕರಿಸಲಾಗಿದೆ. 40 ಹೆಕ್ಟೇರ್‌ವರೆಗಿನ ಅಚ್ಚುಕಟ್ಟು ಇರುವ ಯೋಜನೆಗಳು ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಅಧೀನದಲ್ಲಿರುತ್ತದೆ. 40 ಹೆಕ್ಟೇರ್‌ಗಳಿಗೆ ಮೇಲಿನ 2 ಸಾವಿರ ಹೆಕ್ಟೇರ್‌ವರೆಗಿನ ಅಚ್ಚುಕಟ್ಟು ಇರುವ ಯೋಜನೆಗಳು ಸಣ್ಣ ನೀರಾವರಿ ಇಲಾಖೆಯ ಅಧೀನದಲ್ಲಿರುತ್ತವೆ. 2 ಸಾವಿರ ಹೆಕ್ಟೇರ್‌ಗಳಿಗೆ ಮೇಲಿನ ಅಚ್ಚುಕಟ್ಟು ಇರುವ ಯೋಜನೆಗಳು ಬೃಹತ್ ನೀರಾವರಿ ಇಲಾಖೆಯ ಅಧೀನದಲ್ಲಿರುತ್ತವೆ ಎಂದು ತಿಳಿಸಿದರು.

ಅಂತರ್ಜಲ ಯೋಜನೆಗಳನ್ನು 4 ವಿಧಗಳಾಗಿ ಅಗೆದ ಬಾವಿ, ಆಳವಲ್ಲದ ಕೊಳವೆ ಬಾವಿ, ಮಧ್ಯಮ ಆಳದ ಕೊಳವೆ ಬಾವಿ ಮತ್ತು ಆಳದ ಕೊಳವೆ ಬಾವಿಗಳಾಗಿ ವರ್ಗೀಕರಿಸಲಾಗಿದೆ ಹಾಗೂ ನೀರಿನಾಸರೆಯ ವಿಧಗಳು, ಹೊಂಡಗಳು, ಸರೋವರಗಳು ಕೆರೆಗಳ, ಜಲಾಶಯಗಳು, ಜಲಸಂರಕ್ಷಣಾ ಯೋಜನೆಗಳಾಗಿವೆ ಎಂದರು. ಬಳಿಕ ಗಣತಿ ಕಾರ್ಯದ ಕುರಿತು ತರಬೇತಿ ನೀಡಿದರು.

ಈ ಸಂದರ್ಭದಲ್ಲಿ ಸಣ್ಣ ನೀರಾವರಿ ಮತ್ತು ಅಂತರ್ಜಲ ಅಭಿವೃದ್ಧಿ ಇಲಾಖೆಯ ಕಾರ್ಯಪಾಲಕ ಅಭಿಯಂತರಾದ ಆರ್.ವೆಂಕಟೇಶ್, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕಾರ್ಯಪಾಲಕ ಅಭಿಯಂತರಾದ ಇಂಧುದರ, ಕೃಷಿ ಇಲಾಖೆಯ ಉಪನಿರ್ದೇಶಕ ಮಂಜುನಾಥ ಸೇರಿದಂತೆ ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿಗಳು, ಮತ್ತಿತರರು ಉಪಸ್ಥಿತರಿದ್ದರು.

# ಜೂ.24 ರಂದು 'ಬೃಹತ್ ರಕ್ತದಾನ ಶಿಬಿರ'; ಆರೋಗ್ಯವಂತರು ತಪ್ಪದೇ ರಕ್ತದಾನ ಮಾಡಿ-ಡಿಸಿ ಪ್ರಶಾಂತ್ ಕುಮಾರ್ ಮಿಶ್ರಾ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.23-ಜಿಲ್ಲಾಡಳಿತ, ಜಿಲ್ಲಾ ಮಟ್ಟದ ವಿವಿಧ ಇಲಾಖೆಗಳ ಸಹಯೋಗ ಮತ್ತು ಮಿನೇರಾ ಸ್ಟೀಲ್ ಇವರ ಸಹಕಾರದಲ್ಲಿ ಜೂ.24 ರಂದು ಬೆಳಿಗ್ಗೆ 08 ಗಂಟೆಗೆ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನದ ಆವರಣದಲ್ಲಿ 'ಬೃಹತ್ ರಕ್ತದಾನ ಶಿಬಿರ' ಹಮ್ಮಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ತಿಳಿಸಿದ್ದಾರೆ.



ಶಿಬಿರದಲ್ಲಿ ಜಿಲ್ಲಾ ಮತ್ತು ತಾಲ್ಲೂಕು ಮಟ್ಟದ ಎಲ್ಲಾ ಇಲಾಖೆಗಳ ಅಧಿಕಾರಿಗಳು ಮತ್ತು ಸಿಬ್ಬಂದಿಗಳು, ಕಾಲೇಜು ವಿದ್ಯಾರ್ಥಿಗಳು ಮತ್ತು ಸಾರ್ವಜನಿಕರು ಸ್ವಯಂ ಪ್ರೇರಿತರಾಗಿ ರಕ್ತದಾನ ಮಾಡಬಹುದಾಗಿದೆ.

ರಕ್ತದಾನದಿಂದ ಉಪಯೋಗ:

ರಕ್ತದಾನ ಮಾಡುವುದರಿಂದ ಹಲವಾರು ರೀತಿಯ ಪ್ರಯೋಜನಗಳಿದ್ದು, ಅದರಲ್ಲಿ ಹೊಸ ರಕ್ತದ ಉತ್ಪತ್ತಿ ಆಗುವುದರ ಜೊತೆಗೆ ರಕ್ತ ಚಲನೆಯ ಕಾರ್ಯತತ್ಪರತೆ ಮತ್ತು ಜ್ಞಾಪಕ ಶಕ್ತಿ ವೃದ್ಧಿಯಾಗುತ್ತದೆ. ಮುಖ್ಯವಾಗಿ ಇತ್ತೀಚಿನ ದಿನಗಳಲ್ಲಿ ಕೇಳಲಾಗುತ್ತಿರುವ ಹೃದಯಾಘಾತ ಪ್ರಕರಣಗಳು ಶೇ.80 ಕ್ಕಿಂತಲೂ ಕಡಿಮೆಯಾಗುತ್ತದೆ. ರಕ್ತದೊತ್ತಡ ಸೇರಿದಂತೆ ರಕ್ತದಲ್ಲಿ ಕೊಬ್ಬಿನಾಂಶ ಕಡಿಮೆ ಮಾಡಲು ರಕ್ತದಾನ ಮಾಡುವುದರಿಂದ ಸಹಾಯವಾಗಲಿದೆ.

ಏಕೆ ರಕ್ತದಾನ ಮಾಡಬೇಕು?:

ಒಬ್ಬರಿಂದ ಪಡೆದ ರಕ್ತವನ್ನು ಹೋಲ್ ಬ್ಲಡ್, ಪ್ಲೇಟ್‌ಲೆಟ್ಸ್, ಪ್ಲಾಸ್ಮಾ, ಪ್ಯಾಕಡ್ ಸೆಲ್ಸ್, ಎಂಬ ನಾಲ್ಕು ರೂಪದಲ್ಲಿ ವ್ಯಕ್ತಿಯ ಜೀವ ಉಳಿಸಲು ಬಳಸಬಹುದಾಗಿದ್ದು, ಪ್ರಸ್ತುತ ದಿನಗಳಲ್ಲಿ ರಕ್ತದ ಅವಶ್ಯಕತೆಯಿರುವುದರಿಂದ 18 ವರ್ಷ ಮೇಲ್ಪಟ್ಟ ಆರೋಗ್ಯವಂತ ಪ್ರತಿಯೊಬ್ಬರೂ ರಕ್ತದಾನ ಮಾಡುವ ಮೂಲಕ ರಕ್ತಹೀನತೆಯಿಂದ ಬಳಲುವ ಗರ್ಭಿಣಿ ಸ್ತ್ರೀಯರಿಗೆ, ಶಸ್ತ್ರಚಿಕಿತ್ಸಾ ಹೆರಿಗೆ ವೇಳೆ ಮತ್ತು ಅಪಘಾತಗಳು, ತುರ್ತು ಶಸ್ತ್ರಚಿಕಿತ್ಸೆಗಳ ಸಂದರ್ಭಕ್ಕಾಗಿ ಹಾಗೂ ಕ್ಯಾನ್ಸರ್ ರೋಗಿಗಳಿಗೆ ಥ್ಯಾಲಿಸೀಮಿಯಾ, ಹಿಮೋಫಿಲಿಯಾ ಮುಂತಾದ ರೋಗಿಗಳ ಜೀವವನ್ನು ಉಳಿಸಲು ಸಹಾಯಕವಾಗಲಿದೆ. ಹಾಗಾಗಿ ಜನರ ಜೀವ ಉಳಿಸುವ ಕಾರ್ಯದಲ್ಲಿ ಭಾಗಿಯಾಗಬೇಕು ಎಂದು ತಿಳಿಸಿದ್ದಾರೆ.

ಯಾರು ರಕ್ತದಾನ ಮಾಡಬಹುದು:

45 ಕೆಜಿ ಮೇಲ್ಪಟ್ಟ ಹಾಗೂ 12.5 ಗ್ರಾಮ್‌ಗಿಂತ ಹೆಚ್ಚು ಹಿಮೋಗ್ಲೋಬಿನ್ ಇರುವ 18 ವರ್ಷ ಮೇಲ್ಪಟ್ಟ ಮಹಿಳೆಯರು ಪ್ರತಿ ನಾಲ್ಕು ತಿಂಗಳಿಗೊಮ್ಮೆ, ಪುರುಷರು ಪ್ರತಿ ಮೂರು ತಿಂಗಳಿಗೊಮ್ಮೆ ರಕ್ತದಾನ ಮಾಡಬಹುದು.

ಹಾಗಾಗಿ ಜೂ.24 ರಂದು ನಡೆಯುವ ಬೃಹತ್ ರಕ್ತದಾನ ಶಿಬಿರದಲ್ಲಿ ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ರಕ್ತದಾನ ಮಾಡಬಹುದು ಎಂದು ಜಿಲ್ಲಾಧಿಕಾರಿ ಪ್ರಶಾಂತ್ ಕುಮಾರ್ ಮಿಶ್ರಾ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಆರ್ಯವೈಶ್ಯ ಅಭಿವೃದ್ಧಿ ನಿಗಮ: ವಿವಿಧ ಸಾಲ ಸೌಲಭ್ಯಗಳಿಗಾಗಿ ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.23-ಕರ್ನಾಟಕ ಆರ್ಯವೈಶ್ಯ ಸಮುದಾಯ ಅಭಿವೃದ್ಧಿ ನಿಗಮ ವತಿಯಿಂದ 2025-26ನೇ ಸಾಲಿಗೆ ಅನುಷ್ಠಾನಗೊಳಿಸಲಾಗುತ್ತಿರುವ ವಿವಿಧ ಯೋಜನೆಗಳಡಿ ಸಹಾಯಧನ ಮತ್ತು ಸಾಲ-ಸೌಲಭ್ಯಕ್ಕಾಗಿ ಆನ್‌ಲೈನ್ ಮೂಲಕ ಅರ್ಜಿ ಆಹ್ವಾನಿಸಲಾಗಿದೆ.

ಅರ್ಹತೆ:

ನಿಗಮದ ಯೋಜನೆಗಳಲ್ಲಿ ಸೌಲಭ್ಯಗಳನ್ನು ಪಡೆಯಲು ಸಾಮಾನ್ಯವರ್ಗದ ಆರ್ಯವೈಶ್ಯ ಸಮುದಾಯಕ್ಕೆ ಸೇರಿರಬೇಕು ಮತ್ತು ನಮೂನೆ-ಜಿ ಯಲ್ಲಿ ಜಾತಿ ಮತ್ತು ಆದಾಯ ಪ್ರಮಾಣ ಪತ್ರವಿರಬೇಕು. ಅರ್ಜಿ ಸಲ್ಲಿಸುವಾಗ ಅರ್ಜಿದಾರರು ತಮ್ಮ ಮೊಬೈಲ್ ಸಂಖ್ಯೆ ಹಾಗೂ ಬ್ಯಾಂಕ್ ಖಾತೆಯನ್ನು ತಮ್ಮ ಆಧಾರ್ ಸಂಖ್ಯೆಗೆ ಜೋಡಣೆ ಮಾಡಿರಬೇಕು. ಅರ್ಹ ಅರ್ಜಿದಾರರನ್ನು ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳ ಅಧ್ಯಕ್ಷತೆಯಲ್ಲಿ ರಚಿಸಿರುವ ಜಿಲ್ಲಾ ಮಟ್ಟದ ಆಯ್ಕೆ ಸಮಿತಿ ಮೂಲಕ ಆಯ್ಕೆ ಮಾಡಲಾಗುತ್ತದೆ.

2019-20 ಹಾಗೂ 2021-22ನೇ ಸಾಲಿನಲ್ಲಿ ಸ್ವಯಂ-ಉದ್ಯೋಗ ನೇರಸಾಲ ಯೋಜನೆಯಡಿ ಸಾಲ ಪಡೆದು ಸಕಾಲದಲ್ಲಿ ಪೂರ್ಣ ಪ್ರಮಾಣದಲ್ಲಿ ಮರುಪಾವತಿಸಿದ ಫಲಾನುಭವಿಗಳಿಗೆ ಮತ್ತೊಮ್ಮೆ ಅರ್ಜಿ ಸಲ್ಲಿಸಲು ಅವಕಾಶ ಕಲ್ಪಿಸಲಾಗಿದೆ.

ಯೋಜನೆಗಳ ವಿವರ:

ಸ್ವಯಂ ಉದ್ಯೋಗ ಸಾಲ ಯೋಜನೆ, ಆರ್ಯವೈಶ್ಯ ಆಹಾರ ವಾಹಿನಿ ಯೋಜನೆ (ಬ್ಯಾಂಕುಗಳ ಸಹಯೋಗದೊಂದಿಗೆ), ವಾಸವಿ ಜಲಶಕ್ತಿ ಯೋಜನೆ, ಅರಿವು ಶೈಕ್ಷಣಿಕ ಸಾಲ ಯೋಜನೆ (ಸಿಇಟಿ ಹಾಗೂ ನೀಟ್ ಕೌನ್ಸಲಿಂಗ್ ಮುಗಿದ ನಂತರ ಅರ್ಜಿ ಆಹ್ವಾನಿಸಲಾಗುವುದು).

ಅರ್ಜಿಗಳನ್ನು ಆನ್‌ಲೈನ್ ವೆಬ್‌ಸೈಟ್ http://kacdc.karnataka.gov.in ನಲ್ಲಿ ಅರ್ಜಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜು.31 ಕೊನೆಯ ದಿನವಾಗಿದೆ.

ಹೆಚ್ಚಿನ ಮಾಹಿತಿಗಾಗಿ ನಗರದ ಅನಂತಪುರ ರಸ್ತೆಯ ನೂತನ ಜಿಲ್ಲಾಡಳಿತ ಭವನ ಕಚೇರಿಯ ಎರಡನೇ ಮಹಡಿಯ ಬಿ ಬ್ಲಾಕ್‌ನ ಆರ್ಯವೈಶ್ಯ ಅಭಿವೃದ್ಧಿ ನಿಗಮ ಕಚೇರಿ ಅಥವಾ ಸಹಾಯವಾಣಿ ಸಂಖ್ಯೆ 9448451111 ಗೆ ಸಂಪರ್ಕಿಸಬಹುದು ಎಂದು ನಿಗಮದ ಜಿಲ್ಲಾ ವ್ಯವಸ್ಥಾಪಕ ಟಿ.ಹೊನ್ನುರಪ್ಪ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.25 ರಂದು ಮಿನಿ ಉದ್ಯೋಗ ಮೇಳ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.23-ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ವತಿಯಿಂದ ಜೂ.25 ರಂದು ಬೆಳಿಗ್ಗೆ 10 ಗಂಟೆಯಿಂದ ಮಧ್ಯಾಹ್ನ 02 ಗಂಟೆಯವರೆಗೆ ನಗರದ ಹಳೆಯ ತಾಲ್ಲೂಕು ಕಚೇರಿ ಆವರಣದ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯಲ್ಲಿ ಮಿನಿ ಉದ್ಯೋಗ ಮೇಳ ಆಯೋಜಿಸಲಾಗಿದೆ ಎಂದು ಜಿಲ್ಲಾ ಉದ್ಯೋಗ ವಿನಿಮಯ ಕಚೇರಿಯ ಉದ್ಯೋಗಾಧಿಕಾರಿ ಪಿ.ಎಸ್.ಹಟ್ಟಪ್ಪ ಅವರು ತಿಳಿಸಿದ್ದಾರೆ.

ನಗರದ ಜೊಯಾಲೂಕಸ್ ಜ್ಯೂವೆಲರಿ ಕಂಪನಿಯವರು ತಮ್ಮಲ್ಲಿರುವ ಖಾಲಿ ಹುದ್ದೆಗಳಿಗೆ ನೇರ ಸಂದರ್ಶನ ಮೂಲಕ ನೇಮಕ ಮಾಡಿಕೊಳ್ಳುವರು. 25 ವರ್ಷ ಕೆಳಗಿನ ಆಸಕ್ತ ಅಭ್ಯರ್ಥಿಗಳು ಉದ್ಯೋಗ ಮೇಳದಲ್ಲಿ ಭಾಗವಹಿಸಬಹುದು. ಸಂದರ್ಶನದಲ್ಲಿ ಭಾಗವಹಿಸಲು ಯಾವುದೇ ಶುಲ್ಕವಿರುವುದಿಲ್ಲ.

ವಿದ್ಯಾರ್ಹತೆ:

ಎಸ್‌ಎಸ್‌ಎಲ್‌ಸಿ, ಪಿಯುಸಿ, ಡಿಪ್ಲೋಮಾ, ಪದವಿ ವಿದ್ಯಾರ್ಹತೆ ಹೊಂದಿರಬೇಕು. ಆಸಕ್ತ ಅಭ್ಯರ್ಥಿಗಳು ನೇರ ಸಂದರ್ಶನದಲ್ಲಿ ಭಾಗವಹಿಸಿ, ಇದರ ಸದುಪಯೋಗ ಪಡೆದುಕೊಳ್ಳಬೇಕು. ಪುರುಷರು ಮತ್ತು ಮಹಿಳೆಯರು ಭಾಗವಹಿಸಬಹುದು.

ಸಂದರ್ಶನದಲ್ಲಿ ಭಾಗವಹಿಸುವ ಅಭ್ಯರ್ಥಿಗಳು ತಮ್ಮ ಆಧಾರ್ ಕಾರ್ಡ್ ಪ್ರತಿ ಮತ್ತು ಸ್ವ-ವಿವರ (ಬಯೋಡೇಟಾ)ಗಳೊಂದಿಗೆ ಅಂದು ನಡೆಯುವ ನೇರ ಸಂದರ್ಶನದಲ್ಲಿ ಭಾಗವಹಿಸಬಹುದು.

ಹೆಚ್ಚಿನ ಮಾಹಿತಿಗಾಗಿ ಜಿಲ್ಲಾ ಉದ್ಯೋಗ ವಿನಿಮಯ ಕಚೇರಿ ಅಥವಾ ಮೊ.9742718891, 9663263086, 9900827768, 6360408094 ಗೆ ಸಂಪರ್ಕಿಸಬಹುದು ಎಂದು ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ: ಅರ್ಜಿ ಸಲ್ಲಿಕೆ ಅವಧಿ ವಿಸ್ತರಣೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.23-ಜಿಲ್ಲಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಮೆಟ್ರಿಕ್ ನಂತರದ ಬಾಲಕ ಮತ್ತು ಬಾಲಕಿಯರ ವಿದ್ಯಾರ್ಥಿನಿಲಯಗಳಲ್ಲಿ ಹೊಸದಾಗಿ ಪ್ರವೇಶ ಬಯಸುವ ಅರ್ಹ ವಿದ್ಯಾರ್ಥಿಗಳಿಂದ ಈಗಾಗಲೇ ಅರ್ಜಿ ಆಹ್ವಾನಿಸಲಾಗಿದ್ದು, ಅರ್ಜಿ ಸಲ್ಲಿಸುವ ಅವಧಿಯನ್ನು ಜೂ.30 ರ ವರೆಗೆ ವಿಸ್ತರಿಸಲಾಗಿದೆ.

ಹಿಂದುಳಿದ ವರ್ಗಗಳ ಪ್ರವರ್ಗ-1, 2ಎ, 2ಬಿ, 3ಎ, 3ಬಿ ಮತ್ತು ಪರಿಶಿಷ್ಟ ಜಾತಿ-ಪರಿಶಿಷ್ಟ ವರ್ಗದ ಪಿಯುಸಿ, ಐಟಿಐ ಮತ್ತು ಡಿಪ್ಲೋಮೋ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳು https://shp.karnataka.gov.in ಗೆ ಭೇಟಿ ನೀಡಿ ಆನ್‌ಲೈನ್‌ನಲ್ಲಿ ಅರ್ಜಿ ಸಲ್ಲಿಸಬೇಕು.

ತಾಲ್ಲೂಕುವಾರು ವಿದ್ಯಾರ್ಥಿನಿಲಯಗಳ ವಿವರ ಹಾಗೂ ವಿದ್ಯಾರ್ಥಿನಿಲಯದ ಪ್ರವೇಶಕ್ಕೆ ಇರಬೇಕಾದ ಅರ್ಹತೆ, ಸಲ್ಲಿಸಬೇಕಾದ ದಾಖಲೆಗಳ ವಿವರ ಮತ್ತು ಸರ್ಕಾರದ ಆದೇಶಕ್ಕಾಗಿ ಇಲಾಖೆಯ ವೆಬ್‌ಸೈಟ್ ಽಣಣ಄://ಛಛಿತಿಜ. ಇಚಿಡಿಟಿಚಿಣಚಿಞಚಿ.ರಿಂತ.ಟಿನ್ನು ನೋಡಬಹುದು.

ಅರ್ಜಿ ಸಲ್ಲಿಸಲು ತಾಂತ್ರಿಕ ತೊಂದರೆಗಳಾದಲ್ಲಿ ಸಹಾಯವಾಣಿ ಸಂಖ್ಯೆ 8050370006 ಅಥವಾ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಮತ್ತು ತಾಲ್ಲೂಕು ಅಧಿಕಾರಿಗಳ ಕಚೇರಿಗೆ ಅಗತ್ಯ ದಾಖಲೆಗಳೊಂದಿಗೆ ಭೇಟಿ ನೀಡಿ ಸಂಪರ್ಕಿಸಬಹುದು ಎಂದು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಜಿಲ್ಲಾ ಅಧಿಕಾರಿಯವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜೂ.24 ರಂದು ಬಳ್ಳಾರಿ ನಗರ ವ್ಯಾಪ್ತಿಯಲ್ಲಿ ವಿದ್ಯುತ್ ವ್ಯತ್ಯಯ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.23-ಬಳ್ಳಾರಿ ನಗರ ಜೆಸ್ಕಾಂ ಉಪವಿಭಾಗ-2ರ ವ್ಯಾಪ್ತಿಗೆ ಬರುವ ವಿದ್ಯುತ್ ಉಪ-ಕೇಂದ್ರದ ನಿರ್ವಹಣೆ ಕಾರ್ಯ ಕೈಗೊಳ್ಳುತ್ತಿರುವುರಿಂದ ಜೂ.24 ರಂದು ಬೆಳಿಗ್ಗೆ 08 ಗಂಟೆಯಿಂದ ಸಂಜೆ 06 ಗಂಟೆಯವರೆಗೆ ವಿವಿಧೆಡೆ ವಿದ್ಯುತ್ ಸರಬರಾಜಿನಲ್ಲಿ ವ್ಯತ್ಯಯವಾಗಲಿದೆ ಎಂದು ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರು ತಿಳಿಸಿದ್ದಾರೆ.

*ವಿದ್ಯುತ್ ವ್ಯತ್ಯಯವಾಗುವ ಪ್ರದೇಶಗಳು:*

ಎಫ್-1 ವ್ಯಾಪ್ತಿಯ ಕಪ್ಪಗಲ್ಲು ರಸ್ತೆ, ಸಿದ್ದಾರ್ಥ ನಗರ ಕಾಲೋನಿ, ಹೌಸಿಂಗ್ ಬೋರ್ಡ್, ಬೀಚಿನಗರ, ಕೆಇಬಿ ಕ್ವಾರ್ಟಸ್ಸ್, ಭಗತ್ ಸಿಂಗ್ ನಗರ, ಹೆಚ್‌ಡಿಎಫ್‌ಸಿ ಬ್ಯಾಂಕ್, ಎಸಿ ಸ್ಟ್ರೀಟ್, ಬಾಲಾಜಿ ನರ್ಸಿಂಗ್ ಹೋಮ್, ಲಾ ಕಾಲೇಜು, ಮುಲ್ಲಂಗಿ ಲೇಔಟ್, ಕನಕದುರ್ಗ ಲೇಔಟ್. ಎಫ್-2 ವ್ಯಾಪ್ತಿಯ ಗಾಂಧಿನಗರ, ಬಿ.ಎಸ್.ಕಾಂಪೌಂಡ್, ರ್ರಿತಾತ ನಗರ, ಸೆಂಟ್ರಲ್‌ಜೈಲ್, ಪಾರ್ವತಿ ನಗರ, ಮಾರುತಿ ಕಾಲೋನಿ, ಮೋಕ ರಸ್ತೆ, ಸೊಂತಲಿಂಗಣ್ಣ ಕಾಲೋನಿ, ರೈಲ್ವೆ ಸ್ಟೇಷನ್, ಎಸ್.ಪಿ.ಬಂಗ್ಲೆ, ಮಹಿಳಾ ಕಾಲೇಜು ರಸ್ತೆ, ಗಾಂಧಿನಗರ, ಸೂರ್ಯಕಾಲೋನಿ.

ಎಫ್-4 ವ್ಯಾಪ್ತಿಯ ಆಟೋ ನಗರ, ಎಸ್.ಆರ್.ಎಮ್ ಲೇಔಟ್, ಕನಕದಾಸ್ ನಗರ, ಕೆ.ಎ.ಐ.ಡಿ.ಬಿ ಕೈಗಾರಿಕಾ ಪ್ರದೇಶ. ಎಫ್-7 ವ್ಯಾಪ್ತಿಯ ಸಂಗನಕಲ್ಲು ರಸ್ತೆ, ಎಸ್.ಎನ್.ಪೇಟ್ 3ನೇ ಕ್ರಾಸ್, ಜಿಲ್ಲಾ ಆಸ್ಪತ್ರೆ, ರಾಘವ ಕಲಾ ಮಂದಿರ, ಅನಂತಪುರ ರಸ್ತೆ, ವಡ್ಡರ ಬಂಡ್ಡೆ, ಅಗಡಿ ಮಾರೆಪ್ಪ ಕಾಂಪೌಂಡ್, ರೂಪನಗುಡಿ ರಸ್ತೆ, ಮುಬರಕ್‌ಟಾಕೀಶ್, ಬಾಲಾಜಿರಾವ್‌ರಸ್ತೆ, ಕೆ.ಸಿ.ರೋಡ್, ಮೀನಾಕ್ಷಿ ಸರ್ಕಲ್, ಬೆಂಗಳೂರು ರಸ್ತೆ, ದುಗ್ಗಪ್ಪ ಬೀದಿ, ರೆಡ್ಡಿ ಬೀದಿ, ಆಲ್ಲಂ ಬೀದಿ, ಮುಲ್ಲಂಗಿ ಸಂಜೀವಪ್ಪ ಬೀದಿ, ರೂಪನಗುಡಿ ನರಪ್ಪ ಬೀದಿ, ತಾಯಮ್ಮಕಟ್ಟೆ.

ಎಫ್-8 ವ್ಯಾಪ್ತಿಯ ಬಸವೇಶ್ವರ ನಗರ, ಎಂ.ಆರ್.ವಿ. ಲೇಔಟ್, ಸದ್ಗುರುಕಾಲೋನಿ, ರೇಣುಕಾಚಾರ್ಯ ನಗರ, ಅಲ್ಲಂ ಲೇಔಟ್, ಬಿ.ಎಂ.ಎಸ್. ಲೇಔಟ್, ತಿರುಮಲ ಲೇಔಟ್, ಹರಿಪ್ರಿಯ ನಗರ, ಸುಷ್ಮಸ್ವರಾಜ್ ಕಾಲೋನಿ.

ಎಫ್-9 ನೆಹರು ಕಾಲೋನಿ, 1ನೇ ಅಡ್ಡರಸ್ತೆ, 2ನೇ ಅಡ್ಡರಸ್ತೆ, ಶಂಕರ್ ಕಾಲೋನಿ, ಎಸ್.ಎನ್.ಪೇಟೆ 6ನೇ, 5ನೇ ಮತ್ತು 4ನೇ, 3ನೇ ಅಡ್ಡರಸ್ತೆ, ಡಿಆರ್‌ಗ್ರೌಂಡ್, ಕೂಲ್‌ಕಾರ್ನರ್, ಡಬಲ್ ರಸ್ತೆ, ಕೋಲಾಂಚಾಲಂ ಕೌಪೌಂಡ್, ರಾಯಲ್ ಸರ್ಕಲ್, ಗಾಂಧಿ ಭವನ, ಸಿಎಂಸಿ, ಅಂಬಲಿ ಬಾಗ್, ತಾಲ್ಲೂಕ್‌ಅಫೀಸ್, ಡಿಸಿ ಅಫೀಸ್. ಎಫ್-10 ವ್ಯಾಪ್ತಿಯ ವಾಟರ್ ಬೂಸ್ಟರ್, ಮೋಕ ವಾಟರ್ ವರ್ಕ್ಸ್. ಎಫ್-11 ವ್ಯಾಪ್ತಿಯ ರಾಘವೇಂದ್ರ ಕಾಲೋನಿ, 2ನೇ ಹಂತ, ಅಯ್ಯಪ್ಪ ಸ್ವಾಮಿ ಕಾಲೋನಿ, ಇಂಟೋರಿ ನಗರ್, ಅನಂತಪುರ ರೋಡ್, ಷೇಕ್ಷವಲಿ ದರ್ಗಾ, ತಾರಾನಾಥ ಆಸ್ಪತ್ರೆ. ಎಫ್-12 ವ್ಯಾಪ್ತಿಯ ನಿಜಲಿಂಗಪ್ಪ ಕಾಲೋನಿ, ಲಲಿತಾ ಲೇಔಟ್, ಗೊಲ್ಲರ ನರಸಪ್ಪ ಕಾಲೋನಿ, ರಾಘವೇಂದ್ರ ಕಾಲೋನಿ 2ನೇ ಹಂತ, ದೀಪಕ್ ಕಾಲೋನಿ, ಕೆವಿಟಿ ನಗರ, ವೆಂಕಟೇಶ್ವರ ನಗರ, ಅನಂತಪುರ ರಸ್ತೆ, ಶೇಕ್ಷಾವಲ್ಲಿ ದುರ್ಗಾ, ಕುಬೇರ ಲೇಔಟ್.

ಎಫ್-13 ವ್ಯಾಪ್ತಿಯ ದೇವಿನಗರ, ಸಿರುಗುಪ್ಪ ರಸ್ತೆ, ಇಂದಿರ ನಗರ, ಸಂಜಯನಗರ, ಶಿವಲಿಂಗ ನಗರ, ಶಾಸ್ತ್ರೀನಗರ, ಬಸವನಕುಂಟೆ, ಎಂ.ಕೆ.ನಗರ, ಹವಂಬಾವಿ, ಅಶೋಕ ನಗರ, ಶ್ರೀನಿವಾಸ ನಗರ, ಕುರಿಹಟ್ಟಿ, ಎಸ್.ಪಿ.ಸರ್ಕಲ್, ವೀರಣ್ಣಗೌಡ ನಗರ, ರಾಜೇಶ್ವರಿ ನಗರ, ಕೆ.ಎಂ.ಎಫ್, ಭುವನಗಿರಿ ಕಾಲೋನಿ, ಎಸ್.ಎಲ್.ವಿ ಕಾಲೋನಿ, ಶಿವಗಿರಿ ಕಾಲೋನಿ, ರಾಮನಗರ, ಶ್ರೀನಿವಾಸ ನಗರ, ಸೂರ್ಯ ಕಾಲೋನಿ.

ಎಫ್-14 ವ್ಯಾಪ್ತಿಯ ಗಣೇಶ ಕಾಲೋನಿ, ಸಿದ್ಧಿಕಾಲೋನಿ, ಗೊಲ್ಲನರಸಪ್ಪ ಕಾಲೋನಿ, ಎಂಎಂಟಿಸಿ ಕಾಲೋನಿ, ಮಾರುತಿ ನಗರ, ಹುಸೇನ ನಗರ, ರಾಮಯ್ಯ ಕಾಲೋನಿ, ರಾಘವೇಂದ್ರ ಕಾಲೋನಿ 1ನೇ ಹಂತ, ಅನಂತಪುರ ರಸ್ತೆ, ಪಟೇಲ್ ನಗರ, ಹದ್ದಿನಗುಂಡು ರಸ್ತೆ, ಎಸ್.ಎನ್.ಪೇಟೆ 1ನೇ ಅಡ್ಡರಸ್ತೆ, 2ನೇ ಅಡ್ಡರಸ್ತೆ, ವಿಶಾಲ ನಗರ, ದತ್ತಸಾಯಿ ನಗರ, ಹನುಮಾನ್ ನಗರ, ಎಚ್.ಎಲ್.ಸಿ.ಕಾಲೋನಿ.

ಎಫ್-15 ವ್ಯಾಪ್ತಿಯ ವಾಜಪೇಯಿ ಲೇಔಟ್, ಕನಕ ದುರ್ಗಮ್ಮ ಬಡಾವಣೆ, ಕೃಷ್ಣ ಕಾಲೋನಿ, ಭಾರತಿ ಹಾಲು ಉತ್ಪಾದನಾ ಕೇಂದ್ರದ ಹಿಂಭಾಗ, ಸುಜಾತ ಲೇಔಟ್, ಆಂಧ್ರ ಕೆ.ಇ.ಬಿ.ಹಿಂಭಾಗ ಸೇರಿದಂತೆ ವಿವಿಧೆಡೆ ವಿದ್ಯುತ್ ವ್ಯತ್ಯಯವಾಗಲಿದ್ದು ವಿದ್ಯುತ್ ಗ್ರಾಹಕರು ಸಹಕರಿಸಬೇಕು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೃತ ಅನಾಮಧೇಯ ಮಹಿಳೆ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.23-ನಗರದ ಸ್ಟೇಷನ್ ರಸ್ತೆಯ ಸಕಾರಿ ಬಾಲಕೀಯರ ಶಾಲೆ ಮುಖ್ಯಗೇಟ್ ಎದುರುಗಡೆ ಅನಾಮಧೇಯ ಮಹಿಳೆಯು ಸೂಕ್ತ ಆರೈಕೆ ಇಲ್ಲದೇ ಯಾವುದೋ ಖಾಯಿಲೆಯಿಂದ ಜೂ.22 ರಂದು ಮೃತಪಟ್ಟಿದ್ದು, ಮೃತದೇಹವನ್ನು ಬಿಎಂಸಿಆರ್‌ಸಿ ಯ ಶೀತಲೀಕೃತ ಶವಗಾರ ಕೋಣೆಯಲ್ಲಿರಿಸಿದ್ದು, ಮೃತಳ ವಾರಸುದಾರರು ತಿಳಿದಿರುವುದಿಲ್ಲ. ಈ ಕುರಿತು ಬ್ರೂಸ್‌ಪೇಟೆ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮೃತಳ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

**ಚಹರೆ ಗುರುತು:**

ಎತ್ತರ 5.4 ಅಡಿ, ಕೋಲು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಗೋದಿ ಮೈಬಣ್ಣ, ಗುಂಗೂರು ಕಪ್ಪು ಕೂದಲು ಇರುತ್ತದೆ. ಪಿಂಕ್ ಬಣ್ಣದ ಬ್ಲೌಜ್ ಮತ್ತು ಸಿಮೆಂಟ್ ಕಲರ್ ಬಣ್ಣಗಳ ಸೀರೆ ಧರಿಸಿರುತ್ತಾಳೆ. ಬಲ ಕಪಾಳಕ್ಕೆ ಒಂದು ಚುಕ್ಕೆ ತರ ಹಚ್ಚೆ ಗುರುತು ಇರುತ್ತದೆ.

ಈ ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತ ಮಹಿಳೆಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100, 258102 ಅಥವಾ ಬ್ರೂಸ್‌ಪೇಟೆ ಪೊಲೀಸ್ ಠಾಣೆಯ ದೂ.08392-272022, ಪಿ.ಐ ಮೊ.9480803045, ಪಿಎಸ್‌ಐ ಮೊ.9480803081 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೃತ ಅನಾಮಧೇಯ ವ್ಯಕ್ತಿ ವಾರಸುದಾರರ ಪತ್ತೆಗೆ ಮನವಿ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.23-ನಗರದ ಬಸ್ ನಿಲ್ದಾಣದ ಕಾವ್ಯ ಕಂಫರ್ಟ್ಸ್ ಬಾರ್ ನ ಹತ್ತಿರ ಸುಮಾರು 70 ವರ್ಷದ ಅನಾಮಧೇಯ ವ್ಯಕ್ತಿಯು ಜೂ.21 ರಂದು ವಯೋಸಹಜ ಖಾಯಿಲೆಯಿಂದ ಕಂಡುಬಂದಿದ್ದು, ಬಿ.ಎಂ.ಸಿ ಮತ್ತು ಆರ್.ಸಿ ಆಸ್ಪತ್ರೆಗೆ ದಾಖಲಿಸಲಾಗಿ ಚಿಕಿತ್ಸೆ ಫಲಿಸದೇ ಮೃತಪಟ್ಟಿದ್ದು, ಮೃತನ ವಾರಸುದಾರರು ತಿಳಿದಿರುವುದಿಲ್ಲ. ಈ ಕುರಿತು ಕೌಲ್ ಬಜಾರ್ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಮೃತನ ವಾರಸುದಾರರ ಪತ್ತೆಗೆ ಸಹಕರಿಸಬೇಕು ಎಂದು ಪೊಲೀಸ್ ಸಬ್‌ಇನ್ಸ್‌ಪೆಕ್ಟರ್ ಮನವಿ ಮಾಡಿದ್ದಾರೆ.

ಚಹರೆ ಗುರುತು:

ಎತ್ತರ 5.6 ಅಡಿ, ಕೋಲು ಮುಖ, ಸಾಧಾರಣ ಮೈಕಟ್ಟು ಹೊಂದಿದ್ದು, ಎಣ್ಣೆಗೆಂಪು ಮೈ ಬಣ್ಣ, ಬೋಳು ತಲೆ ಇದ್ದು ಬಿಳಿ ಕರುಚಲು ಗಡ್ಡ ಇರುತ್ತದೆ. ಭೂದಿ ಬಣ್ಣದ ತುಂಬುತೋಳಿನ ಅಂಗಿ ಮತ್ತು ವಿವಿಧ ಬಣ್ಣಗಳ ಚೌಕಳಿಯ ಲುಂಗಿ ಧರಿಸಿರುತ್ತಾನೆ.

ಈ ಮೇಲ್ಕಂಡ ಚಹರೆ ಗುರುತುಗಳುಳ್ಳ ಮೃತ ವ್ಯಕ್ತಿಯ ವಾರಸುದಾರರ ಬಗ್ಗೆ ಮಾಹಿತಿ ಸಿಕ್ಕಲ್ಲಿ ಬಳ್ಳಾರಿ ಪೊಲೀಸ್ ಕಂಟ್ರೋಲ್ ರೂಂ ದೂ.08392-258100, 258102 ಅಥವಾ ಕೌಲ್ ಬಜಾರ್ ಪೊಲೀಸ್ ಠಾಣೆಯ ದೂ.08392-240731, ಪಿ.ಐ ಮೊ.9480803047, ಪಿಎಸ್‌ಐ ಮೊ.9480803084 ಗೆ ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಹಿರಿಯ ನಾಗರಿಕರಿಗೆ ಗೌರವ ನೀಡಬೇಕು ನ್ಯಾ.ರಾಜೇಶ್ ಎನ್.ಹೊಸಮನೆ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.23-ಹಳೇಬೇರು, ಹೊಸ ಚಿಗುರು ಎಂಬಂತೆ ಹಿರಿಯರನ್ನು ಗೌರವಿಸಿ ವಿಧೇಯರಾಗಿರಬೇಕು ಎಂದು ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ ಸದಸ್ಯ ಕಾರ್ಯದರ್ಶಿ ಹಾಗೂ ಹಿರಿಯ ಸಿವಿಲ್ ನ್ಯಾಯಾಧೀಶರಾದ ರಾಜೇಶ್ ಎನ್.ಹೊಸಮನೆ ಅವರು ಹೇಳಿದರು.

ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾಡಳಿತ ಹಾಗೂ ಜಿಲ್ಲಾ ಪಂಚಾಯತ್ ಬಳ್ಳಾರಿ, ಮಹಿಳಾ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ ಹಾಗೂ ಹಿರಿಯ ನಾಗರಿಕರ ಕ್ಷೇತ್ರದಲ್ಲಿ ಸೇವೆ ಸಲ್ಲಿಸುತ್ತಿರುವ ಸ್ವಯಂಸೇವಾ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ನಗರದ ಬೆಳಗಲ್ ರಸ್ತೆಯ ಜಿ.ಚೆಂಗಾರೆಡ್ಡಿ ಸ್ಮಾರಕ ಮಾನಸಿಕ ವಿಶೇಷ ಚೇತನ ಮಕ್ಕಳ ವಸತಿಯುತ ವಿಶೇಷ ಶಾಲೆಯ ಸಭಾಂಗಣದಲ್ಲಿ ಸೋಮವಾರ ಏರ್ಪಡಿಸಿದ್ದ 'ವಿಶ್ವ ಹಿರಿಯ ನಾಗರಿಕರ ನಿಂದನ ಜಾಗೃತಿ ದಿನ' ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಹಿರಿಯ ನಾಗರಿಕರು ಈ ದೇಶದ ಸಂಪತ್ತು. ಹಿರಿಯ ನಾಗರಿಕರಿಗೆ ನಿಂದನೆ, ಹಲ್ಲೆಗಳು ಇತ್ತೀಚಿನ ದಿನಗಳಲ್ಲಿ ಹೆಚ್ಚಾಗುತ್ತಿವೆ. ನಿಂದನೆಗೆ ಒಳಗಾಗುವ ಹಿರಿಯ ನಾಗರಿಕರು ಹಿರಿಯ ನಾಗರಿಕರ ಇಲಾಖೆ, ಹಿರಿಯ ನಾಗರಿಕರ ಸಹಾಯವಾಣಿ ಕೇಂದ್ರ, ಕಾನೂನು ಸೇವಾ ಪ್ರಾಧಿಕಾರದ ಸಹಾಯದೊಂದಿಗೆ ನ್ಯಾಯವನ್ನು ಪಡೆಯಬಹುದು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಉಪನಿರ್ದೇಶಕರಾದ ರಾಮಕೃಷ್ಣ, ಜಿಲ್ಲಾ ವಿಕಲಚೇತನರ ಕಲ್ಯಾಣಾಧಿಕಾರಿ ಹೆಚ್.ಗೋವಿಂದಪ್ಪ, ಭಿಕ್ಷುಕರ ನಿರ್ಮೂಲನಾ ಕೇಂದ್ರದ ಅಧ್ಯಕ್ಷ ಚಿನ್ನಪಲ್ಲಯ್ಯ, ಸ್ಮೈಲ್ ಸಂಸ್ಥೆಯ ಬಸವರಾಜ, ಹಿರಿಯ ನಾಗರಿಕರಾದ ಕೆ.ನಾರಾಯಣಪ್ಪ, ಸಂಸ್ಥೆಯ ಆಡಳಿತಾಧಿಕಾರಿ ಹೆಚ್.ಗುರುಮೂರ್ತಿ, ಸೋಮನಾಥ ಸೇರಿದಂತೆ ಹಿರಿಯ ನಾಗರಿಕರು, ವೃದ್ಧಾಶ್ರಮದ ಹಿರಿಯ ನಾಗರಿಕರು ಭಾಗವಹಿಸಿದ್ದರು.

# ಕರಾಮುವಿಯಿಂದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ತರಬೇತಿ: ನೋಂದಣಿಗೆ ಆಹ್ವಾನ

ಬಳ್ಳಾರಿ,ಜೂ.23-ಕರ್ನಾಟಕ ರಾಜ್ಯ ಮುಕ್ತ ವಿಶ್ವವಿದ್ಯಾನಿಲಯದ 'ಕರಾಮುವಿ ಸ್ಪರ್ಧಾತ್ಮಕ ಪರೀಕ್ಷಾ ತರಬೇತಿ ಕೇಂದ್ರ'ದ ವತಿಯಿಂದ ವಿವಿಧ ಸ್ಪರ್ಧಾತ್ಮಕ ಪರೀಕ್ಷೆಗಳಿಗಾಗಿ 45 ದಿನಗಳ ತರಬೇತಿ ಶಿಬಿರವನ್ನು ಏರ್ಪಡಿಸಲಾಗಿದ್ದು, ಆಸಕ್ತರು ನೋಂದಾಯಿಸಿಕೊಳ್ಳಬಹುದಾಗಿದೆ. ಕೆಇಎ(ಕರ್ನಾಟಕ ಪರೀಕ್ಷಾ ಪ್ರಾಧಿಕಾರ) ಮೂಲಕ ನಡೆಸಲಿರುವ ರಾಜ್ಯ ಮಟ್ಟದ ಪದವಿ ಕಾಲೇಜು ಸಹಾಯಕ ಪ್ರಾಧ್ಯಾಪಕರ ಅರ್ಹತಾ ಪರೀಕ್ಷೆ (ಕೆ-ಸೆಟ್) ಹಾಗೂ ರಾಷ್ಟ್ರಮಟ್ಟದ ಕಾಲೇಜು ಸಹಾಯಕ ಪ್ರಾಧ್ಯಾಪಕರ (ಯುಜಿಸಿ-ನೆಟ್) ಮತ್ತು ಕಿರಿಯ ಶಿಷ್ಯವೇತನ ಸಂಶೋಧನಾ ಸಹಾಯಕರ (ಜೆಆರ್‌ಎಫ್) ಪರೀಕ್ಷೆಗಳಿಗೆ ತರಬೇತಿ ನೀಡಲಾಗುತ್ತದೆ. ಆಸಕ್ತರು ಜೂ.30 ರೊಳಗಾಗಿ ಹೆಸರನ್ನು ನೋಂದಾಯಿಸಿಕೊಳ್ಳಬಹುದು. ಹೆಚ್ಚಿನ ಮಾಹಿತಿಗಾಗಿ ದೂ.0821-2515944 ಗೆ ಸಂಪರ್ಕಿಸಬಹುದು ಎಂದು ಕರಾಮುವಿ ಬಳ್ಳಾರಿ ಪ್ರಾದೇಶಿಕ ಕೇಂದ್ರದ ಪ್ರಾದೇಶಿಕ ನಿರ್ದೇಶಕ ಡಾ.ಹೆಚ್.ಮಲ್ಲಿಕಾರ್ಜುನ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಮೀನುಗಾರಿಕೆ ಇಲಾಖೆ: ಅರ್ಜಿ ಆಹ್ವಾನ

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.23-ಮೀನುಗಾರಿಕೆ ಇಲಾಖೆಯ ವತಿಯಿಂದ 2025-26 ನೇ ಸಾಲಿನ ವಿವಿಧ ಯೋಜನೆಗಳಡಿ ಜಲಾಶಯಗಳಿಗೆ ಬಲಿತ ಬಿತ್ತನೆ ಮೀನುಮರಿಗಳನ್ನು ಸರಬರಾಜು ಮಾಡಲು ಆಸಕ್ತ ನೋಂದಾಯಿತ ಮೀನುಮರಿ ಪಾಲನಾದಾರರಿಂದ ಅರ್ಜಿ ಆಹ್ವಾನಿಸಲಾಗಿದೆ. ಸರ್ಕಾರ ನಿಗಪಡಿಸಿದ ದರಗಳಲ್ಲಿ (ಸಾಗಾಣಿಕೆ ವೆಚ್ಚ ಸೇರಿ) ಉತ್ತಮ ತಳಿಯ 80-100 ಗಾತ್ರದ ಮೀನುಮರಿಗಳನ್ನು ಸರಬರಾಜು ಮಾಡಲು ಅರ್ಹರಿಂದ ಅರ್ಜಿ ಆಹ್ವಾನಿಸಲಾಗಿದೆ.

ಅರ್ಜಿಗಳನ್ನು ಇಲಾಖೆಯ ವೆಬ್‌ಸೈಟ್ WWW.fisheries.karnataka.gov.in ಗೆ ಭೇಟಿ ಸಲ್ಲಿಸಬಹುದು. ಅರ್ಜಿ ಸಲ್ಲಿಸಲು ಜುಲೈ 18 ಕೊನೆಯ ದಿನ. ಹೆಚ್ಚಿನ ಮಾಹಿತಿಗಾಗಿ ನಗರದ ನಾಗಲಕೆರೆ ಹತ್ತಿರದ ಮೀನುಗಾರಿಕೆ ಇಲಾಖೆಯ ಉಪ ನಿರ್ದೇಶಕರ ಕಚೇರಿ ಅಥವಾ ಮೊ.9449593156 ಗೆ ಹಾಗೂ ಆಯಾ ತಾಲ್ಲೂಕು, ವಲಯ ಮೀನುಗಾರಿಕೆ ಇಲಾಖೆಯ ಕಚೇರಿಗಳಿಗೆ ಸಂಪರ್ಕಿಸಬಹುದು ಎಂದು ಮೀನುಗಾರಿಕೆ ಉಪ ನಿರ್ದೇಶಕ ಶಿವಣ್ಣ ಅವರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಜು.09 ರಂದು ಅಂಚೆ ಕಚೇರಿ ದೂರುಗಳ ಕುರಿತು 'ಡಾಕ್ ಅದಾಲತ್'

ಮಲ್ಲಮ್ಮ ನುಡಿ ವಾರ್ತೆ

ಬಳ್ಳಾರಿ,ಜೂ.23-ಅಂಚೆ ಇಲಾಖೆ ಬಳ್ಳಾರಿ ವಿಭಾಗದ ವತಿಯಿಂದ ಜುಲೈ 09 ರಂದು ಬೆಳಿಗ್ಗೆ 11 ಗಂಟೆಗೆ ಬಳ್ಳಾರಿ ವಿಭಾಗದ ಅಂಚೆ ಅಧೀಕ್ಷಕರ ಕಚೇರಿಯಲ್ಲಿ 'ಡಾಕ್ ಅದಾಲತ್' ಏರ್ಪಡಿಸಲಾಗಿದೆ. ಅಂಚೆ ಕಚೇರಿಗಳಿಗೆ ಸಂಬಂಧಿಸಿದಂತೆ ಅಂಚೆ ವಿಷಯಗಳ ಕುರಿತು ಕುಂದು-ಕೊರತೆಗಳಿದ್ದಲ್ಲಿ ತಮ್ಮ ಕುಂದು-ಕೊರತೆಗಳನ್ನು ವಿವರವಾಗಿ ಬರೆದು ಅಂಚೆ ಅಧೀಕ್ಷಕರು, ಬಳ್ಳಾರಿ ವಿಭಾಗ, ಬಳ್ಳಾರಿ-583102 ಈ ವಿಳಾಸಕ್ಕೆ ಜುಲೈ 08 ರ ಸಂಜೆ 04 ಗಂಟೆಯೊಳಗೆ ಅಥವಾ ಇದಕ್ಕೂ ಮುಂಚಿತವಾಗಿ ಕಳುಹಿಸಬೇಕು. ಕುಂದು-ಕೊರತೆಗಳನ್ನು doballari.ka@indiapost.gov.in ಗೆ ಸಹ ಕಳುಹಿಸಬಹುದು

# ಬಣಜಿಗ ಸಮಾಜದಿಂದ ಪ್ರತಿಭಾ ಪುರಸ್ಕಾರ

ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.23- ಬಾಗಲಕೋಟೆ ತಾಲೂಕ ಬಣಜಿಗ ಸಮಾಜದ ಕ್ಷೇಮಾಭಿವೃದ್ಧಿ ಸಂಘ ಜುಲೈ 20 ರಂದು ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ಸಮಾರಂಭವನ್ನು ಹಮ್ಮಿಕೊಂಡಿದೆ. 2024-25 ನೇ ಸಾಲಿನ ಎಸ್‌ಎಸ್‌ಎಲ್‌ಸಿ ಪರೀಕ್ಷೆಯಲ್ಲಿ ಕನ್ನಡ ಆಂಗ್ಲ ಮಾಧ್ಯಮ ಮತ್ತು ಸಿ.ಬಿ.ಎಸ್.ಇ. ತರಗತಿಯಲ್ಲಿ ಶೇ.90 ಕ್ಕಿಂತ ಹೆಚ್ಚು ಅಂಕ ಪಡೆದ ಹಾಗೂ ದ್ವಿತೀಯ ಪಿಯುಸಿ ಪರೀಕ್ಷೆಯಲ್ಲಿ ಶೇ.90 ಕ್ಕಿಂತ ಹೆಚ್ಚು ಅಂಕಗಳನ್ನು ಪಡೆದ( ಕಲಾ, ವಾಣಿಜ್ಯ ಮತ್ತು ವಿಜ್ಞಾನ ವಿಭಾಗಗಳಲ್ಲಿ) ಬಣಜಿಗ ಸಮಾಜದ ಪ್ರತಿಭಾನ್ವಿತ ವಿದ್ಯಾರ್ಥಿಗಳಿಗೆ ಪ್ರತಿಭಾ ಪುರಸ್ಕಾರ ನೀಡಿ ಗೌರವಿಸಲಾಗುವುದು.

ಅರ್ಹರು ತಮ್ಮ ಅಂಕಪಟ್ಟಿ ಜೆರಾಕ್ಸ್ ಪ್ರತಿ ಹಾಗೂ ಎರಡು ಪಾಸ್ಪೋರ್ಟ್ ಸೈಜ್ ಫೋಟೋ ಮೊಬೈಲ್ ನಂಬರ್ ಸಹಿತ ಜುಲೈ 10 ರೊಳಗೆ ಸಂಘಟಕರಾದ ಬಸವರಾಜ ತಿಪಶೆಟ್ಟಿ (9901811370), ಅಶೋಕ ಚೆನ್ನಿಗಾವಿ (7975859476), ಶಿವಬಸಪ್ಪ ಕರಬಶೆಟ್ಟಿ (9945765489) ಇವರನ್ನು ಸಂಪರ್ಕಿಸಿ ದಾಖಲೆಗಳನ್ನು ನೀಡಬೇಕೆಂದು ತಾಲೂಕ ಅಧ್ಯಕ್ಷ ಬಸವರಾಜ ಶೀಲವಂತರ, ಕಾರ್ಯದರ್ಶಿ ವಿಶ್ವನಾಥ ವೈಜಾಪುರ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.




**ಬಸವಕಲ್ಯಾಣ :- ಇಲ್ಲಿನ ಅನುಭವ ಮಂಟಪದ ಪರಿಸರದಲ್ಲಿ ವಿಶ್ವ ಯೋಗ ದಿನಾಚರಣೆಯನ್ನು ಆಚರಿಸಲಾಯಿತು. ಅನುಭವ ಮಂಟಪ ಸಂಚಾಲಕರಾದ ಪೂಜ್ಯ ಶ್ರೀ ಶಿವಾನಂದ ದೇವರು. ಉಳವಿಯ ಪೂಜ್ಯ ಶ್ರೀ ಬಸವ ದೇವರು. ವಿವಿಧ ಆಸನದ ಭಂಗಿಗಳನ್ನು ಮಾಡಿ ತೋರಿಸಿದ್ದರು. (ಮಲ್ಲಮ್ಮ ನುಡಿ ಚಿತ್ರ)**

# ನಿವೃತ್ತಿ ನಂತರವೂ ಶಿಕ್ಷಕರು ಮಕ್ಕಳಿಗೆ ವಿದ್ಯೆ ನೀಡಬೇಕು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.23- ಗ್ರಾಮೀಣ ಭಾಗದಲ್ಲಿ ಶೈಕ್ಷಣಿಕ ಗುಣಮಟ್ಟ ಹೆಚ್ಚಿಸುವಲ್ಲಿ ಶಿಕ್ಷಕರ ಪಾತ್ರ ಮಹತ್ತರವಾಗಿದ್ದು, ನಿವೃತ್ತಿ ನಂತರವೂ ಶಿಕ್ಷಕರು ಮಕ್ಕಳಿಗೆ ವಿದ್ಯೆ ನೀಡುವ ಕಾರ್ಯವನ್ನು ಮುಂದುವರೆಸಬೇಕು ಎಂದು ಸಾವರ್ಜನಿಕಶಿಕ್ಷಣ ಇಲಾಖೆಯನಿವೃತ್ತ ಉಪನಿರ್ದೇಶಕ ಎನ್.ಬಿ.ಗೊರವರ ಹೇಳಿದರು.

ಸಮೀಪದ ಸೀತಿಮನಿ ಸರ್ಕಾರಿ ಪ್ರೌಢಶಾಲೆಯಲ್ಲಿ ಸೋಮವಾರ ನಿವೃತ್ತ ಶಿಕ್ಷಕ ಆರ್,ಟಿ.ಬಾಳಕ್ಕನವರ ಅವರನ್ನು ಶಾಲೆಯ ಹಳೆಯ ವಿದ್ಯಾರ್ಥಿಗಳು ಸನ್ಮಾನಿಸಿದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಶಿಕ್ಷಕರು ಸುದೀರ್ಘ ಸೇವೆ ಸಲ್ಲಿಸಿ ನಿವೃತ್ತರಾದಾಗ ಮಕ್ಕಳಿಗೆ ಕಲಿಸಬೇಕೆನ್ನುವ ಹಂಬಲ ಇದ್ದೇ ಇರುತ್ತದೆ. ಹೀಗಾಗಿ ನಿವೃತ್ತಿಯ ನಂತರವೂ ಮಕ್ಕಳಿಗೆ ತಮ್ಮಲ್ಲಿರುವ ಜ್ಞಾನವನ್ನು ನೀಡುವುದು ಪುಣ್ಯದ ಕಾರ್ಯವಾಗುತ್ತದೆ ಎಂದರು.

ವಿಜಯಕುಮಾರ ಹಕಾರಿ ಮಾತನಾಡಿ, ಶಿಕ್ಷಕರು ನಿವೃತ್ತಿಯಾದರೂ ವಿದ್ಯಾರ್ಥಿಗಳಿಗೆ ಮಾರ್ಗದರ್ಶನ ಮಾಡುತ್ತ ಉತ್ತಮ ಅಂಕ ಗಳಿಸಲು ಪ್ರೇರೇಪಿಸಬೇಕು ಎಂದು ಹೇಳಿದರು. ನಿವೃತ್ತ ಶಿಕ್ಷಕ ಆರ್.ಟಿ.ಬಾಳಕ್ಕನವರ ದಂಪತಿಗಳನ್ನು ಸನ್ಮಾನಿಸಲಾಯಿತು.

ಗಿರೀಶ ಗಂಗನ್ನವರ, ರವಿ ಚವ್ಹಾಣ, ಸುರೇಶ ರಾಯಗೊಂಡರ, ಜೀವಪ್ಪ ಪೂಜಾರಿ, ಲಕ್ಷ್ಮೀ ಮುರನಾಳ, ವಾಣಿಶ್ರೀ ಸುರಗಿಮಠ, ರಾಮಸ್ವಾಮಿ ಲಮಾಣಿ, ವಿಜಯಲಕ್ಷ್ಮಿ ಕಮತಗಿ, ಜಯಶ್ರೀ ಮುರನಾಳ, ಪ್ರೇಮಾ ವಾರಿ, ನಕುಲ್ ಮೇಟಿ, ಮಂಜು ಬಲದಿನ್ನಿ, ಗುಂಡಪ್ಪ ಮಾದರ, ಸುನೀಲ ಲಮಾಣಿ ಮತ್ತಿತರರು ಇದ್ದರು.

# ಗ್ರಾಮೀಣ ಶಾಲೆಗಳಲ್ಲೂ ಗುಣಮಟ್ಟದ ಶಿಕ್ಷಣ-ಮಿಟ್ಟಲಕೋಡ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.23-ಗ್ರಾಮೀಣ ಪ್ರದೇಶದ ಶಾಲೆಗಳಲ್ಲೂ ಗುಣಮಟ್ಟದ ಶಿಕ್ಷಣ ದೊರೆಯುತ್ತಿರುವುದು ಒಳ್ಳೆಯ ಬೆಳವಣಿಗೆ ಎಂದು ಕರ್ನಾಟಕ ರಾಜ್ಯ ವಕೀಲರ ಪರಿಷತ್ತಿನ ಅಧ್ಯಕ್ಷ ಎಸ್.ಎಸ್.ಮಿಟ್ಟಲಕೋಡ ಹೇಳಿದರು.

ತಾಲೂಕಿನ ಹಳ್ಳೂರ ಗ್ರಾಮದ ಬಸವಶ್ರೀ ಎಜ್ಯುಕೇಶನ್ ಮತ್ತು ರೂರಲ್ ಡೆವಲಪಮೆಂಟ್ ಟ್ರಸ್ಟ್ ನಿಂದ ನಡೆಯುತ್ತಿರುವ ನೀಲಮ್ಮ ಪೂರ್ವ ಪ್ರಾಥಮಿಕ ಹಾಗೂ ಈರಮ್ಮ ರುದ್ರಗೌಡ ಪಾಟೀಲ ಆಂಗ್ಲ ಮಾಧ್ಯಮ ಹಿರಿಯ ಪ್ರಾಥಮಿಕ ಶಾಲೆಯ ಪ್ರಾರಂಭೋತ್ಸವ ಕಾರ್ಯಕ್ರಮ ಉದ್ಘಾಟಿಸಿ ಅವರು ಮಾತನಾಡಿದರು.

ಇಂದಿನ ಪರೀಕ್ಷಾ ಫಲಿತಾಂಶಗಳನ್ನು ನೋಡಿದಾಗ ಗ್ರಾಮೀಣ ಭಾಗದ ಮಕ್ಕಳೂ ಸಹ ಅಗಾಧ ಸಾಧನೆ ಮಾಡಿರುವುದನ್ನು ಕಾಣುತ್ತೇವೆ. ಇದು ಗ್ರಾಮೀಣ ಶಾಲೆಗಳಲ್ಲೂ ಉತ್ತಮ ಶಿಕ್ಷಣ ದೊರೆಯುತ್ತದೆ ಎನ್ನುವುದಕ್ಕೆ ಸಾಕ್ಷಿಯಾಗಿದೆ ಎಂದ ಮಿಟ್ಟಲಕೋಡ, ಬಸವಶ್ರೀ ಸಂಸ್ಥೆ ಗ್ರಾಮೀಣ ಪ್ರದೇಶದಲ್ಲಿ ಆಂಗ್ಲ ಮಾಧ್ಯಮ ಶಾಲೆ ನಡೆಸುತ್ತಿರುವುದು ಶ್ಲಾಘನೀಯ ಎಂದರು.

ಇದೇ ಸಂದರ್ಭದಲ್ಲಿ ಸುಪ್ರೀಂ ಕೋರ್ಟ್ ವಿಶ್ರಾಂತ ನ್ಯಾಯಾಧೀಶ ಶಿವರಾಜ ಪಾಟೀಲ ಅವರ ಭಾವಚಿತ್ರ ಅನಾವರಣ ಗೊಳಿಸಲಾಯಿತು. ಪೂಜ್ಯ ಗ್ಯಾನಪ್ಪಜ್ಜನವರು, ವೆಂಕಟೇಶ ಕುಲಕರ್ಣಿ, ಬಸವಶ್ರೀ ಎಜ್ಯುಕೇಶನ್ ಟ್ರಸ್ಟ್ ಅಧ್ಯಕ್ಷ ಎಸ್.ಎಸ್. ಜಿಗಳೂರ, ಗ್ರಾಮದ ಹಿರಿಯರು ವೇದಿಕೆಯಲ್ಲಿದ್ದರು.

# ಜಿಲ್ಲಾ ಬ್ರಾಹ್ಮಣ ಮಹಾಸಭಾದ ನೂತನ ಅಧ್ಯಕ್ಷರಾಗಿ ವೆಂಕಟೇಶ ದೇಶಪಾಂಡೆ ನೇಮಕ







ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.23- ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾ ಜಿಲ್ಲಾ ಘಟಕಕ್ಕೆ ನೂತನ ಅಧ್ಯಕ್ಷರಾಗಿ ವೆಂಕಟೇಶ ದೇಶಪಾಂಡೆ ನೇಮಕವಾಗಿದ್ದಾರೆ.

ವಿನಾಯಕ ದೇಸಾಯಿ ಉಪಾಧ್ಯಕ್ಷ, ಅನಂತ ಮಳಗಿ ಪ್ರಧಾನ ಕಾರ್ಯದರ್ಶಿ, ಸಂಜೀವ ಪಾಟೀಲ ಸಹಕಾರ್ಯದರ್ಶಿ, ಭಾಸ್ಕರ ಮನಗೂಳಿ ಸಂಘಟನಾ ಕಾರ್ಯದರ್ಶಿ, ಅನಂತ ಉಮರ್ಜಿ ಖಜಾಂಚಿ, ದಯಾನಂದ ಕುಲಕರ್ಣಿ ಸಹ ಖಜಾಂಚಿಯನ್ನಾಗಿ ನೇಮಕ ಮಾಡಲಾಗಿದೆ.

# ಉತ್ಕರ್ಷ ಪೊಲೀಸ್ ನಿವಾಸ ಲೋಕಾರ್ಪಣೆ

# ತಾಲೂಕಾ ಕೇಂದ್ರಗಳಲ್ಲೂ ಪೋಲೀಸ್ ವಸತಿ ಗೃಹ: ಪರಮೇಶ್ವರ



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.23-ಜಿಲ್ಲೆಯ ಪ್ರತಿಯೊಂದು ತಾಲೂಕಾ ಕೇಂದ್ರಗಳಲ್ಲಿ ಪೊಲೀಸ್ ವಸತಿ ಗೃಹ ನಿರ್ಮಾಣ ಮಾಡಲಾಗುತ್ತಿದೆ ಎಂದು ಗೃಹ ಸಚಿವ ಜಿ.ಪರಮೇಶ್ವರ ಹೇಳಿದರು.

ನವನಗರದ ಜಿಲ್ಲಾ ಸಶಸ್ತ್ರ ಮೀಸಲು ಪಡೆ ಕಚೇರಿ ಆವರಣದಲ್ಲಿ ಜಿಲ್ಲಾ ಪೊಲೀಸ್ ಇಲಾಖೆ ಕೌಶಲ್ಯ ಅಭಿವೃದ್ಧಿ ಕೇಂದ್ರ ಮತ್ತು ಸಮುದಾಯ ಭವನದಡಿ ನಿರ್ಮಿಸಲಾದ ಧಾತ್ರಿ ಮಂಗಲ ಭವನ ಹಾಗೂ ಉತ್ಕರ್ಷ ಪೊಲೀಸ್ ನಿವಾಸ ಸೋಮವಾರ ಲೋಕಾರ್ಪಣೆಗೊಳಿಸಿ ಮಾತನಾಡಿದ ಅವರು, ಪ್ರತಿ ಪೊಲೀಸ್ ಕುಟುಂಬಕ್ಕೆ ಸುಸಜ್ಜಿತವಾದ ಗೃಹ ನಿರ್ಮಾಣ ಮಾಡುವ ಕಾರ್ಯ ಕೈಗೊಂಡಿದ್ದು, ಈಗಾಗಲೇ ಶೇ,40 ರಷ್ಟು ಮಾತ್ರ ಆಗಿದ್ದು, ಇನ್ನು ಶೇ.60 ನಿರ್ಮಾಣ ಮಾಡಲು ಮುಖ್ಯಮಂತ್ರಿಗಳಿಗೆ ಕೋರಿದ್ದು, ಅವರು ಸಕಾರಾತ್ಮಕವಾಗಿ ಸ್ಪಂದಿಸಿ ಅನುದಾನ ಬಿಡುಗಡೆ ಮಾಡಿದ್ದಾರೆ ಎಂದರು.

ಪ್ರತಿಯೊಬ್ಬ ಪೊಲೀಸರಿಗೂ ಮನೆ ಇರಬೇಕು. ಅವರಿಗೆ ವಸತಿ ಗೃಹ ನಿರ್ಮಿಸುವವರೆಗೂ ಇದು ಮುಂದುವರೆಯಲಿದೆ ಎಂದ ಗೃಹ ಸಚಿವರು, ಈ ಹಿಂದೆ ಆರೋಗ್ಯ ತಪಾಸಣೆಗೆ ನೀಡಲಾಗುತ್ತಿದ್ದ 1000 ರೂ.ಗಳನ್ನು 1500 ರೂ.ಗಳಿಗೆ ಹೆಚ್ಚಿಸಲಾಗಿದೆ. ರಾಜ್ಯದಲ್ಲಿ ಹಾಗೂ ಜಿಲ್ಲೆಗಳಲ್ಲಿ ಅಪರಾಧ ಸಂಖ್ಯೆಗಳನ್ನು ಸರಾಸರಿ ಗಮನಿಸಿದಾಗ ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹತೋಟಿಯಲ್ಲಿದೆ. ಹಾಗೆಂದ ಮಾತ್ರಕ್ಕೆ ಅಪರಾಧಗಳು ನಡೆದಿಲ್ಲ ಎನ್ನುವಂತಿಲ್ಲ. ಬೇರೆ ಬೇರೆ ಕಾರಣಗಳಿಂದ ಪ್ರಕರಣಗಳು ನಡೆಯುತ್ತಿವೆಯಾದರೂ ಮೊದಲಿಗಿಂತ ಕಡಿಮೆ ಪ್ರಮಾಣದಲ್ಲಿವೆ ಎಂದರು.

ಪೊಲೀಸ್ ಇಲಾಖೆ ಸುಭದ್ರಗೊಳಿಸಲು ಹೊಸ ಹೊಸ ತಂತ್ರಜ್ಞಾನಗಳನ್ನು ಹಾಗೂ ಆವಿಷ್ಕಾರಗಳನ್ನು ಹೊರತರಲಾಗುತ್ತಿದ್ದು, ಪ್ರತಿ ಜಿಲ್ಲೆಗೊಂದು ಸೈಬರ್ ಠಾಣೆ ತೆಗೆಯಲಾಗುತ್ತಿದೆ. ಇದರಿಂದ ಸಾರ್ವಜನಿಕರಿಗೆ ಇತ್ತೀಚೆಗೆ ಆಗುತ್ತಿರುವ ಸೈಬರ್ ಅಪರಾಧಗಳನ್ನು ತಡೆಗಟ್ಟುವ ಕಾರ್ಯ ಮಾಡಲಾಗುತ್ತಿದೆ. ಅಲ್ಲದೇ ಪ್ರತಿ ತಾಲೂಕು ಕೇಂದ್ರದಲ್ಲಿ ಪೊಲೀಸ್ ವಸತಿ ಗೃಹವನ್ನು ನಿರ್ಮಿಸುವ ಕಾರ್ಯ ಕೈಗೊಳ್ಳಲಾಗಿದೆ. ನಮ್ಮ ಅಧಿಕಾರ ಅವಧಿಯಲ್ಲಿ ಮೂರು ಬಾರಿ ಗೃಹಮಂತ್ರಿಯಾಗಿ ಮಾಡಿದ ಕಾರ್ಯಗಳು ದೇಶದಲ್ಲಿ ಹೆಸರು ಮಾಡಿದ್ದು, ದೇಶದಲ್ಲಿ ಕರ್ನಾಟಕ ಪೊಲೀಸ್ ಅಗ್ರಸ್ಥಾನದಲ್ಲಿದೆ ಎಂದು ಹೇಳಿದರು.

ಬಾಗಲಕೋಟೆ ಜಿಲ್ಲಾ ಪೊಲೀಸ್ ಜನ ಕಲ್ಯಾಣ ಕಾರ್ಯ ಮಾಡಿದ್ದು, ಈ ಕಾರ್ಯಕ್ಕಾಗಿ ಇಲಾಖೆಯಿಂದ ಯಾವುದೇ ಅನುದಾನ ನೀಡಿಲ್ಲ. ಜಿಲ್ಲೆಯ ಖನಿಜ ಸಂಪತ್ತಿನ ಮೇಲೆ ವಿಧಿಸಲಾದ ಕರದ ಮೇಲಿನ ಹಣ 1 ಕೋಟಿ ರೂ. 2021-22ನೇ ಸಾಲಿನಲ್ಲಿ ಅಭಿವೃದ್ದಿಗಾಗಿ ಇಟ್ಟ ಹಣವನ್ನು ನಗರಸಭೆಯಿಂದ 50 ಲಕ್ಷ ರೂ, 2022 ನೇ ಪೊಲೀಸ್ ಕಲ್ಯಾಣ ನಿಧಿಯಿಂದ 2.55 ಕೋಟಿ ಒಟ್ಟಾರೆಯಾಗಿ 4.5 ಕೋಟಿ ರೂ. ಗಳ ವೆಚ್ಚದಲ್ಲಿ ಸುಂದರವಾದ ಮಂಗಲ ಭವನ ಹಾಗೂ ಪೊಲೀಸ್ ನಿವಾಸ ನಿರ್ಮಾಣ ಮಾಡಲಾಗಿದೆ ಎಂದು ಸಚಿವ ಡಾ.ಜಿ.ಪರಮೇಶ್ವರ ಹೇಳಿದರು.

ಜಿಲ್ಲಾ ಉಸ್ತುವಾರಿ ಸಚಿವ ಆರ್.ಬಿ.ತಿಮ್ಮಾಪೂರ ಮಾತನಾಡಿ, ಪೊಲೀಸ್ ಇಲಾಖೆ ಭಯ ಹುಟ್ಟಿಸುವ ಹಾಗೂ ಶಾಂತಿ ಸುವ್ಯವಸ್ಥೆ ಕಾಪಾಡುವ ಎರಡು ಕಾರ್ಯಗಳನ್ನು ವಾತಾವರಣಕ್ಕೆ ತಕ್ಕಂತೆ ಮಾಡಬೇಕಾಗುತ್ತದೆ. ಕೇವಲ ಜನಸ್ನೇಹಿ ಪೊಲೀಸ್ ಕಾರ್ಯಕ್ಕೆ ಎಚ್ಚರಿಕೆಯ ಕೊರತೆ ಕಂಡುಬರುತ್ತದೆ. ಕಾರಣ ಜನಸ್ನೇಹಿ ಜೊತೆಗೆ ಅಪರಾಧಿಗಳಿಗೆ ಅಪರಾಧ ಮಾಡಬಾರದೆಂಬ ಸಂದೇಶ ಕೊಡಲು ಭಯ ಹುಟ್ಟಿಸುವ ಕಾರ್ಯವು ಸಹ ಪೊಲೀಸ್ ಇಲಾಖೆ ಮಾಡಬೇಕಾಗುತ್ತದೆ ಎಂದರು.

ರಾಜ್ಯಸಭಾ ಸದಸ್ಯ ನಾರಾಯಣಸಾ ಭಾಂಡಗೆ ಮಾತನಾಡಿ ಬಾಗಲಕೋಟೆ ಜಿಲ್ಲೆಯಲ್ಲಿ ಪೊಲೀಸ್ ಇಲಾಖೆ ದಕ್ಷತೆಯಿಂದ ಕಾರ್ಯನಿರ್ವಹಿಸುತ್ತಿದ್ದು, ಶಾಂತಿ ನೆಲಸಲು ಕಾರಣರಾಗಿದ್ದಾರೆ ಎಂದರು.

ಅಧ್ಯಕ್ಷತೆಯನ್ನು ವಹಿಸಿದ್ದ ಶಾಸಕ ಎಚ್.ವಾಯ್.ಮೇಟಿ ಮಾತನಾಡಿ, ಮಂಗಲ ಭವನ ಕೇವಲ ಪೊಲೀಸರಿಗೆ ಅಲ್ಲದೇ ಸಾರ್ವಜನಿಕರಿಗೂ ಅನುಕೂಲ ಕಲ್ಪಿಸಲು ಮುಂದಾಗಿರುವುದು ಬಾಗಲಕೋಟೆ ಜಿಲ್ಲಾ ಪೊಲೀಸ್ ಜನಪರವಾಗಿದೆ ಎಂಬುದನ್ನು ತೋರಿಸಿದೆ ಎಂದರು. ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಮರನಾಥ ರೆಡ್ಡಿ ಸ್ವಾಗತಿಸಿ ಪ್ರಾಸ್ತಾವಿಕವಾಗಿ ಮಾತನಾಡಿದರು.

ವಿಧಾನ ಪರಿಷತ್ ಸದಸ್ಯ ಹನಮಂತ ನಿರಾಣಿ, ಬಾದಾಮಿ ಶಾಸಕ ಭೀಮಸೇನ ಚಿಮ್ಮನಕಟ್ಟಿ, ನಗರಸಭೆ ಅಧ್ಯಕ್ಷೆ ಸವಿತಾ ಲೆಂಕೆನ್ನವರ, ಉಪಾಧ್ಯಕ್ಷೆ ಶೋಭಾ ದಾಸ್, ಸಭಾಪತಿ ಯಲ್ಲಪ್ಪ ನಾರಾಯಣಿ, ಐಜಿಪಿ ಚೇತನಸಿಂಗ್ ರಾಠೋಡ, ಜಿಲ್ಲಾಧಿಕಾರಿ ಸಂಗಪ್ಪ ಎಂ, ಜಿ.ಪಂ ಸಿಇಓ ಶಶಿಧರ ಕುರೇರ, ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿಗಳಾದ ಪ್ರಸನ್ನ ದೇಸಾಯಿ, ಮಹಾಂತೇಶ್ವರ ಜಿದ್ದಿ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ನಿರ್ಗಮಿತ ಜಿಲ್ಲಾಧಿಕಾರಿ ಹಾಗೂ ಜಿ.ಪಂ ಸಿಇಓ ಅವರಿಗೆ ಆತ್ಮೀಯ ಬೀಳ್ಕೊಡುಗೆ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ : ಕಲ್ಯಾಣ ಕರ್ನಾಟಕ ಪ್ರದೇಶ ಅಭಿವೃದ್ಧಿ ಮಂಡಳಿಯ ಕಾರ್ಯದರ್ಶಿಯಾಗಿ ವರ್ಗಾವಣೆಯಾಗಿರುವ ಕೊಪ್ಪಳ ನಿರ್ಗಮಿತ ಜಿಲ್ಲಾಧಿಕಾರಿ ನಲಿನ್ ಅತುಲ್ ಹಾಗೂ ಬೆಂಗಳೂರಿನ ಸೆಂಟರ್ ಫಾರ್ ಸ್ಮಾರ್ಟ್ ಗವರ್ನನ್ಸ್‌ನ ಕಾರ್ಯನಿರ್ವಾಹಕ ನಿರ್ದೇಶಕರಾಗಿ ವರ್ಗಾವಣೆಯಾಗಿರುವ ನಿರ್ಗಮಿತ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ರಾಹುಲ್ ರತ್ನಂ ಪಾಂಡೇಯ ಅವರಿಗೆ ಕೊಪ್ಪಳ ಜಿಲ್ಲಾಡಳಿತ ಮತ್ತು ಜಿಲ್ಲಾ ಪಂಚಾಯತ ಹಾಗೂ ವಿವಿಧ ಇಲಾಖೆಗಳ ವತಿಯಿಂದ ಜಿಲ್ಲಾಡಳಿತ ಭವನದ ಆಡಿಟೋ-ರಿಯಂ ಹಾಲ್‌ನಲ್ಲಿ ಶನಿವಾರ ಏರ್ಪಡಿಸಲಾಗಿದ್ದ ಸಮಾರಂಭದಲ್ಲಿ ಆತ್ಮೀಯವಾಗಿ ಬೀಳ್ಕೊಡಲಾಯಿತು.

ನಿರ್ಗಮಿತ ಡಿಸಿ ಮತ್ತು ಜಿ.ಪಂ ಸಿಇಓ ಅವರ ಕಾರ್ಯವೈಖರಿ ಕುರಿತು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು, ಅಪರ ಜಿಲ್ಲಾಧಿಕಾರಿಗಳು, ಸಹಾಯಕ ಆಯುಕ್ತರು, ಜಿ. ಪಂ ಉಪಕಾರ್ಯದರ್ಶಿ, ಕೃಷಿ ಇಲಾಖೆ ಜಂಟಿ ನಿರ್ದೇಶಕರು, ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರು, ತೋಟಗಾರಿಕೆ ಇಲಾಖೆ ಉಪನಿರ್ದೇಶಕರು, ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯರು, ತಹಶಿಲ್ದಾರರು, ತಾ.ಪಂ ಕಾರ್ಯನಿರ್ವಾಹಕ ಅಧಿಕಾರಿಗಳು ಹಾಗೂ ವಿವಿಧ ಇಲಾಖೆಗಳ ಅಧಿಕಾರಿ ಮತ್ತು ಸಿಬ್ಬಂದಿಗಳು ತಮ್ಮ ಅನಿಸಿಕೆಗಳನ್ನು ವ್ಯಕ್ತಪಡಿಸಿದರು.

**ನೂತನ ಡಿಸಿ ಮತ್ತು ಸಿಇಓ ಅವರಿಗೆ ಸನ್ಮಾನ:** ಕೊಪ್ಪಳ ಜಿಲ್ಲೆಗೆ ನೂತನ ಜಿಲ್ಲಾಧಿಕಾರಿಯಾಗಿ ಆಗಮಿಸಿರುವ ಸುರೇಶ ಬಿ. ಇಟ್ನಾಳ ಹಾಗೂ ನೂತನ ಜಿ.ಪಂ ಸಿಇಓ ಆಗಿ ಆಗಮಿಸಿರುವ ವರ್ಣಿತ್ ನೇಗಿ ಅವರಿಗೆ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

ಸಮಾರಂಭದ ಅಧ್ಯಕ್ಷತೆಯನ್ನು ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ ಅವರು ವಹಿಸಿದ್ದರು.

ಈ ಸಂದರ್ಭದಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಜಿ.ಪಂ ಉಪ ಕಾರ್ಯದರ್ಶಿ ಮಲ್ಲಿಕಾರ್ಜುನ ತೊದಲಬಾಗಿ, ಯೋಜನಾ ನಿರ್ದೇಶಕ ಪ್ರಕಾಶ ವಿ., ಕೊಪ್ಪಳ ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕರಾದ ರೇಷ್ಮಾ ಹಾನಗಲ್, ಐ.ಎಫ್.ಎಸ್ ಅಧಿಕಾರಿ ಕಾವ್ಯ ಚತುರ್ವೇದಿ ಹಾಗೂ ಜಿಲ್ಲಾಧಿಕಾರಿಗಳ ಶ್ರೀಮತಿಯವರು ಸೇರಿದಂತೆ ಮತ್ತಿತರರಿದ್ದರು.

ಜಿಲ್ಲಾ ತರಬೇತಿ ಸಂಸ್ಥೆಯ ಪ್ರಾಚಾರ್ಯರಾದ ಕೃಷ್ಣಮೂರ್ತಿ ದೇಸಾಯಿ ಅವರು ಕಾರ್ಯಕ್ರಮ ನಿರೂಪಿಸಿದರು.

# ಕರ್ತವ್ಯ ನಿಷ್ಠೆ ಪ್ರಾಮಾಣಿಕತೆಗೆ ಮೇಲ್ಪಂಕ್ತಿಯಾದ ಮಲ್ಲನಗೌಡರು



ಮಲ್ಲಮ್ಮ ನುಡಿ ವಾರ್ತೆ

ಶಹಾಪುರ:ಉಪಪ್ರಾಂಶುಪಾಲರಾಗಿ, ಅಕ್ಷರದಾಸೋಹ ಸಹಾಯಕ ನಿರ್ದೇಶಕರಾಗಿ ಸುಧೀರ್ಘ 31 ವರ್ಷಗಳ ಕಾಲ ಸರಕಾರದ ಕೆಲಸಕ್ಕೆ ಅಡಚಣೆಬಾರದಂತೆ ಕರ್ತವ್ಯನಿಷ್ಠೆ, ಪ್ರಾಮಾಣಿಕತೆಗೆ ಮಲ್ಲನಗೌಡ ಬಿರಾದಾರ ಮೇಲ್ಪಂಕ್ತಿಯಾಗಿದ್ದು ಅವರ ವಯೋನಿವೃತ್ತಿ ಬದುಕು ಉತ್ತಮವಾಗಲಿ ಎಂದು ವೃಷಬೇಂದ್ರಯ್ಯ ಉಪನಿರ್ದೇಶಕರು (ಅಭಿವೃದ್ಧಿ) ಶಾಲಾ ಶಿಕ್ಷಣ ಇಲಾಖೆ ಯಾದಗಿರಿ ತಿಳಿಸಿದರು.

ನಗರದ ಬಾಲಕರ ಪ್ರೌಢಶಾಲೆ ಆವರಣದಲ್ಲಿ ಮಲ್ಲನಗೌಡ ಬಿರಾದಾರ ಅವರ ವಯೋನಿವೃತ್ತಿ ಸಮಾರಂಭದಲ್ಲಿ ಮುಖ್ಯ ಅತಿಥಿಗಳಾಗಿ ಪಾಲ್ಗೊಂಡು ಮಾತನಾಡಿದ ಅವರು, ಶಿಕ್ಷಣ ಇಲಾಖೆಯ ಕರ್ತವ್ಯ ವಿದ್ಯಾರ್ಥಿಗಳ ಉಜ್ವಲ ಭವಿಷ್ಯ ರೂಪಿಸುವ ಜವಾಬ್ದಾರಿಯುತ ಕಾರ್ಯವಾಗಿದ್ದು, ಇಲಾಖೆಯೊಂದಿಗೆ ಸಮನ್ವಯತೆ, ಶಿಕ್ಷಕರೊಂದಿಗೆ ಉತ್ತಮ ಒಡನಾಟ ಮತ್ತು ಸತತ ಪರಿಶ್ರಮದೊಂದಿಗೆ ಕಾರ್ಯನಿರ್ವಹಿಸಿ ಸರ್ವರಿಗೂ ಮಾದರಿಯಾಗಿದ್ದಾರೆ ಎಂದರು.

ವಿಶ್ರಾಂತ ಉಪನಿರ್ದೇಶಕ ಶಾಂತಗೌಡ ಪಾಟೀಲ ಪ್ರಾಸ್ತಾವಿಕವಾಗಿ ಮಾತನಾಡಿ, ಕನ್ನಡ ಪಂಡಿತರಾದ ಮಲ್ಲಣಗೌಡರು ಮೃದು ಸ್ವಭಾವದ ವ್ಯಕ್ತಿ, ಅವರ ಕಾರ್ಯಕ್ಷಮತೆ ಮೆಚ್ಚುವಂಥದ್ದು. ನಿವೃತ್ತಿಯ ನಂತರ ಅವರ ವೇಳಾಪತ್ರಿಕೆ ಬದಲಾಗಲಿದ್ದು, ಗುಣಮಟ್ಟದ ಶೈಕ್ಷಣಿಕ ಸುಧಾರಣೆಗೆ ಅವರ ಕಾಳಜಿ ಇರಲಿ ಎಂದರು.

ಬಿಈಓ ವಾಯ್.ಎಸ್.ಹರಗೆ ಮಾತನಾಡಿ, ಇಲಾಖೆಯ ಕಾರ್ಯಕ್ಕೆ ಸದಾ ಮಾರ್ಗದರ್ಶನ ಮಾಡಿದ್ದು ಅದು ನಿರಂತರವಾಗಿರಲಿ, ಅವರ ಸಲಹೆ ಸರ್ವರಿಗೂ ಪ್ರೇರಣೆ ಎಂದರು.

ತಾಪಂ ಕಾರ್ಯನಿರ್ವಹಣಾಧಿಕಾರಿ ಬಸವರಾಜ ಶರಬೈ, ಶಿಕ್ಷಕರಾದ ರಾಮಕೃಷ್ಣ ಕಟ್ಟಾವಲ್ಲಿ, ಸಿದ್ದಪ್ಪ. ಎಂ ಶಿಕ್ಷಕರು, ಅಂಬ್ರೇಶ ಅವರು ಮಾತನಾಡಿದರು. ನಿವೃತ್ತರಾದ ಮಲ್ಲನಗೌಡ ಅಭಿನಂದನೆ ಸ್ವೀಕರಿಸಿ ಮಾತನಾಡಿದ ಅವರು ಸರ್ವರೂ ನೀಡಿದ ಸಹಕಾರ ಎಂದು ಮರೆಯುವಂತಿಲ್ಲ ಎಂದರು.

ಕಾರ್ಯಕ್ರಮವನ್ನು ಜಿಲ್ಲಾ ಸಹಕಾರಿ ಒಕ್ಕೂಟದ ಅಧ್ಯಕ್ಷ ವಿಶ್ವನಾಥರೆಡ್ಡಿ ದರ್ಶನಾಪುರ ಉದ್ಘಾಟಿಸಿದರು, ವೇದಿಕೆಮೇಲೆ ಬಿಈಓ ಹೆಚ್.ಬಿ.ರಾಠೋಡ, ಸಮನ್ವಯಾಧಿಕಾರಿ ರೇಣುಕಾ ಪಾಟೀಲ, ಹೆಚ್.ಎಸ್.ಸೋಮಪುರ, ಶಿವಲಿಂಗಪ್ಪ, ಎಸ್ಡಿಎಂಸಿ ಅಧ್ಯಕ್ಷೆ ಸೌಭಾಗ್ಯ, ಭೀಮನಗೌಡ ತಳೆವಾಡ, ಲಕ್ಷ್ಮಣ ಲಾಳಸೇರಿ, ಮುಖ್ಯಗುರು ತಿಪ್ಪಣ್ಣ ಧೋತ್ರೆ, ಬಿಸಿಎಂ ಅಧಿಕಾರಿ ಮಲ್ಲನಗೌಡ.ಹೆಚ್.ಎಸ್.ಬಿರಾದಾರ ಮಹಾದೇವಪ್ಪ ಸಾಲಿಮನಿ, ಸೇರಿದಂತೆ ಪ್ರಮುಖರು ಇದ್ದರು. ಇದೇ ಸಂದರ್ಭದಲ್ಲಿ ಅಧಿಕಾರಿಗಳು, ಶಿಕ್ಷಕರು, ಅಭಿಮಾನಿಗಳು, ಶಿಷ್ಯ ಸಮೂಹ ಮತ್ತು ಗ್ರಾಮಸ್ಥರು ವಯೋನಿವೃತ್ತಿ ಹೊಂದಿದ ಉಪಪ್ರಾಂಶುಪಾಲ ಮಲ್ಲನಗೌಡ ಬಿರಾದಾರ ದಂಪತಿಗೆ ಆತ್ಮೀಯವಾಗಿ ಗೌರವಿಸಿ ಸನ್ಮಾನಿಸಲಾಯಿತು.

# ಹೆಚ್ಚೆಚ್ಚು ಗಿಡ ನೆಟ್ಟು ಅಭಿಯಾನ ಯಶಸ್ವಿಗೊಳಿಸಿ



ಮಲ್ಲಮ್ಮ ನುಡಿ ವಾರ್ತೆ

ಭಾಲ್ಕಿ: ತಾಲೂಕಿನಲ್ಲಿ ಡಾ.ಶ್ಯಾಮ್ ಪ್ರಸಾದ ಮುಖರ್ಜಿ ಅವರ ಪುಣ್ಯತಿಥಿ ಮತ್ತು ಜನ್ಮದಿನ ಆಚರಣೆ ಅಂಗವಾಗಿ ತಾಲೂಕು ಬಿಜೆಪಿ ವತಿಯಿಂದ ಏಕ್ ಪೇಡ್ ಮಾ ಕೆ ನಾಮ್(ಒಂದು ಗಿಡ ತಾಯಿ ಹೆಸರಿನಲ್ಲಿ) ಅಭಿಯಾನಕ್ಕೆ ಚಾಲನೆ ನೀಡಲಾಯಿತು.

ಪಟ್ಟಣದ ಗುರುಪ್ರಸನ್ನ ಪದವಿ ಕಾಲೇಜಿನ ಆವರಣದಲ್ಲಿ ಸೋಮವಾರ ಮಾಜಿ ಶಾಸಕ ಪ್ರಕಾಶ ಖಂಡ್ರೆ ಅವರು ಸಸಿಗಳನ್ನು ನೆಡುವ ಮೂಲಕ ಅಭಿಯಾನಕ್ಕೆ ಚಾಲನೆ ನೀಡಿದರು.

ನಂತರ ಮಾತನಾಡಿದ ಅವರು, ಪಕ್ಷದ ಎಲ್ಲ ಕಾರ್ಯಕರ್ತರು ಹೆಚ್ಚೆಚ್ಚು ಗಿಡಗಳನ್ನು ನೆಡುವ ಮೂಲಕ ಅಭಿಯಾನದಲ್ಲಿ ಭಾಗವಹಿಸಬೇಕು. ಸ್ವಚ್ಛತಾ ಮತ್ತು ಪ್ಲಾಸ್ಟಿಕ್ ಮುಕ್ತ ಕಾರ್ಯಕ್ರಮಗಳನ್ನು ಕೂಡ ಕಾರ್ಯಕರ್ತರು ನಡೆಸಬೇಕು ಎಂದು ತಿಳಿಸಿದರು.

ಈ ಸಂದರ್ಭದಲ್ಲಿ ತಾಲೂಕು ಬಿಜೆಪಿ ಅಧ್ಯಕ್ಷ ವೀರಣ್ಣ ಕಾರಬಾರಿ, ಮಾಜಿ ಅಧ್ಯಕ್ಷ ಗೋವಿಂದರಾವ ಬಿರಾದಾರ್, ಪ್ರಮುಖರಾದ ಬಾಬುರಾವ ಧೂಪೆ, ಪಂಡರಿ ಮೇತ್ರೆ ಸೇರಿದಂತೆ ಹಲವರು ಇದ್ದರು.

# ಸರ್ಕಾರಿ ಕರ್ತವ್ಯಕ್ಕೆ ಅಡ್ಡಿ: ಇಬ್ಬರ ಬಂಧನ





ಮಲ್ಲಮ್ಮ ನುಡಿ ವಾರ್ತೆ


ಕಲಬುರಗಿ,ಜೂ.23:ಸರ್ಕಾರಿ ಕರ್ತವ್ಯಕ್ಕೆ ಅಡ್ಡಿಪಡಿಸಿ ಸಾಮಾಜಿಕ ಜಾಲತಾಣದಲ್ಲಿ ವಿಡಿಯೋ ಹರಿಬಿಟ್ಟ ಇಬ್ಬರನ್ನು ರಾಘವೇಂದ್ರ ನಗರ ಠಾಣೆ ಪೊಲೀಸರು ಬಂಧಿಸಿದ್ದಾರೆ.

ಬಿದ್ದಾಪುರ ಕಾಲೋನಿಯ ಮಲ್ಲಿನಾಥ ತಂದೆ ತಿಪ್ಪಣ್ಣ (30) ಮತ್ತು ಕರುಣೇಶ್ವರ ನಗರದ ಅಯ್ಯನಗೌಡ ಅಲಿಯಾಸ್ ಆಕಾಶ್ ತಂದೆ ಸಿದ್ದಣ್ಣ(26) ಎಂಬುವವರನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದ್ದಾರೆ.

ಇವರು ಜೂ.18 ರಂದು ನಗರದ ಸಂಗಮೇಶ್ವರ ಕಾಲೋನಿಯಲ್ಲಿರುವ ಶಂಕರ ಮಠಕ್ಕೆ ಸಂವಾದ ಕಾರ್ಯಕ್ರಮದಲ್ಲಿ ಭಾಗವಹಿಸಲು ರಾಷ್ಟ್ರೀಯ ಹಿಂದೂ ಪರಿಷತ್ ಅಧ್ಯಕ್ಷ ಪ್ರವೀಣ್ ತೊಗಾಡಿಯಾ ಅವರು ಆಗಮಿಸಲಿದ್ದ ಹಿನ್ನೆಲೆಯಲ್ಲಿ ಬಂದೋಬಸ್ತಗಾಗಿ ನಿಯೋಜಿಸಿದ್ದ ಪೊಲೀಸ್ ಸಿಬ್ಬಂದಿಯ ಕರ್ತವ್ಯಕ್ಕೆ ಅಡ್ಡಿ ಪಡಿಸಿದಲ್ಲದೆ ವಿಡಿಯೋ ಚಿತ್ರೀಕರಣ ಮಾಡಿ ಸಾಮಾಜಿಕ ಜಾಲತಾಣದಲ್ಲಿ ಹರಿಬಿಟ್ಟಿದ್ದರು. ಈ ಸಂಬಂಧ ರಾಘವೇಂದ್ರ ನಗರ ಪೊಲೀಸ್ ಠಾಣೆ ಎಎಸ್ಐ ಮಲ್ಲಿಕಾರ್ಜುನ ಗೌರ ಅವರು ರಾಘವೇಂದ್ರ ನಗರ ಪೊಲೀಸ್ ಠಾಣೆಯಲ್ಲಿ ದೂರು ಸಲ್ಲಿಸಿದ್ದರು.

ಈ ದೂರಿನ ಅನ್ವಯ ಡಿಸಿಪಿಗಳಾದ ಕನಿಕಾ ಸಿಕ್ರಿವಾಲ್, ಪ್ರವೀಣ್ ಹೆಚ್.ನಾಯಕ ಅವರ ಮಾರ್ಗದರ್ಶನದಲ್ಲಿ ಕಲಬುರಗಿ ದಕ್ಷಿಣ ಉಪ ವಿಭಾಗದ ಸಹಾಯಕ ಪೊಲೀಸ್ ಆಯುಕ್ತ ಶರಣಬಸಪ್ಪ ಸುಬೇದಾರ ಅವರ ನೇತೃತ್ವದಲ್ಲಿ ರಾಘವೇಂದ್ರನಗರ ಪೊಲೀಸ್ ಠಾಣೆ ಪಿಐ ಕುಬೇರ ಎಸ್.ರಾಯಮಾನೆ, ಎಎಸ್ಐ ಮಲ್ಲಿಕಾರ್ಜುನ ಜಾನೆ, ಸಿಬ್ಬಂದಿಗಳಾದ ಆತ್ಮಕುಮಾರ, ಸಂತೋಷಕುಮಾರ, ಶರಣಬಸವ ಸ್ವಾಮಿ ಅವರನ್ನು ಒಳಗೊಂಡ ತಂಡ ತನಿಖೆ ನಡೆಸಿ ಆರೋಪಿಗಳನ್ನು ಬಂಧಿಸಿ ನ್ಯಾಯಾಂಗ ಬಂಧನಕ್ಕೆ ಒಪ್ಪಿಸಿದೆ.

# ಸರ್ಕಾರಿ ಜಾಗದಲ್ಲಿದ್ದ ಮರ ಕಡಿದ ಗ್ರಾಪಂ ಸದಸ್ಯ



ಮಲ್ಲಮ್ಮ ನುಡಿ ವಾರ್ತೆ

ಬೀದರ. ಜೂ. 23 : ಸರ್ಕಾರಿ ಜಾಗದಲ್ಲಿದ್ದ ಮರಗಳನ್ನು ಅಕ್ರಮವಾಗಿ ಕಡಿದ ಆರೋಪದ ಹಿನ್ನೆಲೆಯಲ್ಲಿ ಗ್ರಾಮ ಪಂಚಾಯತಿ ಸದಸ್ಯನ ವಿರುದ್ಧ ಕೇಸು ದಾಖಲಾಗಿದೆ.

ಹುಲಸೂರು ತಾಲೂಕಿನ ಸೋಲದಾಬಕಾ ಗ್ರಾಮದಲ್ಲಿ ಈ ಘಟನೆ ನಡೆದಿದೆ. ನಿತೇಶ್ ವೆಂಕಟರಾವ್ ಬಿರಾದಾರ ಎಂಬುವವರ ವಿರುದ್ಧ ಕೇಸು ದಾಖಲಾಗಿದೆ. 13 ಟಿಂಬರ್ ಮರಗಳನ್ನು ಅಕ್ರಮವಾಗಿ ಕಡಿದ ಆರೋಪದ ಹಿನ್ನೆಲೆಯಲ್ಲಿ ಎಫ್ ಐಆರ್ ದಾಖಲಾಗಿದೆ. 109 ಸಣ್ಣ ಗಿಡಗಳನ್ನು ಹಾಳು ಮಾಡಿದ್ದಾರೆ ಎನ್ನಲಾಗಿದೆ. ಜಮೀನು ಪಕ್ಕದ ನಾಲಾಕ್ಕೆ ಹೊಂದಿಕೊಂಡಿದ್ದ ಮರಗಳನ್ನು ಅಕ್ರಮವಾಗಿ ಕಡಿದ್ದಾರೆ ಎನ್ನಲಾಗಿದೆ. ಸುಮಾರು ಎರಡು ಟನ್‌ನಷ್ಟು ಟಿಂಬರ್ ಹಾಳು ಮಾಡಿರುವ ಆರೋಪ ಕೇಳಿ ಬಂದಿದೆ. ಏಕೆಖ 1969ರಡಿ ಹುಲಸೂರು ಪ್ರಾದೇಶಿಕ ವಲಯದಲ್ಲಿ ಪ್ರಕರಣ ದಾಖಲಾಗಿದ್ದು, ತನಿಖೆ ನಡೆದಿದೆ.

# ರಕ್ತ ಹರಿಸಿಯಾದರೂ ಮೀಸಲಾತಿ ಪಡೆಯುವೆ:ಬಸವಜಯ ಶ್ರೀಗಳು



ಮಲ್ಲಮ್ಮ ನುಡಿ ವಾರ್ತೆ

ಬಾಗಲಕೋಟೆ,ಜೂ.23–ಸರಕಾರದ ಲಾಠಿ ಏಟಿಗೆ ಹೆದರದೇ ರಕ್ತ ಹರಿಸಿಯಾದರೂ ಪಂಚಮಸಾಲಿ 2 ಎ ಮೀಸಲಾತಿ ಪಡೆಯುತ್ತೇವೆ ಎಂದು ಕೂಡಲಸಂಗಮದ ಪಂಚಮಸಾಲಿ ಪೀಠದ ಬಸವಜಯ ಮೃತ್ಯುಂಜಯ ಸ್ವಾಮೀಜಿ ಹೇಳಿದ್ದಾರೆ.

ಜಿಲ್ಲೆಯ ರಬಕವಿ–ಬನಹಟ್ಟಿ ತಾಲೂಕಿನ ರಾಂಪುರದ ದಾನೇಶ್ವರಿ ಕಲ್ಯಾಣ ಮಂಟಪದಲ್ಲಿ ವೀರಶೈವ ಲಿಂಗಾಯತ ಪಂಚಮಸಾಲಿ ಸಮಾಜ ಕ್ಷೇಮಾಭಿವೃದ್ಧಿ ಸಂಘ ಹಾಗೂ ಪಂಚಮಸಾಲಿ ಸಮಾಜದ ಸಮಸ್ತ ಬಾಂಧವರ ಆಶ್ರಯದಲ್ಲಿ ಎಸ್ಎಸ್ಎಲ್‌ಸಿ ಹಾಗೂ ಪಿಯುಸಿ ಪರೀಕ್ಷೆಯಲ್ಲಿ ಶೇ.90ಕ್ಕಿಂತ ಅಧಿಕ ಅಂಕ ಗಳಿಸಿದ ಸಮಾಜದ ವಿದ್ಯಾರ್ಥಿಗಳಿಗೆ ರಾಣಿ ಚೆನ್ನಮ್ಮ ಪ್ರತಿಭಾ ಪುರಸ್ಕಾರ ಹಾಗೂ ವಿವಿಧ ಕ್ಷೇತ್ರಗಳಲ್ಲಿ ಸಾಧನೆಗೈದ ಸಮಾಜದ ಸಾಧಕರಿಗೆ ಹಮ್ಮಿಕೊಂಡಿದ್ದ ಸನ್ಮಾನ ಸಮಾರಂಭದಲ್ಲಿ ಶ್ರೀಗಳು ಮಾತನಾಡಿದರು.

ಜಾತಿ ಗಣತಿಯಲ್ಲಿ ಕಡ್ಡಾಯವಾಗಿ ಜಾತಿ ಕಾಲಂನಲ್ಲಿ ಪಂಚಮಸಾಲಿ ಎಂದು ಬರೆಸಬೇಕು ಎಂದು ಹೇಳಿದ ಪೂಜ್ಯರು, ಗಳಿಸಿದ ಸಂಪತ್ತನ್ನು ಬಡ ಪ್ರತಿಭಾವಂತ ವಿದ್ಯಾರ್ಥಿಗಳಿಗೆ ದಾನ ಮಾಡಿದಲ್ಲಿ ಅದು ಶ್ರೇಷ್ಠ ದಾನವಾಗುತ್ತದೆ ಎಂದರು.

ವಿಧಾನ ಪರಿಷತ್ ಸದಸ್ಯ ಹನುಮಂತ ನಿರಾಣಿ ಮಾತನಾಡಿ, ಸನ್ಮಾನಗಳು ಸಾಧನೆಗೆ ಅಂತ್ಯವಲ್ಲ. ಬದಲಾಗಿ ಅದು ಮುಂದಿನ ಜವಾಬ್ದಾರಿಯಾಗಿದೆ.

ಮಕ್ಕಳ ಸರ್ವಾಂಗೀಣ ಅಭಿವೃದ್ಧಿಗೆ ಪಾಲಕರ ಪಾತ್ರ ಪ್ರಮುಖವಾಗಿದೆ. ಮಕ್ಕಳಿಗೆ ಸಂಸ್ಕಾರ, ಸಂಸ್ಕೃತಿಯ ಜ್ಞಾನವನ್ನು ನೀಡಬೇಕು ಎಂದು ಹೇಳಿದರು.

ಶ್ರೀಶೈಲ ದಲಾಲ, ಧರೆಪ್ಪ ಸಾಂಗ್ಲಿಕರ, ಪುಂಡಲಿಕ ಪಾಲಬಾವಿ, ಬಾಬುಗೌಡ ಪಾಟೀಲ, ವಿದ್ಯಾದರ ಸವದಿ, ಬಸವರಾಜ ಹಣಗಂಡಿ, ಲಕ್ಕಪ್ಪ ಪಾಟೀಲ, ಚಂದ್ರಶೇಖರ ಆದಬಸಪ್ಪಗೋಳ, ಲಕ್ಷ್ಮಣ ನಿಂಬರಗಿ, ಪರಪ್ಪ ಉರಬಿನ್ನವರ ಸೇರಿದಂತೆ ತೇರದಾಳ ಮತಕ್ಷೇತ್ರದ ಪಂಚಮಸಾಲಿ ಸಮಾಜದ ಹಿರಿಯರು ಭಾಗವಹಿಸಿದ್ದರು.

# ಜಿಲ್ಲಾ ಉಸ್ತುವಾರಿ ಸಚಿವರ ಪ್ರವಾಸ

ಮಲ್ಲಮ್ಮ ನುಡಿ ವಾರ್ತೆ

ಕಲಬುರಗಿ,ಜೂ.23:ರಾಜ್ಯದ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್‌ರಾಜ್ ಹಾಗೂ ಮಾಹಿತಿ ತಂತ್ರಜ್ಞಾನ ಮತ್ತು ಜೈವಿಕ ತಂತ್ರಜ್ಞಾನ ಸಚಿವರು ಹಾಗೂ ಕಲಬುರಗಿ ಜಿಲ್ಲಾ ಉಸ್ತುವಾರಿ ಸಚಿವರಾದ ಪ್ರಿಯಾಂಕ್ ಖರ್ಗೆ ಅವರು ಬೆಂಗಳೂರಿನಿಂದ ವಿಮಾನದ ಮೂಲಕ ಜೂನ್ 24 ರಂದು ಮಂಗಳವಾರ ಮಧ್ಯಾಹ್ನ 12.05 ಗಂಟೆಗೆ ಕಲಬುರಗಿಗೆ ಆಗಮಿಸುವರು.

ಅಂದು ಮಧ್ಯಾಹ್ನ 12.30 ಗಂ–ಟೆಗೆ ಕಲಬುರಗಿಯಲ್ಲಿ ನಿಗದಿತ ಕಾರ್ಯಕ್ರಮಗಳಲ್ಲಿ ಭಾಗವಹಿಸುವರು. ನಂತರ ಕಲಬುರಗಿಯಲ್ಲಿ ವಾಸ್ತವ್ಯ ಮಾಡುವರು.

ಜೂನ್ 25ರಂದು ಬುಧವಾರ ಮಧ್ಯಾಹ್ನ 12.30 ಗಂಟೆಗೆ ಕಲಬುರಗಿಯಿಂದ ವಿಮಾನದ ಮೂಲಕ ಬೆಂಗಳೂರಿಗೆ ಪ್ರಯಾಣಿಸುವರು.

# ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾಲಯ ನಾಮಕರಣ



ಮಲ್ಲಮ್ಮ ನುಡಿ ವಾರ್ತೆ

ರಾಯಚೂರು ಜೂ 23 : ರಾಯಚೂರ ಗ್ರಾಮೀಣ ವಿಧಾನಸಭಾ ಕ್ಷೇತ್ರದಲ್ಲಿ ಅಂದಾಜು 936.00 ಕೋಟಿ ರೂ.ಗಳ ವೆಚ್ಚದಲ್ಲಿ ವಿವಿಧ ಕಾಮಗಾರಿಗಳ ಅಡಿಗಲ್ಲು ಹಾಗೂ ಉದ್ಘಾಟನೆ ನೆರವೇರಿಸಲು ಜೂನ್ 23ರಂದು ರಾಯಚೂರಗೆ ಆಗಮಿಸಿದ್ದ ವೇಳೆ ರಾಜ್ಯದ ಮುಖ್ಯಮಂತ್ರಿಗಳಾದ ಸಿದ್ಧರಾಮಯ್ಯ ಅವರು ರಾಯಚೂರ ತಾಲೂಕಿನ ಯರಗೇರಾ ಗ್ರಾಮದ ಬಳಿಯಲ್ಲಿರುವ ವಿಶ್ವವಿದ್ಯಾಲಯಕ್ಕೆ ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ನಾಮಕರಣ ಮತ್ತು ಕಂಚಿನ ಪುತ್ಥಳಿಯನ್ನು ಲೋಕಾರ್ಪಣೆ ಮಾಡಿದರು. ಇದೆ ವೇಳೆ ಅವರು, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ಉದ್ಯಾನವನ ಹಾಗೂ ಕಲ್ಯಾಣ ಕರ್ನಾಟಕ ಮಾನವ ಜಿನೋಮ್ ಅಧ್ಯಯನ ಸಂಸ್ಥೆಗೆ ಶಂಕುಸ್ಥಾಪನೆ ನೆರವೇರಿಸಿದರು.

ಈ ವೇಳೆ ವಿರೋಧ ಪಕ್ಷದ ನಾಯಕರು ಹಾಗೂ ಸಂಸದರಾದ (ರಾಜ್ಯ ಸಭೆ) ಡಾ.ಮಲ್ಲಿಕಾರ್ಜುನ ಖರ್ಗೆ, ವೈದ್ಯಕೀಯ ಶಿಕ್ಷಣ ಹಾಗೂ ಕೌಶಲ್ಯಾಭಿವೃದ್ಧಿ ಉದ್ಯಮಶೀಲತೆ ಮತ್ತು ಜೀವನೋಪಾಯ ಸಚಿವರು ಹಾಗೂ ರಾಯಚೂರು ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಶರಣಪ್ರಕಾಶ್ ರುದ್ರಪ್ಪ ಪಾಟೀಲ್, ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಇಲಾಖೆ ಸಚಿವರಾದ ಎನ್.ಎಸ್.ಭೋಸರಾಜು ಸೇರಿದಂತೆ ವಿವಿಧ ಸಚಿವರು, ಕರ್ನಾಟಕ ಮಹರ್ಷಿ ವಾಲ್ಮೀಕಿ ಪರಿಶಿಷ್ಟ ಪಂಗಡಗಳ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ರಾಯಚೂರು ಗ್ರಾಮಾಂತರ ಕ್ಷೇತ್ರದ ಶಾಸಕರಾದ ಬಸನಗೌಡ ದದ್ದಲ್, ಕರ್ನಾಟಕ ರಾಜ್ಯ ಖಾದಿ ಮತ್ತು ಗ್ರಾಮೋದ್ಯೋಗ ಮಂಡಳಿ ಅಧ್ಯಕ್ಷರು ಆಗಿರುವ ಮಸ್ಕಿ ಕ್ಷೇತ್ರದ ಶಾಸಕರಾದ ಆರ್.ಬಸನಗೌಡ ತುರವಿಹಾಳ, ಕರ್ನಾಟಕ ರಾಜ್ಯ ಕೈಗಾರಿಕಾ ಮೂಲಸೌಲಭ್ಯ ಅಭಿವೃದ್ಧಿ ನಿಗಮದ ಅಧ್ಯಕ್ಷರು ಆಗಿರುವ ಸಿಂಧನೂರು ಕ್ಷೇತ್ರದ ಶಾಸಕರಾದ ಹಂಪನಗೌಡ ಬಾದರ್ಲಿ, ರಾಯಚೂರು ಲೋಕಸಭಾ ಸದಸ್ಯರಾದ ಜಿ.ಕುಮಾರ ನಾಯಕ, ಮಾನವಿ ಕ್ಷೇತ್ರದ ಶಾಸಕರಾದ ಜಿ.ಹಂಪಯ್ಯ ನಾಯಕ, ದೇವದುರ್ಗ ಕ್ಷೇತ್ರದ ಶಾಸಕರಾದ ಕರೆಮ್ಮ ಜಿ ನಾಯಕ ಸೇರಿದಂತೆ ಇನ್ನಿತರ ಶಾಸಕರು, ವಿಧಾನ ಪರಿಷತ್ ಸದಸ್ಯರು, ರಾಯಚೂರು ಜಿಲ್ಲೆಯ ಜಿಲ್ಲಾಧಿಕಾರಿಗಳಾದ ನಿತೀಶ್ ಕೆ., ರಾಯಚೂರು ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿಗಳಾದ ರಾಹುಲ್ ತುಕಾರಾಂ ಪಾಂಡ್ವೆ, ರಾಯಚೂರು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳಾದ ಎಂ.ಪುಟ್ಟಮಾದಯ್ಯ, ಆದಿಕವಿ ಶ್ರೀ ಮಹರ್ಷಿ ವಾಲ್ಮೀಕಿ ವಿಶ್ವವಿದ್ಯಾನಿಲಯದ ಕುಲಪತಿ ಡಾ.ಸುಯಯೀಂದ್ರ ಕುಲಕರ್ಣಿ, ಕುಲಸಚಿವರಾದ ಡಾ.ಚನ್ನಪ್ಪ ಎ., ಸಿಂಡಿಕೇಟ್ ಮತ್ತು ವಿದ್ಯಾವಿಷಯಕ ಪರಿಷತ್ತಿನ ಸದಸ್ಯರು ಸೇರಿದಂತೆ ವಿಶ್ವವಿದ್ಯಾಲಯದ ವಿವಿಧ ವಿಭಾಗಗಳ ಮುಖ್ಯಸ್ಥರು, ಪ್ರಾಧ್ಯಾಪಕರು, ಸಹ ಪ್ರಾಧ್ಯಾಪಕರು, ಸಹಾಯಕ ಪ್ರಾಧ್ಯಾಪಕರು ಮತ್ತು ವಿದ್ಯಾರ್ಥಿಗಳು ಮತ್ತು ಇನ್ನಿತರರು ಇದ್ದರು.

# ಶಿರೂರು ಪುನರ್‌ವಸತಿ ಗ್ರಾಮದಲ್ಲಿ ದಿ. ಕೆ.ಎಚ್.ಪಾಟೀಲ್ ರವರ ಮೂರ್ತಿ ಅನಾವರಣ



ಮಲ್ಲಮ್ಮ ನುಡಿ ವಾರ್ತೆ

ಕೊಪ್ಪಳ :ಜೂ.23: ಕೆ.ಎಚ್. ಪಾಟೀಲ್ ಅವರು ತಮ್ಮ ಗೌಡಿಕೆಯನ್ನು ಮೀರಿ ಜನ ಸಮುದಾಯದ ಜೊತೆಗೆ ಗುರುತಿಸಿಕೊಳ್ಳುವುದರ ಜೊತೆಗೆ ಅವರು ಜನರ ಕಷ್ಟಗಳಿಗೆ ಸ್ಪಂದಿಸುವ ಹುಟ್ಟು ಹೋರಾಟಗಾರರಾಗಿದ್ದರು ಎಂದು ಗೃಹ ಸಚಿವರಾದ ಡಾ. ಜಿ.ಪರಮೇಶ್ವರ ಹೇಳಿದರು.

ಅವರು ರವಿವಾರ ಕೊಪ್ಪಳ ಜಿಲ್ಲೆ ಕುಕನೂರು ತಾಲ್ಲೂಕಿನ ಶಿರೂರ ಪುನರವಸತಿ ಗ್ರಾಮದಲ್ಲಿ ಕರ್ನಾಟಕ ನೀರಾವರಿ ನಿಗಮ ನಿಯಮಿತವತಿಯಿಂದ ಹಮ್ಮಿಕೊಂಡಿದ್ದ ಮಾಜಿ ಸಚಿವರಾಗಿದ್ದ ದಿ. ಕೆ.ಎಚ್. ಪಾಟೀಲ್ ಅವರ ಮೂರ್ತಿ ಅನಾವರಣ ಕಾರ್ಯಕ್ರಮ ನೆರವೇರಿಸಿ ಮಾತನಾಡಿದರು.

ರಾಜಕಾರಣದಲ್ಲಿ ಬಹಳ ವರ್ಷಗಳ ಕಾಲ ಜನ ಸಮುದಾಯದಲ್ಲಿ ಉಳಿದ ಕೆ.ಎಚ್. ಪಾಟೀಲ್ ಅವರ ಮೂರ್ತಿಯನ್ನು ಇಂದು ಸಂತೋಷದಿಂದ ಅನಾವರಣಗೊಳಿಸಿದ್ದೇನೆ. ನಾನು ಮೊದಲ ಬಾರಿ ಶಾಸಕನಾಗಿದ್ದಾಗ ಕೆ.ಎಚ್. ಪಾಟೀಲ್ ಅವರು ಕಂದಾಯ ಸಚಿವರಾಗಿದ್ದರು. ಯುವ ಉತ್ಸಾಹದ ಹೊಸ ಶಾಸಕರನ್ನು ಅವರು ಪ್ರೀತಿಯಿಂದ ಮಾತನಾಡಿಸುವುದರ ಜೊತೆಗೆ ನಮಗೆ ಪ್ರೋತ್ಸಾಹಿಸುತ್ತಿದ್ದರು. ಜನರ ಕಷ್ಟಗಳನ್ನು ದೂರ ಮಾಡುವ ಸಲುವಾಗಿ ಅವರು ಸಹಕಾರಿ ಕ್ಷೇತ್ರ. ಸಾಮಾಜಿಕ. ಆರ್ಥಿಕ ಕ್ಷೇತ್ರದ ಅಭಿವೃದ್ಧಿಗೆ ಒತ್ತು ನೀಡಿದರು ಎಂದರು.

ಮೂರ್ತಿಗಳು ನೋಡಿದಾಗ ಸ್ಫೂರ್ತಿಯಾಗುತ್ತದೆ. ಇಂದಿರಾಗಾಂಧಿ ಅವರ ಮೂರ್ತಿ ನೋಡಿದರೆ ಅವರು ಬಡವರಿಗಾಗಿ ಹಲವಾರು ಯೋಜನೆ ಜಾರಿಗೆ ತಂದರು ಎಂದು ನೆನೆಸುತ್ತೇವೆ. ಡಿ.ದೇವರಾಜ ಅರಸು ಅವರ ಮೂರ್ತಿ ನೋಡಿದರೆ ಅವರು ಧ್ವನಿ ಇಲ್ಲದವರಿಗೆ ಧ್ವನಿಯಾಗಿ ಕೆಲಸ ಮಾಡಿದರು ಎಂಬುದು ಹೇಗೆ ನೆನಪಿಗೆ ಬರುತ್ತದೆಯೊ ಹಾಗೆ ಕೆ.ಎಚ್. ಪಾಟೀಲ್ ಅವರ ಪ್ರತಿಮೆ ನೋಡಿದರೆ ಅವರ ಶಿಸ್ತಿನ ಶಿಫಾಯಿ ಹಾಗೂ ಹುಟ್ಟು ಹೋರಾಟಗಾರಿಕೆ ನೆನಪಿಗೆ ಬರುತ್ತದೆ ಎಂದು ಹೇಳಿದರು.

ರಾಜ್ಯ ಸರ್ಕಾರ 2 ವರ್ಷದಲ್ಲಿ ಅನೇಕ ಅಭಿವೃದ್ಧಿ ಯೋಜನೆಗಳನ್ನು ಅನುಷ್ಠಾನ ಮಾಡುತ್ತಿದೆ. ಗ್ಯಾರಂಟಿ ಯೋಜನೆಗಳಿಗೆ ಪ್ರತಿ ವರ್ಷ 52 ಸಾವಿರ ಕೋಟಿ ರೂ. ಹಣವನ್ನು ನಮ್ಮ ಸರ್ಕಾರ ಖರ್ಚು ಮಾಡುತ್ತಿದೆ. ಜನಸಮುದಾಯಕ್ಕೆ ಉತ್ತಮ ಆಡಳಿತ ನೀಡುವ ಸರ್ಕಾರ ಅದೇ ಒಳ್ಳೆಯ ಸರ್ಕಾರ. ಇನ್ನೂ 2 ವರ್ಷ 8 ತಿಂಗಳಲ್ಲಿ ನಮ್ಮ ಸರ್ಕಾರ ಅನೇಕ ಉತ್ತಮ ಯೋಜನೆಗಳನ್ನು ಜಾರಿ ಮಾಡಲಿದೆ. ಈ ವರ್ಷದ ಬಜೆಟನಲ್ಲಿ ಸರ್ಕಾರ ನೀರಾವರಿಗಾಗಿ 22 ಸಾವಿರ ಕೋಟಿ ರೂ. ಹಣವನ್ನು ಮೀಸಲಿಟ್ಟಿದೆ ಎಂದು ಹೇಳಿದರು.

ಆಡಳಿತ ಸುಧಾರಣಾ ಆಯೋಗದ ಅಧ್ಯಕ್ಷರಾದ ಆರ್.ವಿ.ದೇಶಪಾಂಡೆ ಅವರು ಮಾತನಾಡಿ, ನಾನು ಮತ್ತು ಭೋಸರಾಜು ಅವರು ಕೆ.ಎಚ್ ಪಾಟೀಲ್ ಅವರ ಜೊತೆಗೆ ಕೆಲಸ ಮಾಡಿದ್ದೇವೆ. ಅವರು ಒಳ್ಳೆಯ ಆಡಳಿತಗಾರರಾಗಿದ್ದರು. ಅವರು ಪಾರದರ್ಶಕ ಆಡಳಿತಕ್ಕೆ ಹೆಚ್ಚಿನ ಮಹತ್ವ ನೀಡುತ್ತಿದ್ದರು. ಕಾಂಗ್ರೆಸ್ ಪಕ್ಷದ ಅಧ್ಯಕ್ಷರಾಗಿದ್ದ ಸಂದರ್ಭದಲ್ಲಿ ಪಕ್ಷಕ್ಕೆ ಹೆಚ್ಚಿನ ಶಕ್ತಿ ತುಂಬುವ ಕೆಲಸ ಅವರು ಮಾಡಿದ್ದಾರೆ. ತಮ್ಮ ಸರಳ ವ್ಯಕ್ತಿತ್ವದ ಜೊತೆಗೆ ಆಡಳಿತದಲ್ಲಿ ಹಿಡಿತ ಉಳ್ಳವರಾಗಿದ್ದರು. ಕೃಷಿ. ಸಹಕಾರ ಮತ್ತು ಗ್ರಾಮೀಣಾಭಿವೃದ್ಧಿ ಕ್ಷೇತ್ರದಲ್ಲಿ ಒಳ್ಳೆಯ ಕೆಲಸ ಮಾಡಿದ್ದರು. ಕೆ.ಎಚ್. ಪಾಟೀಲ್ ಅವರನ್ನು ಹುಲಕೋಟಿಯ ಹುಲಿ ಎಂದೆ ಕರೆಯುತ್ತಿದ್ದರು ಎಂದು ಹೇಳಿದರು.

ಕಾನೂನು, ನ್ಯಾಯ, ಮಾನವ ಹಕ್ಕುಗಳು, ಸಂಸದೀಯ ವ್ಯವಹಾರ, ಶಾಸನರಚನೆ ಹಾಗೂ ಪ್ರವಾಸೋದ್ಯಮ ಸಚಿವರಾದ ಹೆಚ್.ಕೆ. ಪಾಟೀಲ್ ಅವರು ಮಾತನಾಡಿ, ಶಿರೂರ ಗ್ರಾಮದಲ್ಲಿ ಕೆ.ಹೆಚ್.ಪಾಟೀಲ್ ರವರ ಮೂರ್ತಿಯನ್ನು ಸುಂದರವಾಗಿ ಪ್ರತಿಷ್ಠಾಪನೆ ಮಾಡಿರುವುದು ನನಗೆ ಸಂತಸ ತಂದಿದೆ. ಹತ್ತಿ ಮಾರುವುದಕ್ಕಾಗಿ ರೈತರಿಗೆ ಬಹು ದೊಡ್ಡ ಸವಾಲಾಗಿದ್ದ ಸಂದರ್ಭದಲ್ಲಿ ಕೆ.ಹೆಚ್.ಪಾಟೀಲ್ ರವರು ಸಹಕಾರಿ ಕ್ಷೇತ್ರದ ಮುಖಾಂತರ ಹತ್ತಿ ಮಿಲ್‌ಗಳನ್ನು ಪ್ರಾರಂಭ ಮಾಡಿ ರೈತರಿಗೆ ರಕ್ಷಣೆ ಮಾಡಿದರು. ಸಾಮಾಜಿಕ ನ್ಯಾಯವನ್ನು ಒದಗಿಸಲು ಸಹಕಾರ ಕ್ಷೇತ್ರದ ಮೂಲಕ ಹೋರಾಟ ಮಾಡಿರುವ ಅವರನ್ನು ನೆನಪಿಸುವಂತಹ ಕಾರ್ಯವನ್ನು ಶಿರೂರು ಗ್ರಾಮದಲ್ಲಾಗಿದೆ. ನಮ್ಮ ತಂದೆ ಕೆ.ಹೆಚ್.ಪಾಟೀಲ್ ಅವರ ಬಗ್ಗೆ ಎಲ್ಲರು ತಮ್ಮ ಸಂಪರ್ಕ ಅನುಭವವನ್ನು ಹಂಚಿಕೊಂಡಿದ್ದಾರೆ ಎಂದರು. ವೀರಾಪೂರ, ಮುತ್ತಾಳ, ಮುದ್ಲಾಪುರ, ಶಿರೂರು ಸೇರಿದಂತೆ ಯಲಬುರ್ಗಾ ಕ್ಷೇತ್ರದಲ್ಲಿಂದು ಸಾಕಷ್ಟು ಅಭಿವೃದ್ಧಿಯಾಗಿದೆ. ಕಳೆದ 25, 30 ವರ್ಷಗಳ ಹಿಂದೆ ಯಲಬುರ್ಗಾ ಕ್ಷೇತ್ರವು ತೀರಾ ಹಿಂದುಳಿದ ಪ್ರದೇಶವಾಗಿತ್ತು. ಇಲ್ಲಿಯ ಜನರು ಆಸ್ಪತ್ರೆ, ಶಿಕ್ಷಣ ಕಲಿಕೆಗೆ ಹಾಗೂ ಹತ್ತಿಯಂತಹ ರೈತರ ಕೃಷಿ ಬೆಳೆಗಳನ್ನು ಮಾರಲು ಸಹ ಗದಗ ಜಿಲ್ಲೆಗೆ ಬರಬೇಕಾಗಿತ್ತು. ಬಸವರಾಜ ರಾಯರೆಡ್ಡಿಯವರು ಶಾಸಕರಾದ ನಂತರ ಈ ಕ್ಷೇತ್ರದಲ್ಲಿ ಹಲವಾರು ವಸತಿ ನಿಲಯಗಳು, ಶಾಲೆಗಳು, ಆಸ್ಪತ್ರೆ ಹೀಗೆ ವಿವಿಧ ಅಭಿವೃದ್ಧಿ ಕಾರ್ಯಗಳಾಗಿ ಜನರ ಬದುಕಿಗೆ ಬೇಕಾಗಿರುವ ಎಲ್ಲಾ ಸೌಲಭ್ಯಗಳನ್ನು ಹೊಂದಿರುವ ಮಾದರಿ ಕ್ಷೇತ್ರ ಯಲಬುರ್ಗಾವಾಗಿದೆ. ಹೊಸ ಶಾಸಕರಾದವರಿಗೆ ಯಲಬುರ್ಗಾ ಕ್ಷೇತ್ರಕ್ಕೆ ಕರೆದುಕೊಂಡು ಬಂದು ತೋರಿಸಬೇಕು. ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳಡಿ ಯಾವುದೇ ಮಧ್ಯವರ್ತಿಗಳಿಲ್ಲದೇ ನೇರವಾಗಿ ಫಲಾನುಭವಿಗಳಿಗೆ ಸರ್ಕಾರದ ಸಹಾಯಧನ ದೊರೆಯುತ್ತಿದೆ. ಈ ಕಾರ್ಯಕ್ರಮದಿಂದ ರಾಜ್ಯದ ಬಡತನ ಪ್ರಮಾಣವು ಶೂನ್ಯಕ್ಕೆ ಬಂದಿದೆ. ರಾಜ್ಯದಲ್ಲಿ ಇದೊಂದು ದೊಡ್ಡ ಕ್ರಾಂತಿಕಾರಿಕ ಸಾಧನೆಯಾಗಿದೆ ಎಂದು ಹೇಳಿದರು.

ಕರ್ನಾಟಕ ವಿಧಾನ ಪರಿಷತ್ತಿನ ಸಭಾ ನಾಯಕರು ಹಾಗೂ ಸಣ್ಣ ನೀರಾವರಿ, ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್.ಭೋಸರಾಜು ಅವರು ಮಾತನಾಡಿ, ಕೆ.ಎಚ್ ಪಾಟೀಲ್ ಅವರು ಸಂಘಟನೆ ಹಾಗೂ ಆಡಳಿತದ ಬಗ್ಗೆ ತಿಳಿಸಲು ನಮಗೆ ಮಾರ್ಗದರ್ಶಕರಾಗಿದ್ದರು, ಯಾವುದೇ ಸಂಘಟನೆ ವಿಷಯದಲ್ಲಿ ಚರ್ಚೆ ಬಂದಾಗ ನೇರವಾಗಿ ನಮಗೆಲ್ಲ ನಿರ್ದೇಶನ ಮಾಡುತ್ತಿದ್ದರು, ರಾಜ್ಯದ ಸಚಿವರಾಗಿದ್ದಾಗ ಅಧಿಕಾರಿಗಳಿಗೂ ಸಹ ನಿರ್ದೇಶನ ಮಾಡಿ ಉತ್ತಮ ಅಭಿವೃದ್ಧಿ ಕಾರ್ಯಗಳನ್ನು ಅವರು ಮಾಡಿದ್ದಾರೆ. ನಮ್ಮ ಉತ್ತರ ಕರ್ನಾಟಕಕ್ಕೆ ಯಾವುದೇ ರೀತಿಯ ಅನ್ಯಾಯ ಅಗುವ ಸಂದರ್ಭದಲ್ಲಿ ಅದು ರಾಜಕೀಯದಲ್ಲಿ ಇರಬಹುದು ಅಥವಾ ಆಡಳಿತದಲ್ಲಿ ಇರಬಹುದು, ಅದನ್ನು ನೇರವಾಗಿ ಪ್ರತಿಭಟಿಸಿ, ಹೇಳುವ ನಾಯಕರು ಆ ಕಾಲದಲ್ಲಿ ಅವರೊಬ್ಬರೆ ಇದ್ದುದು. ರಾಜ್ಯದ ಹಿತದೃಷ್ಟಿಯ ಜೊತೆಗೆ ಈ ಭಾಗದ ಹಿತದೃಷ್ಟಿಯನ್ನು ಸಹ ಅವರು ಕಡೆಗಣಿಸಿಲ್ಲ, ಈ ಭಾಗದ ಅಭಿವೃದ್ಧಿಗೂ ಸಹ ಬಹಳ ಶ್ರಮಿಸಿದರು. ನನ್ನನ್ನು ಗುರುತಿಸಿ ರಾಜಕೀಯದಲ್ಲಿ ಪ್ರೋತ್ಸಾಹ ನೀಡಿದವರು ಯಾರಾದರು ಇದ್ದರೆ ಅದು ಕೆ.ಹೆಚ್.ಪಾಟೀಲ್ ಅವರು, ನಾನು ಇವತ್ತು ಅವರನ್ನು ಸ್ಮರಿಸುತ್ತೇನೆ ಎಂದು ಹೇಳಿದರು.

ಮುಖ್ಯಮಂತ್ರಿಗಳ ಆರ್ಥಿಕ ಸಲಹೆಗಾರರು ಹಾಗೂ ಯಲಬುರ್ಗಾ ವಿಧಾನಸಭಾ ಕ್ಷೇತ್ರದ ಶಾಸಕರಾದ ಬಸವರಾಜ ರಾಯರಡ್ಡಿ ಅವರು ಮಾತನಾಡಿ, ಕೊಪ್ಪಳ ತಾಲ್ಲೂಕಿನ ಹಿರೆಹಳ್ಳ ಡ್ಯಾಂ ನಿಂದಾಗಿ ಶಿರೂರ. ವೀರಾಪುತ. ಮುತ್ತಾಳ ಹಾಗೂ ಮುದ್ಲಾಪುರ ಗ್ರಾಮಗಳಲ್ಲಿ ಡ್ಯಾಂ ಫುಲ್ ಆದಾಗ, ಈ ಗ್ರಾಮಗಳಲ್ಲಿ ನೀರು ನಿಂತು ಬಿಡುತ್ತಿತ್ತು. 2002 ರಲ್ಲಿ ಈ ಗ್ರಾಮಗಳನ್ನು ಸ್ಥಳಾಂತರ ಮಾಡುವಂತೆ ಜನರ ಒತ್ತಾಯ ಇತ್ತು. ಇದನ್ನು ವಿಶೇಷ ಪ್ರಕರಣ ಎಂದು ತೆಗೆದುಕೊಂಡು ಶೀತ ಪ್ರದೇಶ ಎಂದು ಪರಿಗಣಿಸಿ ಧರ್ಮಸಿಂಗ್ ಅವರು ಮುಖ್ಯಮಂತ್ರಿ ಇದ್ದಾಗ 6 ಕೋಟಿ ಹಣವನ್ನು ಬಿಡುಗಡೆ ಮಾಡಿ ಭೂಮಿ ಖರೀದಿಸಿ ಈ ಗ್ರಾಮಗಳಲ್ಲಿ ಯಾರಿಂದಲೂ ಒಂದು ನ್ಯಾಯ ಪೈಸೆ ಹಣ ಪಡೆಯದೆ ಎಲ್ಲರಿಗೂ 5 ಲಕ್ಷ, 10 ಲಕ್ಷದಿಂದ ಹಿಡಿದು 50 ರಿಂದ 60 ಲಕ್ಷಗಳವಗೆರೆ ಹಣವನ್ನು ಕೊಟ್ಟ ಮೇಲೆ ಅವರು ಮನೆ ಕಟ್ಟಿಸಿಕೊಂಡರು. ಅಲ್ಲಿ ಸಿಮೆಂಟ್ ರಸ್ತೆ. ಲೈಟ್. ಬಸ್ ನಿಲ್ದಾಣ ಹೈಸ್ಕೂಲ್ ಮಾಡಿದ್ದೇವೆ ಎಂದರು.

ಕೆ.ಎಚ್. ಪಾಟೀಲ್ ಅವರು ಸರಳ ಸಜ್ಜನಿಕೆಯ ವ್ಯಕ್ತಿಯಾಗಿದ್ದು, ಅವರು ರೈತಪರ ಕಳಕಳಿ ಉಳ್ಳವರಾಗಿದ್ದರು. ಉತ್ತರ ಕರ್ನಾಟಕದಲ್ಲಿ ಇಂತಹ ಸರಳ ಸಜ್ಜನಿಕೆಯ ರಾಜಕಾರಣಿಗಳ ಸಂಖ್ಯೆ ಕಡಿಮೆ ಇದೆ. ಮುಖ್ಯಮಂತ್ರಿ ಸಿದ್ರಾಮಯ್ಯನವರಿಗೆ ಬಡವರ ಬಗ್ಗೆ ಬಹಳ ಕಾಳಜಿ ಇರುವುದರಿಂದ ಅವರು ಹಲವಾರು ಯೋಜನೆಗಳನ್ನು ಜಾರಿಗೆ ತಂದಿದ್ದಾರೆ. ಬರುವ ಮುಂದಿನ ಮೂರು ವರ್ಷ ನಮ್ಮ ಸರ್ಕಾರ ಪ್ರಾಮಾಣಿಕ ಸೇವೆ ಜನರಿಗೆ ನೀಡಲಿದೆ. ದಿ. ಕೆ.ಎಚ್. ಪಾಟೀಲ್ ಅವರ ಮೂರ್ತಿ ಅನಾವರಣ ಕಾರ್ಯಕ್ರಮಕ್ಕೆ ಆಗಮಿಸಿದ ತಮಗೆಲ್ಲರಿಗೂ ಅಭಿನಂದನೆಗಳು ಎಂದು ಹೇಳಿದರು.

ಗ್ರಾಮ ಆಡಳಿತಾಧಿಕಾರಿಗಳಿಗೆ ಲ್ಯಾಪ್‌ಟ್ಯಾಬ್ ವಿತರಣೆ: ಇದೇ ಸಂದರ್ಭದಲ್ಲಿ ಕಂದಾಯ ಇಲಾಖೆಗೆ ಸಂಬಂಧಿಸಿದ 2024–25ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿದಂತೆ ಕೊಪ್ಪಳ ಜಿಲ್ಲೆಗೆ ಮೊದಲನೇ ಹಂತದಲ್ಲಿ ಹಂಚಿಕೆಯಾದ 72 ಲ್ಯಾಪ್‌ಟ್ಯಾಬ್‌ಗಳನ್ನು ಸಾಂಕೇತಿಕವಾಗಿ ಕುಕನೂರು ಮತ್ತು ಯಲಬುರ್ಗಾ ತಾಲ್ಲೂಕಿನ ವಿವಿಧ ಗ್ರಾಮಗಳ ಗ್ರಾಮ ಆಡಳಿತಾಧಿಕಾರಿಗಳಿಗೆ ವಿತರಣೆ ಮಾಡಲಾಯಿತು.

ದಿ. ಕೆ.ಎಚ್.ಪಾಟೀಲ್ ಪುತ್ಥಳಿ ಅನಾವರಣ: ವೇದಿಕೆ ಕಾರ್ಯಕ್ರಮಕ್ಕೂ ಪೂರ್ವದಲ್ಲಿ ನಡೆದ ಮಾಜಿ ಮಂತ್ರಿಗಳಾದ ದಿ. ಕೆ.ಎಚ್.ಪಾಟೀಲ್ ರವರ ಪುತ್ಥಳಿ ಅನಾವರಣ ಸಂದರ್ಭದಲ್ಲಿ ಕರ್ನಾಟಕ ವಿಧಾನ ಪರಿಷತ್ತಿನ ಸಭಾಪತಿಯವರಾದ ಬಸವರಾಜ ಹೊರಟ್ಟಿ ಅವರು ಉಪಸ್ಥಿತರಿದ್ದರು. ಮೆರವಣಿಗೆಯಲ್ಲಿ ಕುಂಬ ಹೊತ್ತ ಮಹಿಳೆಯರು ಹಾಗೂ ಕಲಾವಿದರು ಭಾಗವಹಿಸಿದ್ದರು. ದಿ.ಕೆ.ಎಚ್.ಪಾಟೀಲ್ ರವರ ಪುತ್ಥಳಿ ನಿರ್ಮಾಣ ಮಾಡಿದ ಸಿದ್ಧಾರ್ಥ ಪಾಟೀಲ್ ದಂಪತಿಗಳಿಗೆ ಕಾರ್ಯಕ್ರಮದಲ್ಲಿ ಸನ್ಮಾನಿಸಲಾಯಿತು.

ಸಮಾರಂಭದಲ್ಲಿ ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಚಿವರು ಹಾಗೂ ಕೊಪ್ಪಳ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವರಾಜ ಎಸ್.ತಂಗಡಗಿ, ಕೊಪ್ಪಳ ಸಂಸದರಾದ ಕೆ.ರಾಜಶೇಖರ ಬಸವರಾಜ ಹಿಟ್ನಾಳ, ಮುನಿರಾಬಾದ್ ತುಂಗಭದ್ರಾ ಯೋಜನೆಯ (ಕಾಡಾ) ಅಚ್ಚುಕಟ್ಟು ಪ್ರದೇಶಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷರಾದ ಹಸನಸಾಬ ನಬಿಸಾಬ ದೋಟಿಹಾಳ, ಕೊಪ್ಪಳ ಜಿಲ್ಲಾಧಿಕಾರಿ ಸುರೇಶ ಬಿ. ಇಟ್ನಾಳ, ಜಿಲ್ಲಾ ಪಂಚಾಯತ್ ಮುಖ್ಯಕಾರ್ಯನಿರ್ವಾಹಕ ಅಧಿಕಾರಿ ವರ್ಣಿತ್ ನೇಗಿ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ. ರಾಮ್ ಎಲ್. ಅರಸಿದ್ದಿ, ಮಾಜಿ ಸಚಿವರಾದ ಅಮರೇಗೌಡ ಪಾಟೀಲ್ ಬಯ್ಯಾಪುರ, ಅಪರ ಜಿಲ್ಲಾಧಿಕಾರಿ ಸಿದ್ರಾಮೇಶ್ವರ, ಕೊಪ್ಪಳ ಉಪವಿಭಾಗಾಧಿಕಾರಿ ಕ್ಯಾಪ್ಟನ್ ಮಹೇಶ್ ಮಾಲಗಿತ್ತಿ, ಕರ್ನಾಟಕ ನೀರಾವರಿ ನಿಗಮ ನಿಯಮಿತದ ನೀರಾವರಿ ಕೇಂದ್ರ ವಲಯ ಮುನಿರಾಬಾದನ ಮುಖ್ಯ ಇಂಜಿನಿಯರ್ ಎಲ್.ಬಸವರಾಜ, ಕನೀನಿನಿ ಸಿಂಗಟಾಲೂರ ಏತ ನೀರಾವರಿ ಯೋಜನೆ ವಿಭಾಗ ನಂ.1 ಮುಂಡರಗಿಯ ಕಾರ್ಯ ನಿರ್ವಾಹಕ ಅಭಿಯಂತರರಾದ ಐ.ಪ್ರಕಾಶ, ಕನೀನಿನಿ ಸಿಂಗಟಾಲೂರ ಏತ ನೀರಾವರಿ ಯೋಜನೆ ಉಪ ವಿಭಾಗ ನಂ.3 ಅಳವಂಡಿಯ ಸಹಾಯಕ ಕಾರ್ಯಪಾಲಕ ಅಭಿಯಂತರರಾದ ರಾಘವೇಂದ್ರಚಾರ್ಯ ಜೋಶಿ, ಮಾಜಿ ಜಿ.ಪಂ. ಉಪಾಧ್ಯಕ್ಷರಾದ ಯಂಕಣ್ಣ ಯರಾಶಿ ಹಾಗೂ ಹನಮಂತಗೌಡ ಪಾಟೀಲ್, ಕುಕನೂರಿನ ಸತ್ಯನಾರಾಯಣ ಹರಪನಹಳ್ಳಿ, ಮಾಜಿ ಜಿ.ಪಂ. ಸದಸ್ಯರಾದ ಅಶೋಕ ತೋಟದ, ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಜಿಲ್ಲಾ ಉಪಾಧ್ಯಕ್ಷರಾದ ಕಾಶಿಂಸಾಬ ತಳಕಲ್, ಕುಕನೂರ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ತಾಲೂಕ ಅಧ್ಯಕ್ಷರಾದ ಸಂಗಮೇಶ ಗುತ್ತಿ ಹಾಗೂ ಶಿರೂರು ಗ್ರಾಮ ಪಂಚಾಯತ್ ಸರ್ವ ಸದಸ್ಯರು, ಯೋಜನಾ ಅನುಷ್ಠಾನ ಅಧಿಕಾರಿಗಳು ಹಾಗೂ ಸಿಬ್ಬಂದಿ ವರ್ಗ ಮತ್ತು ಶಿರೂರು ಗ್ರಾಮಸ್ಥರು ಉಪಸ್ಥಿತರಿದ್ದರು.

# ಜೂ.26 ರಂದು ಮಹಾನಗರ ಪಾಲಿಕೆ ಸಾಮಾನ್ಯ ಸಭೆ

ಮಲ್ಲಮ್ಮ ನುಡಿ ವಾರ್ತೆ ಕಲಬುರಗಿ,ಜೂ.23:ಕಲಬುರಗಿ ಮಹಾನಗರ ಪಾಲಿಕೆಯ ಸರ್ವ ಸದಸ್ಯರ ಸಾಮಾನ್ಯ ಸಭೆಯು ಮಹಾನಗರ ಪಾಲಿಕೆಯ ಮಹಾಪೌರರ ಅಧ್ಯಕ್ಷತೆಯಲ್ಲಿ ಇದೇ ಜೂನ್ 26 ರಂದು ಬೆಳಿಗ್ಗೆ 11 ಗಂಟೆಗೆ ಕಲಬುರಗಿ ಮಹಾನಗರಪಾಲಿಕೆಯ ಇಂದಿರಾ ಸ್ಮಾರಕ ಭವನ (ಟೌನ್ ಹಾಲ್) ದಲ್ಲಿ ಜರುಗಲಿದೆ ಎಂದು ಕಲಬುರಗಿ ಮಹಾನಗರ ಪಾಲಿಕೆಯ ಆಯುಕ್ತರು ತಿಳಿಸಿದ್ದಾರೆ.

Printed, Published and Owned by: Ramesh Reddy and Printed at Metropolitan Media Company Ltd., Plot No.224, in Sy.No.41/2, 41/B & 42, Kapnoor 2nd stage, Industrial Area, Kalburagi-585104. Published at Sy.No. 466, TMC No. 22-405, First Floor, Gada Complex, Opp. Inspection Bungalow, Humnabad-585330.
Editor: Ramesh Reddy, Office Ph. No: +91 9449732000.